ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 275 RNI Number : KNKAN/25/A2770 18-10-2026 Sunday Page 04, Price 2/- suddinimmuru@gmail.com Mob:-8660146563

ಸಂಪ್ರುಟ :01 ಸಂಚಿಕೆ:275 ರಾಯಚೂರು 18-10-2026 ರವಿವಾರ ಪುಟ 04 ಬೆಲೆ ರೂ.2/- Postal Reg Number:RCR/L/RNP/117/2026-28

ಕಬ್ಬಿನ ಹೋರಾಟ ಅಲ್ಲ, ಎಲ್ಲಾ ಬೆಳೆಗಳಿಗೆ ಸೂಕ್ತ ಬೆಲೆ ಕೊಡಿಸುವುದಾಗಿದೆ

ಬೆಳಗಾವಿ: ನಮ್ಮ ಹೋರಾಟ ಕೇವಲ ಕಬ್ಬು ಬೆಳೆಗಾರರ ಬೇಡಿಕೆ ಈಡೇರಿಕೆಗಾಗಿ ನಡೆಯುತ್ತಿಲ್ಲ. ಡಾ.ಎಂ.ಎಸ್. ಸ್ವಾಮಿನಾಥನ್ ಆಯೋಗದ ವರದಿ ಪ್ರಕಾರ, ಎಲ್ಲಾ ಬೆಳೆಗಳಿಗೆ ಒಳ್ಳೆಯ ಬೆಲೆ ಸಿಗುವುದಾಗಿದೆ. ತೊಗರಿ, ಹತ್ತಿ, ಸೋಯಾಬಿನ್, ಭತ್ತ, ಗೋವಿನಜೋಳ, ಶೇಂಗಾ ಸೇರಿ ಎಲ್ಲಾ ಬೆಳೆಗಳಿಗೆ ಬೆಂಬಲ ಬೆಲೆ ಸಿಗಲಿದೆ. ಈ ಬಗ್ಗೆ ಮೊನ್ನೆ ದೆಹಲಿಯಲ್ಲಿ ಕೇಂದ್ರ ಸಚಿವರ ಮುಂದೆ ಬೇಡಿಕೆ ಇಟ್ಟಿದ್ದೇವೆ. ಹಾಗಾಗಿ, ಎಲ್ಲಾ ಬೆಳೆಗಳ ಪರವಾಗಿ ನಾವು ಹೋರಾಡುತ್ತಿದ್ದೇವೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಮುಖಂಡ ಶಶಿಕಾಂತ ಗುರೂಜಿ ಸಮರ್ಥಿಸಿಕೊಂಡರು.

ನಾವೂ ನಿಮ್ಮವರೇ ಇದ್ದಿವಿ, ನಮ್ಮ ಎದುರಿಗೆ ಬಂದು ಮುಕ್ತವಾಗಿ ಮಾತನಾಡಿ. ಇಷ್ಟು ದಿನದಲ್ಲಿ, ಇಂತಿಷ್ಟು ಎಂಎಸ್‌ಪಿ ಹೆಚ್ಚಿಸುತ್ತೇವೆ. ಬೇರೆ ರಾಜ್ಯಗಳ ಮಾದರಿಯಲ್ಲಿ ಎಥೆನಾಲ್ ಖರೀದಿಸುತ್ತೇವೆ. ವೈಜ್ಞಾನಿಕವಾಗಿ ಎಫ್‌ಆರ್‌ಪಿ ಎಷ್ಟು ಹೆಚ್ಚಿಗೆ ಮಾಡುತ್ತಿರಿ ಎನ್ನುವುದನ್ನು ಸ್ಪಷ್ಟಪಡಿಸಿದರೆ, ನಾವು ಹೋರಾಟವನ್ನು ಹಿಂಪಡೆಯುತ್ತೇವೆ ಎಂದು ಒತ್ತಾಯಿಸಿದರು.

ದೆಹಲಿಯಲ್ಲಿ ಕುಳಿತು, ಅಲ್ಲಿಯೇ ಮಾಧ್ಯಮಗೋಷ್ಟಿ ಮಾಡಿ ನಾವು ರೈತರ ಪರ ಇದ್ದೇವೆ ಎಂದರೆ ನಡೆಯುವುದಿಲ್ಲ. ನಾವೂ ಕೂಡ ನಿಮ್ಮ ಪರವಾಗಿ ಇದ್ದೇವೆ. ನಮ್ಮ ಬಳಿ ಬಂದು ಮಾತಾಡಿ. ಹುಬ್ಬಳ್ಳಿ ತಲುಪುವುದು ಇನ್ನೂ ಮೂರನಾಲ್ಕು ದಿನ ಆಗಬಹುದು. ಹುಬ್ಬಳ್ಳಿ ಸಮೀಪ ಇದ್ದಾಗ ನಾವು ಕರೆ ಕೊಡುತ್ತೇವೆ. ಆಗ ಯಾವ ರೀತಿ ಹೋರಾಟ ಮಾಡಬೇಕು ಎಂಬುದನ್ನು ನಮ್ಮ ಎಲ್ಲ ರೈತ ಮುಖಂಡರು ಸೇರಿಕೊಂಡು ನಿರ್ಧರಿಸುತ್ತೇವೆ ಎಂದರು.

ಎಂಎಸ್ಪಿ ಹೆಚ್ಚಿಗೆ ಮಾಡುವುದರಿಂದ ಕಾರ್ಖಾನೆ ಮಾಲೀಕರಿಗೆ ಹೆಚ್ಚು ಲಾಭ ಆಗುತ್ತದೆ. ಹಾಗಾಗಿ, ಅವರು ಬಹಿರಂಗವಾಗಿ ಬಂದು ನಮ್ಮ ಹೋರಾಟಕ್ಕೆ ಬೆಂಬಲ ಕೊಡಬೇಕಿತ್ತು. ಇನ್ನು ಎಂಎಸ್ಪಿ ಹೆಚ್ಚಾದರೆ, ನಾವು ಕಾರ್ಖಾನೆ ಮಾಲೀಕರಿಂದ ಕಬ್ಬು ಬೆಳೆಗಾರರಿಗೆ ಹೆಚ್ಚಿನ ದರ ಕೊಡಿಸುತ್ತೇವೆ. ಹಾಗಾಗಿ, ಎರಡೂ ವಿಚಾರ ಇಟ್ಟುಕೊಂಡು ನಮ್ಮ ಹೋರಾಟ ಸಾಗುತ್ತಿದೆ. ನಮ್ಮ ಹೋರಾಟವು ಯಾವುದೇ ಪಕ್ಷ, ಜಾತಿ, ಧರ್ಮ, ಉತ್ತರ ಕರ್ನಾಟಕ-ದಕ್ಷಿಣ ಕರ್ನಾಟಕ ಎಂಬ ಯಾವುದೇ ಬೇಧಭಾವ ಇಲ್ಲ. ಪ್ರಲ್ಹಾದ್ ಜೋಶಿ ಅವರು ನಮ್ಮವರೇ ಇದ್ದಿರಿ, ಹುಬ್ಬಳ್ಳಿ ಸಮೀಪಿಸುತ್ತಿದ್ದಂತೆ ನಮ್ಮ ಎದುರಿಗೆ ನೀವು ಬಂದರೆ, ಎಲ್ಲರೂ ಕುಳಿತುಕೊಂಡು ಒಂದು ಒಳ್ಳೆಯ ನಿರ್ಧಾರಕ್ಕೆ ಬರೋಣ ಎಂದು ಶಶಿಕಾಂತ ಗುರೂಜಿ ಹೇಳಿದರು.

ಈವರೆಗೆ ನಮ್ಮನ್ನು ಸರ್ಕಾರದ ಯಾವೊಬ್ಬ ಪ್ರತಿನಿಧಿಯೂ ಸಂಪರ್ಕಿಸಿಲ್ಲ. ಬೇರೆ ಬೇರೆ ಮುಖಂಡರ ಮೂಲಕ ಮಾತನಾಡಿಸುವ ಪ್ರಯತ್ನ ಮಾಡುತ್ತಿದ್ದಾರೆ. ಸಾರ್ವಜನಿಕವಾಗಿ ಹೋರಾಟಗಾರರ ನಡುವೆ ಬಂದು ಮಾತನಾಡಿದರೆ ಮಾತ್ರ ಗೌರವ ಕೊಡುತ್ತೇವೆ. ನಾವು ಯಾವುದೇ ಆಫೀಸ್, ಯಾರದ್ದೋ ಮನೆಗೆ ಹೋಗುವ ಹೋರಾಟಗಾರರಲ್ಲ ಎಂದು ತಿರುಗೇಟು ಕೊಟ್ಟರು.

ಕಳೆದ ವರ್ಷ ಗುರ್ಲಾಪುರದಲ್ಲಿ ಕ್ರಾಂತಿ ಆಗಿದೆ. ಹಾಗಾಗಿ, ಸಾಂಕೇತಿಕವಾಗಿ ಎರಡನೂರು ಜನರು ಕೂಡಿಕೊಂಡು ಅಲ್ಲಿ ಹೋರಾಟ ಮುಂದುವರಿಸಿದ್ದಾರೆ. ಅಂತಿಮವಾಗಿ ನಮ್ಮ ನಿರ್ಧಾರ ಅಲ್ಲಿಯೇ ಪ್ರಕಟ ಆಗಲಿದೆ ಎಂದು ಶಶಿಕಾಂತ ಗುರೂಜಿ ಹೇಳಿದರು.

ಸಮಿತಿ ರಚನೆ ಮಾಡುವುದು, ಬಿಡುವುದನ್ನು ನಾವು ಕೇಳುತ್ತಿಲ್ಲ. ಈಗ ಸಮಿತಿ ರಚನೆ ಮಾಡಿದ್ದಾರೆ.

ವಸಂತ ಕುಮಾರರಿಂದ ವಿವಿಧ ಶಾಲಾ- ಕಾಲೇಜುಗಳಿಗೆ ಭೇಟಿ



ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆ ಹಿನ್ನಲೆಯಲ್ಲಿ ಇಂದು ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಉಸ್ತುವಾರಿಗಳು, ಕೆಪಿಸಿಸಿ ಕಾರ್ಯಾಧ್ಯಕ್ಷರು ಹಾಗೂ ವಿಧಾನ ಪರಿಷತ್ತ್ ಸದಸ್ಯರಾದ ಎ.ವಸಂತಕುಮಾರ ಅವರು ನಗರದ ವಿವಿಧ ಶಾಲಾ ಕಾಲೇಜುಗಳಿಗೆ ಭೇಟಿ ಕೊಟ್ಟು ಪಕ್ಷದ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡುವಂತೆ ಕೋರಿದರು.

ಇಂದು ರಾಯಚೂರು ಜಿಲ್ಲೆಯ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಯವರನ್ನು ಭೇಟಿಯಾಗಿ ಪಕ್ಷದ ಅಭ್ಯರ್ಥಿ ಶರಣಪ್ಪ ಮಟ್ಟೂರು ಪರವಾಗಿ ಮತದಾನ ಮಾಡುವಂತೆ ಹೇಳಿದರು, ಸರಕಾರವು ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಿಗೆ ಅನುಕೂಲ ಮಾಡಿಕೊಡಲಾಗುತ್ತಿದೆ, ವಿಶೇಷವಾಗಿ ಅಲ್ಪಸಂಖ್ಯಾತ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಕ್ರಮ ಜರುಗಿಸಲಾಗುತ್ತಿದೆ, ಶಿಕ್ಷಣ ಸಂಸ್ಥೆಗಳ ಸಮಸ್ಯೆಗಳಿಗೆ ಪರಿಹಾರ ಒದಗಿಸಲಾಗುವದು ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದ ಸರಕಾರವು ರಾಜ್ಯದಲ್ಲಿ ಶಿಕ್ಷಕರ ಸಮಸ್ಯೆಗಳನ್ನು ಆಧ್ಯತೆಯ ಮೇರೆಗೆ ಬಗೆಹರಿಸುತ್ತಿದೆ, ಒಪಿಎಸ್ ಜಾರಿಗೆ ಈಗಾಗಲೇ ವರದಿ ಪಡೆಯಲಾಗಿದೆ ಮತ್ತು ಸರಕಾರ ಒಪಿಎಸ್ ಜಾರಿಗೆ ಬದ್ದವಾಗಿದೆ. ಶರಣಪ್ಪ ಮಟ್ಟೂರು ಅವರು ಒಂದು ಅವಧಿಗೆ ವಿಧಾನ ಪರಿಷತ್ ಸದಸ್ಯರಾಗಿ ಕಾರ್ಯ ನಿರ್ವಹಿಸಿದ್ದು, ಶಿಕ್ಷಕರ ಹಾಗೂ ಶಿಕ್ಷಣ ಸಂಸ್ಥೆಗಳ ಅಭಿವೃದ್ದಿಗೆ ಶ್ರಮವಹಿಸಿದ್ದಾರೆ.

ಈ ಸಂದರ್ಭದಲ್ಲಿ ಕೆಪಿಸಿಸಿ ವಕ್ತಾರ ಡಾ.ರಝಾಕ ಉಸ್ತಾದ, ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಬಸವರಾಜ ದರೂರು, ರಾಮಕೃಷ್ಣ ನಾಯಕ, ಶಿಕ್ಷಣ ಸಂಸ್ಥೆಗಳ ಪದಾಧಿಕಾರಿಗಳಾದ ಮೊಹಮ್ಮದ ಇಕ್ಬಾಲ್, ಅಬ್ದುಲ್ ಹೈ ಫೆರೋಜ್, ಮೊಹಮ್ಮದ ಇಕ್ಬಾಲ್ ಕೋಸಗಿ, ಅಬ್ದುಲ್ ಸಮದ್, ಮೊಹಮ್ಮದ ಇಬ್ರಾಹಿಂ, ಸೈಯದ ಜುಬೇರ ಶೇಖ ಮಹಿಬೂಬ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಒಂದು ರಸ್ತೆ ಸುಧಾರಿಸಲು ಸಿಎಂ ಅಧಿಕಾರ ಬೇಕಾ? -ರಾಮನಗೌಡ ಏಗನೂರು ಆಕ್ರೋಶ

ರಾಯಚೂರು: ನಗರದ ಪ್ರಮುಖ ರಸ್ತೆಗಳಲ್ಲಿ ಒಂದಾದ ಚಂದ್ರಮೌಳೇಶ್ವರಿ ದೇವಸ್ಥಾನದ ಮುಂಭಾಗದ ರಸ್ತೆ ಹಾಗೂ ಚರಂಡಿಯ ದುಸ್ಥಿತಿಯ ಬಗ್ಗೆ ಜೆಡಿಎಸ್ ಮುಖಂಡ ರಾಮನಗೌಡ ಏಗನೂರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.



ಪ್ರತಿನಿತ್ಯ ಸುಮಾರು 30 ಸಾವಿರಕ್ಕೂ ಅಧಿಕ ಜನರು ಸಂಚರಿಸುವ ಈ ರಸ್ತೆಯನ್ನು ಸುಧಾರಿಸಲು ಎಷ್ಟು ವರ್ಷ ಬೇಕು? ಒಂದು ರಸ್ತೆ ಮತ್ತು ಚರಂಡಿಯನ್ನು ಸರಿಪಡಿಸಲು ಮುಖ್ಯಮಂತ್ರಿಗಳ ಅಧಿಕಾರವೇ ಬೇಕಾ? ಎಂದು ಅವರು ಸಂಬಂಧಪಟ್ಟ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳನ್ನು ಪ್ರಶ್ನಿಸಿದರು.

ನಗರದ ಚಂದ್ರಮೌಳೇಶ್ವರಿ ದೇವಸ್ಥಾನದ ಮುಂಭಾಗಕ್ಕೆ ಭೇಟಿ ನೀಡಿ ರಸ್ತೆ ಹಾಗೂ ಚರಂಡಿಯ ಅವ್ಯವಸ್ಥೆಯನ್ನು ಖುದ್ದಾಗಿ ವೀಕ್ಷಿಸಿದ ರಾಮನಗೌಡ ಏಗನೂರು, ಸ್ಥಳೀಯರು ಎದುರಿಸುತ್ತಿರುವ ಸಮಸ್ಯೆಗಳನ್ನು ಗಮನಿಸಿದರು. ನಗರದ ಪ್ರಮುಖ ಸಂಚಾರ ಮಾರ್ಗವಾಗಿರುವ ಈ ರಸ್ತೆಯಲ್ಲಿ ಸಾರ್ವಜನಿಕರು ಪ್ರತಿದಿನ ಆತಂಕದ ನಡುವೆ ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಇಷ್ಟೊಂದು ಜನರು ಬಳಸುವ ರಸ್ತೆಯ ಬಗ್ಗೆ ಸಂಬಂಧಪಟ್ಟವರು ಗಂಭೀರವಾಗಿ ಗಮನಹರಿಸದಿರುವುದು ವಿಷಾದನೀಯ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬ್ರಿಟಿಷರ ಕಾಲದ ರಾಜಕಾಲುವೆ ಇಂದಿಗೂ ಅದೇ ಸ್ಥಿತಿಯಲ್ಲಿ!

ಚಂದ್ರಮೌಳೇಶ್ವರಿ ದೇವಸ್ಥಾನದ ಮುಂಭಾಗದಲ್ಲಿರುವ ರಾಜಕಾಲುವೆ ಬ್ರಿಟಿಷರ ಕಾಲದಲ್ಲಿ ನಿರ್ಮಾಣವಾಗಿದ್ದು, ಇಂದಿಗೂ ಅದೇ ಸ್ಥಿತಿಯಲ್ಲಿದೆ. ಕಾಲ ಬದಲಾಗಿದೆ, ಜನಸಂಖ್ಯೆ ಹೆಚ್ಚಾಗಿದೆ, ವಾಹನಗಳ ಸಂಚಾರವೂ ಹೆಚ್ಚಾಗಿದೆ. ಆದರೆ, ಜನರಿಗೆ ಅಗತ್ಯವಾದ ಮೂಲಸೌಕರ್ಯಗಳನ್ನು ಸುಧಾರಿಸುವ ಕೆಲಸ ಮಾತ್ರ ಸಮರ್ಪಕವಾಗಿ ನಡೆದಿಲ್ಲ ಎಂದು ರಾಮನಗೌಡ ಆರೋಪಿಸಿದರು.

ನಗರದ ಅಭಿವೃದ್ಧಿ, ರಸ್ತೆ ಸುಧಾರಣೆ ಮತ್ತು ಒಳಚರಂಡಿ ವ್ಯವಸ್ಥೆ ಸಾರ್ವಜನಿಕರ ಮೂಲಭೂತ ಅಗತ್ಯಗಳಾಗಿವೆ. ಇವುಗಳನ್ನು ಒದಗಿಸುವುದು ಆಡಳಿತ ವ್ಯವಸ್ಥೆಯ ಜವಾಬ್ದಾರಿಯಾಗಿದೆ. ಆದರೆ, ದಶಕಗಳು ಕಳೆದರೂ

3ನೇಯ ಪುಟಕ್ಕೆ

ಜಿ.ಪಂ ಮೀಸಲಾತಿ ಕರಡಿನಲ್ಲಿ ಬಿಸಿಎಂ-ಬಿ ಪ್ರವರ್ಗಕ್ಕೆ ಒಂದೂ ಕ್ಷೇತ್ರವಿಲ್ಲ ಭಾನುಪ್ರಕಾಶ್ ಕೆ

ದೇವದುರ್ಗ, ಅ. 16: ರಾಯಚೂರು ಜಿಲ್ಲಾ ಪಂಚಾಯತ್ ಕ್ಷೇತ್ರಗಳ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಕಟಿಸಿರುವ ಕರಡು ಅಧಿಸೂಚನೆಯಲ್ಲಿ ಬಿಸಿಎಂ-ಬಿ (ಪ್ರವರ್ಗ-ಬಿ) ವರ್ಗಕ್ಕೆ ಒಂದೂ ಕ್ಷೇತ್ರವನ್ನು ಮೀಸಲಿಡದಿರುವುದು ಅನ್ಯಾಯವಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕರಡು ಪಟ್ಟಿಯನ್ನು ಪರಿಷ್ಕರಿಸಿ ಸಮಾನ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಮಾಜಿ ಜಿಲ್ಲಾಧ್ಯಕ್ಷ ಚಂದ್ರಶೇಖರ ಪಾಟೀಲ್ ಮಿಯಾಪುರ ಆಗ್ರಹಿಸಿದರು.



ಪಟ್ಟಣದ ಉದ್ಯಮಿ ಬಾನುಪ್ರಕಾಶ್ ಖೇಣಿದ್ ಅವರ ಕಾರ್ಯಾಲಯದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಯಚೂರು ಜಿಲ್ಲೆಯಲ್ಲಿ ವೀರಶೈವ ಲಿಂಗಾಯತ ಸಮುದಾಯಕ್ಕೆ ರಾಜಕೀಯ ಪ್ರಾತಿನಿಧ್ಯದ ವಿಚಾರದಲ್ಲಿ ನಿರಂತರವಾಗಿ ಅನ್ಯಾಯವಾಗುತ್ತಿದೆ. ಇದೀಗ ಜಿಲ್ಲಾ ಪಂಚಾಯತ್ ಕ್ಷೇತ್ರಗಳ ಮೀಸಲಾತಿ ಕರಡು ಪಟ್ಟಿಯಲ್ಲಿಯೂ ಸಮುದಾಯವನ್ನು ಕಡೆಗಣಿಸಿರುವುದು ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಆರೋಪಿಸಿದರು.

ರಾಯಚೂರು ಜಿಲ್ಲೆಯಲ್ಲಿ ಒಟ್ಟು 39 ಜಿಲ್ಲಾ ಪಂಚಾಯತ್ ಕ್ಷೇತ್ರಗಳಿದ್ದು, ಮೀಸಲಾತಿ ನಿಗದಿಪಡಿಸುವ ಸಂದರ್ಭದಲ್ಲಿ ವಿವಿಧ ಸಮುದಾಯಗಳಿಗೆ ನ್ಯಾಯಯುತ ಪ್ರಾತಿನಿಧ್ಯ ದೊರೆಯುವಂತೆ ನೋಡಿಕೊಳ್ಳಬೇಕಿತ್ತು. ಆದರೆ ಪ್ರಕಟಿಸಿರುವ ಕರಡು ಅಧಿಸೂಚನೆಯಲ್ಲಿ ವೀರಶೈವ ಲಿಂಗಾಯತ ಸಮುದಾಯವನ್ನು ಒಳಗೊಂಡಿರುವ ಬಿಸಿಎಂ-ಬಿ ಪ್ರವರ್ಗಕ್ಕೆ ಒಂದೇ ಒಂದು ಕ್ಷೇತ್ರವನ್ನೂ ಮೀಸಲಿಡದಿರುವುದು ಸರಿಯಲ್ಲ. ಈ ಕುರಿತು ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಆಕ್ಷೇಪಣೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಸ್ಥಳೀಯ ಸ್ವಯಂ ಆಡಳಿತ ಸಂಸ್ಥೆಗಳಲ್ಲಿ ಎಲ್ಲ

3ನೇಯ ಪುಟಕ್ಕೆ

ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಅ.24ರಿಂದ ಬೃಹತ್ ಪಾದಯಾತ್ರೆ : ಕರಿಯಪ್ಪ ಅಚ್ಚೊಳ್ಳಿ

ರಾಯಚೂರು: ಬೆಳೆ ನಷ್ಟ ಪರಿಹಾರ, ಉದ್ಯೋಗ ಖಾತ್ರಿ ಯೋಜನೆಯ ಸಮರ್ಪಕ ಅನುಷ್ಠಾನ, ಭೂಮಿ, ಮನೆ, ನಿವೇಶನ, ಕುಡಿಯುವ ನೀರು ಹಾಗೂ ವಿದ್ಯುತ್ ಸಮಸ್ಯೆಗಳ ಪರಿಹಾರ ಸೇರಿದಂತೆ ರೈತರು, ಕೃಷಿ ಕೂಲಿಕಾರರು ಮತ್ತು ಗ್ರಾಮೀಣ ಕಾರ್ಮಿಕರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಅಕ್ಟೋಬರ್ 24ರಿಂದ ಜಿಲ್ಲೆಯ ವಿವಿಧ ತಾಲೂಕುಗಳಿಂದ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಮತ್ತು ಗ್ರಾಮೀಣ ಕಾರ್ಮಿಕರ ಸಂಘದ ಜಿಲ್ಲಾ ಕಾರ್ಯದರ್ಶಿ ಕರಿಯಪ್ಪ ಅಚ್ಚೊಳ್ಳಿ ತಿಳಿಸಿದರು.



ಜಿಲ್ಲೆಯಲ್ಲಿ ತುಂಗಭದ್ರಾ, ಎಡದಂಡೆ ಹಾಗೂ ನಾರಾಯಣಪುರ ಬಲದಂಡೆ ಕಾಲುವೆಗಳಿದ್ದರೂ ಸಮರ್ಪಕ ಮಳೆಯಾಗದ ಕಾರಣ ಬಹುತೇಕ ಪ್ರದೇಶಗಳು ಬರದ ಸಂಕಷ್ಟ ಎದುರಿಸುತ್ತಿವೆ. ಮಳೆ ಕೊರತೆಯಿಂದ ಬೆಳೆಗಳು ಹಾನಿಗೀಡಾಗಿದ್ದು, ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೃಷಿ ಕೂಲಿಕಾರರಿಗೆ ಕೆಲಸವಿಲ್ಲದೆ ಜೀವನ ನಿರ್ವಹಣೆ ಕಷ್ಟವಾಗಿದೆ. ಕೃಷಿಗಾಗಿ ಸಾಲ ಮಾಡಿದ ರೈತರು ಅದನ್ನು ತೀರಿಸಲಾಗದೆ ಪರದಾಡುತ್ತಿದ್ದಾರೆ ಎಂದು ಅವರು ಶನಿವಾರ ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ, ಉದ್ಯೋಗ ಖಾತ್ರಿ ಯೋಜನೆಯಲ್ಲಿನ

3ನೇಯ ಪುಟಕ್ಕೆ

ಕಾರು ಚಾಲನೆ ಮಾಡುವಾಗ ಮೊಬೈಲ್ ಬಳಕೆಯಿಂದ ಅಪಘಾತ





ದೇವದುರ್ಗ,ಅ.17-

ಮೊಬೈಲ್ ಬಳಕೆಯಿಂದ ಕಾರ್ ಅಪಘಾತ

ದೇವದುರ್ಗದಿಂದ ರಾಯಚೂರಿಗೆ ಹೋಗುತ್ತಿದ್ದ ಎರಡೂ ಕಾರುಗಳು ಹಂಪ್ಗಳು ದಾಟುವಾಗ ಮುಂದಿನ ಕಾರು ಬ್ರೇಕ್ ಹಾಕಿ ದಾಟಿಸುವಾಗ ಇಂದಿನಿಂದ ಬಂದ ಕಾರು ವ್ಯಕ್ತಿಯ ಮೊಬೈಲ್ ಕೆಳಗಡೆ ಬಿದ್ದು ಆ ಮೊಬೈಲನ್ನು ತೆಗೆದುಕೊಳ್ಳಲು ಹೋಗಿ ಮುಂದಿನ ಕಾರನ್ನು ನೋಡದೆ ಗುದ್ದಿ ಅಪಘಾತ ಸಂಭವಿಸಿ ಒಂದು ಕಾರು ಪಲ್ಟಿಯಾಗಿದ್ದು ಮತ್ತೊಂದು ಕಾರಿಗೆ ಹಿಂಬದಿ ಡ್ಯಾಮೇಜ್ ಆಗಿದೆ ಇದರಿಂದ ಯಾವುದೇ ಅನಾಹುತ ಸಂಭವಿಸಿಲ್ಲ ಯಾರಿಗೂ ಏನು ಆಗಿರುವುದಿಲ್ಲ ದಯವಿಟ್ಟು ಎಲ್ಲರೂ ಕಾರು ಚಾಲನೆಮಾಡುವಾಗ ಮೊಬೈಲ್ ಬಳಕೆಯನ್ನು ಮಾಡಬೇಡಿ

ಮಹಿಳಾ ಸಚಿವರಿಲ್ಲದಕ್ಕೆ ಅಸಮಾಧಾನ : ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಸ್ಥಾನಕ್ಕೆ ಸೌಮ್ಯರೆಡ್ಡಿ ರಾಜೀನಾಮೆ

ಬೆಂಗಳೂರು, ಅ. 17: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರಕಾರದಲ್ಲಿ ಮಹಿಳಾ ಸಚಿವರಿಲ್ಲದ ಕಾರಣಕ್ಕೆ ಅಸಮಾಧಾನ'ಗೊಂಡು ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಸ್ಥಾನಕ್ಕೆ ಮಾಜಿ ಶಾಸಕಿ ಸೌಮ್ಯ ರೆಡ್ಡಿ ರಾಜೀನಾಮೆ ನೀಡಿದ್ದಾರೆ.



ಶನಿವಾರ ಸೌಮ್ಯರೆಡ್ಡಿ ತಮ್ಮ ರಾಜೀನಾಮೆ ಪತ್ರವನ್ನು ಅಖಿಲ ಭಾರತ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಅಲ್ಕಾ ಲಂಬಾ ಅವರಿಗೆ ರವಾನಿಸಿದ್ದಾರೆ. ತಾವು ಎರಡು ವರ್ಷಗಳ ಅವಧಿಗೆ ಮಹಿಳಾ ಘಟಕದ ಜವಾಬ್ದಾರಿ ವಹಿಸಿಕೊಂಡಿದ್ದು, ರಾಜ್ಯಾದ್ಯಂತ ಪ್ರವಾಸ ಮಾಡಿ ಮಹಿಳೆಯರ ಆರೋಗ್ಯ, ಶಿಕ್ಷಣ ಮತ್ತು ಆರ್ಥಿಕ ಸಬಲೀಕರಣಕ್ಕಾಗಿ ಕೆಲಸ ಮಾಡಲು ಹಾಗೂ ಮಹಿಳೆಯರನ್ನು ಪಕ್ಷಕ್ಕೆ ಸೇರ್ಪಡೆಗೊಳಿಸಲು ಅವಕಾಶ ಸಿಕ್ಕಿರುವುದು ತಮ್ಮ ಭಾಗ್ಯ ಎಂದು ಉಲ್ಲೇಖಿಸಿದ್ದಾರೆ.

ರಾಜ್ಯ ಸರಕಾರದ ಐದು ಗ್ಯಾರಂಟಿ ಯೋಜನೆಗಳು ಮಹಿಳಾ ಕ್ರಾಂತಿಯನ್ನೇ ಸೃಷ್ಟಿಸಿವೆ. ಕರ್ನಾಟಕ ಸರಕಾರದಲ್ಲಿ ಮಹಿಳಾ ಸಚಿವರಿಲ್ಲದಿರುವ ವಿಚಾರವನ್ನು ಪಕ್ಷದ ಹೈಕಮಾಂಡ್ ಗಮನಕ್ಕೆ ತರುವಂತೆ ಮನವಿ ಮಾಡಿದ್ದಾರೆ. ಪಕ್ಷದ ಹೈಕಮಾಂ ಡ್, ಎಐಸಿಸಿ, ಕೆಪಿಸಿಸಿ ಅಧ್ಯಕ್ಷರು, ಸಿಎಂ, ಮಾಜಿ ಸಿಎಂ, ಸಚಿವರು ಹಾಗೂ ಶಾಸಕರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಕಾಂಗ್ರೆಸ್ ಪಕ್ಷದ ನಿಷ್ಠಾವಂತಕಾರ್ಯಕರ್ತೆಯಾಗಿ ಮುಂದುವರಿಯುತ್ತೇನೆ. 2028ರ ವಿಧಾನಸಭೆ ಮತ್ತು 2029ರ ಲೋಕಸಭೆ ಚುನಾವಣೆಯಲ್ಲಿ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರಲು ಶ್ರಮಿಸುತ್ತೇನೆ. ಕೆಪಿಸಿಸಿ ಮಹಿಳಾ ಘಟಕಕ್ಕೆ ಹೊಸ ಅಧ್ಯಕ್ಷರ ಆಯ್ಕೆಯಾಗುವವರೆಗೆ ತಾವು ಹುದ್ದೆಯಲ್ಲಿ ಮುಂದುವರಿಯುತ್ತೇನೆ ಎಂದು ಸೌಮ್ಯ ರೆಡ್ಡಿ. ತಮ್ಮ ರಾಜೀನಾಮೆ ಪತ್ರದಲ್ಲಿ ಸ್ಪಷ್ಟಪಡಿಸಿದ್ದಾರೆ.

ವಿಬಿ-ಜಿ ರಾಮ್ ಜಿ ಯೋಜನೆಯಡಿ ಮಾನವ ದಿನಗಳ ಸೃಜನೆಗೆ ಸಿಇಒ ಸೂಚನೆ

ತೆರಿಗೆ ವಸೂಲಾತಿ ಹೆಚ್ಚಳಕ್ಕೆ ಆದ್ಯತೆ ನೀಡಿ: ಈಶ್ವರ್‌ಕುಮಾರ್ ಕಾಂದೂ

ರಾಯಚೂರು,ಅ.17

ಜಿಲ್ಲೆಯ ದೇವದುರ್ಗ ಅರಕೇರಾ ತಾಲೂಕಿನ ಜಾಗೀರ್ ಜಾಡಲದಿನ್ನಿ, ಕ್ಯಾದಿಗೇರಾ, ಭೂಮನಗುಡ್ಡ ಹಾಗೂ ಅರಕೇರಾ ಸೇರಿದಂತೆ ವಿವಿಧ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ, ಅಭಿವೃದ್ಧಿ ಕಾಮಗಾರಿಗಳು ಹಾಗೂ ವಿವಿಧ ಯೋಜನೆಗಳ ಪ್ರಗತಿಯನ್ನು ಜಿಲ್ಲಾ ಪಂಚಾಯತಿ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ಪರಿಶೀಲಿಸಿದರು.

ಜಾಗೀರ ಜಾಡಲದಿನ್ನಿ ಗ್ರಾ.ಪಂಯ ಜಾಗಟಗಲ್ ಗ್ರಾಮದಲ್ಲಿ ಓವರ್‌ಹೆಡ್ ಟ್ಯಾಂಕ್ (ಒಎಚ್ಟಿ) ಕಾಮಗಾರಿಯನ್ನು ಪರಿಶೀಲಿಸಿದ ಅವರು, ಸಾರ್ವಜನಿಕರಿಗೆ ತೊಂದರೆಯಾಗದಂತೆ ಹಾಗೂ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಸೂಚಿಸಿದರು.

ಶಾಲಾ ಕಟ್ಟಡ ಹಾಗೂ ಶೌಚಾಲಯ ಕಾಮಗಾರಿ ಪೂರ್ಣಗೊಳಿಸಲು ಸೂಚನೆ:

ಕ್ಯಾದಿಗೇರಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಾಲಾ ಕಟ್ಟಡ ಕಾಮಗಾರಿಯನ್ನು ವೀಕ್ಷಿಸಿದ ಮಾನ್ಯ ಸಿಇಒ ರವರು, ಎರಡು ತಿಂಗಳೊಳಗಾಗಿ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಸೂಚಿಸಿದರು. ಅಲ್ಲದೆ, ಶೌಚಾಲಯದ ಕಾಮಗಾರಿಯನ್ನು ಒಂದು ತಿಂಗಳೊಳಗಾಗಿ ಪೂರ್ಣಗೊಳಿಸಲು ನಿರ್ದೇಶನ ನೀಡಿದರು.



ಗ್ರಾಮದ ಅಂಗನವಾಡಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆ ಗೈರುಹಾಜರಾಗಿರುವುದನ್ನು ಗಮನಿಸಿದ ಅವರು, ಈ ಕುರಿತು ಸಂಬಂಧಿಸಿದ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು. ಅಂಗನವಾಡಿ ಸಿಬ್ಬಂದಿ ಕಡ್ಡಾಯವಾಗಿ ಸಮಯ ಪಾಲನೆ ಮಾಡಬೇಕು. ಮಕ್ಕಳಿಗೆ ನಿಯಮಿತವಾಗಿ ಪೌಷ್ಟಿಕ ಆಹಾರ ವಿತರಣೆ ಮಾಡಬೇಕು ಹಾಗೂ ಮಕ್ಕಳ ಸ್ವಚ್ಛತೆ ಮತ್ತು ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ತೆರಿಗೆ ವಸೂಲಾತಿ ಹಾಗೂ ಮಾನವ ದಿನಗಳ ಸೃಜನೆಗೆ ಒತ್ತು:

ಕ್ಯಾದಿಗೇರಾ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿದ ಅವರು, ಪಂಚಾಯಿತಿಯ ಕಡತಗಳ ನಿರ್ವಹಣೆಯನ್ನು ಸಮರ್ಪಕವಾಗಿ ಮಾಡಬೇಕು. ತೆರಿಗೆ ವಸೂಲಾತಿ ಪ್ರಗತಿ ಕಡಿಮೆಯಿರುವುದರಿಂದ ವಸೂಲಾತಿಯನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಬೇಕು. ವಿಬಿ-ಜಿ ರಾಮ್ ಜಿ ಯೋಜನೆಯಡಿ ಅರ್ಹ ಕೂಲಿಕಾರ್ಮಿಕರಿಗೆ ಉದ್ಯೋಗ ಒದಗಿಸುವ ಮೂಲಕ ಮಾನವ ದಿನಗಳ ಸೃಜನೆಗೆ ಕಡ್ಡಾಯವಾಗಿ ಕ್ರಮ ವಹಿಸಬೇಕು ಎಂದು ತಿಳಿಸಿದರು.

ಕೂಲಿಕಾರ್ಮಿಕರೊಂದಿಗೆ ಸಂವಾದ:

ಭೂಮನಗುಡ್ಡ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೂಲಿಕಾರ್ಮಿಕರೊಂದಿಗೆ ಸಂವಾದ ನಡೆಸಿದ ಮಾನ್ಯ ಸಿಇಒ

ಯಾದಗಿರಿ ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ಆಗಿ ವಿಶ್ವರಾಧ್ಯ ಎಸ್.ಜಿ ಅಧಿಕಾರ ಸ್ವೀಕಾರ



ಯಾದಗಿರಿ,ಆ.17-

ಸಾಮಾನ್ಯ ವರ್ಗಾವಣೆಯಲ್ಲಿ ಯಾದಗಿರಿ ಜಿಲ್ಲೆಯ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಆಗಿ ದಕ್ಷ ಅಧಿಕಾರಿ ವಿಶ್ವರಾಧ್ಯ ಎಸ್ ಜಿ ಅಧಿಕಾರ ಸ್ವೀಕಾರಿಸಿದರು.

ಠಾಣೆಯ ಅಧಿಕಾರ ಸ್ವೀಕರಿಸಿದ ರವರು ಠಾಣೆಯ ವ್ಯಾಪ್ತಿಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವುದು ಹಾಗೂ ಸಾರ್ವಜನಿಕರೊಂದಿಗೆ ಉತ್ತಮ ಬಾಂಧವ್ಯ ಹೊಂದುವುದು. ಜನಸ್ನೇಹಿ ಪೊಲೀಸ್ ಸೇವೆ ಒದಗಿಸುವುದು ಸೇರಿದಂತೆ ಇಲಾಖೆಯ ಜವಾಬ್ದಾರಿಗಳನ್ನು ನಿರ್ವಹಿಸಿಕೊಂಡು ಹೋಗುವ ಎಂದು ತಿಳಿಸಿದರು. ಸ್ಥಳೀಯ ಸಾರ್ವಜನಿಕರು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಲು ಕೈ ಜೋಡಿಸಬೇಕೆಂದು ತಿಳಿಸಿದರು.

ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಆತ್ಮೀಯ ಸ್ನೇಹಿತರ ಬಳಗದಿಂದ ಶುಭ ಕೋರಲಾಯಿತು . ಈ ಸಂದರ್ಭದಲ್ಲಿ ಮಹಾಂತೇಶ್. ಯಲ್ಲನಗೌಡ. ಹನುಮಂತು. ರವೀಂದ್ರ, ಪೊಲೀಸ್ ಪಾಟೀಲ್. ಇನ್ನಿತರ ಅಪಾರ ಸ್ನೇಹಿತರ ಬಳಗ ಉಪಸ್ಥಿತರಿದ್ದು ನೂತನವಾಗಿ ಅಧಿಕಾರ ಸ್ವೀಕರಿಸಿದ ವಿಶ್ವರಾಧ್ಯ ಪಿಎಸ್ಐ ರವರಿಗೆ ಹೂವಿನ ಹಾರ ಶಾಲು ಹಾಕುವುದರ ಮೂಲಕ ಶುಭ ಕೋರಿದರು. ಯಾದಗಿರಿಯಲ್ಲಿ ಇನ್ನು ಮುಂದೆ ಶಾಂತಿ ಮತ್ತು ಸು ವ್ಯವಸ್ಥೆ ಕಾಪಾಡಲು ಮನವಿ ಮಾಡಿದರು

ಕಬ್ಬಿಗೆ 5,500 ರೂ. ಬೆಲೆ ನಿಗದಿಗೆ ಆಗ್ರಹಿಸಿ ಮುಂದುವರಿದ ರೈತರ ಹೆದ್ದಾರಿ ತಡೆ ಹೋರಾಟ

ಕಲಬುರಗಿ:

ಕಬ್ಬಿಗೆ ಪ್ರತಿ ಟನ್‌ಗೆ 5,500 ರೂ. ಬೆಲೆ ನಿಗದಿಪಡಿಸುವುದು, ಸ್ವಾಮಿನಾಥನ್ ಆಯೋಗದ ಶಿಫಾರಸುಗಳನ್ನು ಜಾರಿಗೊಳಿಸುವುದು ಹಾಗೂ ಕಬ್ಬು, ತೊಗರಿ ಮತ್ತು ಹತ್ತಿಗೆ ವೈಜ್ಞಾನಿಕ ಬೆಲೆ ನಿಗದಿಪಡಿಸುವಂತೆ ಆಗ್ರಹಿಸಿ ರೈತರು ನಡೆಸುತ್ತಿರುವ ಹೆದ್ದಾರಿ ತಡೆ ಹೋರಾಟ ಮೂರನೇ ದಿನವಾದ ಗುರುವಾರವೂ ಮುಂದುವರಿದಿದೆ. ನಗರದ ಜೇವರ್ಗಿ ರಸ್ತೆಯ ಮಹರ್ಷಿ ಶ್ರೀ ವಾಲ್ಮೀಕಿ ವೃತ್ತದಲ್ಲಿ ಧರಣಿ ನಡೆಸಿದ ರೈತರು, ಬೇಡಿಕೆಗಳು ಈಡೇರುವವರೆಗೆ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ಪಟ್ಟು ಹಿಡಿದಿದ್ದಾರೆ.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ನೇತೃತ್ವದಲ್ಲಿ ನಡೆಯುತ್ತಿರುವ ಹೋರಾಟಕ್ಕೆ ವಿವಿಧ ರೈತ ಸಂಘಟನೆಗಳು, ಮಠಾಧೀಶರು, ಮಹಿಳೆಯರು, ವಕೀಲರು ಹಾಗೂ ಸಾರ್ವಜನಿಕರು ಬೆಂಬಲ ಸೂಚಿಸಿದರು. ಧರಣಿ ಸ್ಥಳಕ್ಕೆ ಭೇಟಿ ನೀಡಿದ ಮಠಾಧೀಶರು, ರೈತರ ಬೇಡಿಕೆಗಳು ನ್ಯಾಯಯುತವಾಗಿದ್ದು, ಸರ್ಕಾರ ಕೂಡಲೇ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

ನಂದಿಕೂರ ಮತ್ತು ಸೀತನೂರ ಗ್ರಾಮದ ರೈತರು ಹತ್ತಾರು ಟ್ರ್ಯಾಕ್ಟರ್‌ಗಳೊಂದಿಗೆ ಪ್ರತಿಭಟನೆಯಲ್ಲಿ ಪಾಲ್ಗೊಂಡು ಗಮನ ಸೆಳೆದರು. ತಾರಫೈಲ್, ಭೂತಾಪುರ,



ಚಿಂತಪಳ್ಳಿ, ರುದ್ರನೂರ, ಉಡಚಣ ಸೇರಿದಂತೆ ವಿವಿಧ ಗ್ರಾಮಗಳಿಂದ ರೈತರು ಆಗಮಿಸಿ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು. ವಕೀಲರಾದ ಜಾವೇದ್ ಮತ್ತು ಶಬ್ಬೀರ್ ಸೇರಿದಂತೆ ಕಾನೂನು ತಜ್ಞರೂ ಪ್ರತಿಭಟನೆಯಲ್ಲಿ ಭಾಗವಹಿಸಿದರು.

ಪಾಳಾದ ಶ್ರೀ ಗುರುಮೂರ್ತಿ ಶಿವಾಚಾರ್ಯರು ಮಾತನಾಡಿ, ಬರಗಾಲ ದಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ರೈತರ ನೆರವಿಗೆ ಧಾವಿಸಬೇಕು. ಕಬ್ಬಿಗೆ ಪ್ರತಿ ಟನ್‌ಗೆ ₹5,500 ಬೆಲೆ ನಿಗದಿಪಡಿಸುವುದು ಸೇರಿದಂತೆ ರೈತರ ಪ್ರಮುಖ ಬೇಡಿಕೆಗಳನ್ನು ತ್ವರಿತವಾಗಿ ಈಡೇರಿಸಬೇಕು ಎಂದು ಆಗ್ರಹಿಸಿದರು.

ರೈತರಿಗೆ ನ್ಯಾಯ ದೊರೆಯುವವರೆಗೆ ಜಿಲ್ಲೆಯ ಮಠಾಧೀಶರು ಹೋರಾಟಕ್ಕೆ ಬೆಂಬಲ ನೀಡಲಿದ್ದಾರೆ. 200ಕ್ಕೂ ಹೆಚ್ಚು ಮಠಾಧೀಶರು ಹೋರಾಟದಲ್ಲಿ ಭಾಗವಹಿಸಲು ಸಿದ್ಧರಿದ್ದಾರೆ ಎಂದು ಅವರು ಘೋಷಿಸಿದರು.

ಕೆಸರಿ ಬೆಟ್ಟದ ಷ.ಬ್ರ. ತಪೋರತ್ನ ಬಾಲತಪಸ್ವಿ ದ್ವಿತೀಯ ಸಾಂಬಾ ಶಿವಾಚಾರ್ಯರೂ ಮಾತನಾಡಿ, ರೈತರ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು.

ಯುವ ಹೋರಾಟಗಾರ್ತಿ ಗುರುಬಾಯಿ ಸರಡಗಿ ಮಾತನಾಡಿ, ರೈತರ ಬೆವರು ಮತ್ತು ಪರಿಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯಬೇಕು. ಸಾಲದ ಹೊರೆ, ಕೃಷಿ ವೆಚ್ಚದ ಹೆಚ್ಚಳ ಹಾಗೂ ಬೆಳೆಗಳ ಬೆಲೆ ಕುಸಿತದಿಂದ ರೈತರು ಜೀವನ ಸಾಗಿಸಲು ಪರದಾಡುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಸರ್ಕಾರ ರೈತರ ತಾಳ್ಮೆಯನ್ನು ಪರೀಕ್ಷಿಸದೆ ಅವರ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ರೈತ ಸಂಘದ ಜಿಲ್ಲಾ ಕಾರ್ಯದರ್ಶಿ ಸಿದ್ದರಾಮ್ ಡಣ್ಣೂರು, ಯಾದಗಿರಿ ಜಿಲ್ಲಾಧ್ಯಕ್ಷ ವಿಜಯಕುಮಾರ್ ಮುಷ್ಟೂರು, ಜಿಲ್ಲಾಧ್ಯಕ್ಷ ಜಗದೇಶ ಪಾಟೀಲ್ ರಾಜಾಪುರ, ಮಹಾದೇವಿ ಪೂಜಾರಿ, ಗುರುಬಾಯಿ ಸರಡಗಿ, ಅಶೋಕ್ ಹೂಗಾರ, ಬಸವರಾಜ ಚಾನಕೋಟೆ, ಎಂ.ಎಸ್. ಪಾಟೀಲ್ ನರಿಬೋಳ, ಶರಣಗೌಡ ಮಾಲಿಪಾ ಟೀಲ್, ಬಿ. ರೇಣುಕಾಚಾರ್ಯ, ಬಸವರಾಜ ಕೋರಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ರೈತರ ಪ್ರಮುಖ ಬೇಡಿಕೆಗಳು :

ಕಬ್ಬಿಗೆ ಪ್ರತಿ ಟನ್‌ಗೆ 5,500 ರೂ. ಬೆಂಬಲ ಬೆಲೆ ನಿಗದಿಪಡಿಸಬೇಕು. ಕಬ್ಬಿಗೆ ಎಸ್‌ಎಪಿ (ರಾಜ್ಯ ಸಲಹಾ ಬೆಲೆ) ಮೂಲಕ ಕಾನೂನುಬದ್ಧ ಬೆಲೆಯ ಖಾತರಿ ನೀಡಬೇಕು. ಸ್ವಾಮಿನಾಥನ್ ಆಯೋಗದ ಶಿಫಾರಸುಗಳನ್ನು ಯಥಾವತ್ತಾಗಿ ಜಾರಿಗೊಳಿಸಬೇಕು. ಕಲಬುರಗಿ ಜಿಲ್ಲೆಯ ತೊಗರಿಗೆ 1,600 ರೂ. ಎಂಎಸ್‌ಪಿ ನಿಗದಿಪಡಿಸಬೇಕು. ಹತ್ತಿಗೆ 1,500 ರೂ. ಬೆಂಬಲ ಬೆಲೆ ನೀಡಬೇಕು. ಎಲ್ಲ ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕ ಬೆಲೆ ನಿಗದಿಪಡಿಸ 'ಬೇಕು. ಜೆಸ್ಕಾಂ ವ್ಯಾಪ್ತಿಯ ಕೃಷಿ ಪಂಪ್‌ಸೆಟ್‌ಗಳಿಗೆ ದಿನಕ್ಕೆ ಕನಿಷ್ಠ ಏಳು ಗಂಟೆ ವಿದ್ಯುತ್ ಪೂರೈಸಬೇಕು.

ಶಾಲಾಪೂರ್ವ ಶಿಕ್ಷಣ ಬಲವರ್ಧನೆಗೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ: ಕಾರ್ಯದರ್ಶಿ ನಲಿನ್ ಅತುಲ್



ಕಲಬುರಗಿ

ಕಲ್ಯಾಣ ಕರ್ನಾಟಕ ಪ್ರದೇಶದ ಏಳು ಜಿಲ್ಲೆಗಳಲ್ಲಿ ಶಾಲಾಪೂರ್ವ ಶಿಕ್ಷಣ ಕಾರ್ಯಕ್ರಮವವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿ ಸಲು ಅಧಿಕಾರಿಗಳು ಸಮನ್ವ ಯದಿಂದ ಕಾರ್ಯನಿರ್ವಹಿಸಬೇಕು ಎಂದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯ ದರ್ಶಿ ನಲಿನ್ ಅತುಲ್ ಹೇಳಿದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಲಿಕೆ ಟಾಟಾ ಟ್ರಸ್ಟ್ ಸಹಯೋ ಗದಲ್ಲಿ ಶಾಲಾಪೂರ್ವ ಶಿಕ್ಷಣ ಬಲವ ರ್ಧನೆ ಕಾರ್ಯಕ್ರಮದಡಿ ಅಕ್ಟೋ ಬರ್ 14 ರಂದು ಕಲಬುರಗಿಯ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀ ಣಾಭಿವೃದ್ಧಿ ಮತ್ತು ಪಂಚಾ ಯತ್ ರಾಜ್ ತರಬೇತಿ ಸಂಸ್ಥೆಯಲ್ಲಿ ಆಯೋಜಿಸಿರುವ ಆರನೇ ಆವೃತ್ತಿಯ ಶಾಲಾಪೂರ್ವ ಶಿಕ್ಷಣದ ದೃಷ್ಟಿಕೋನ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಾಲಾ ಪೂರ್ವ ಹಂತದಲ್ಲಿಯೇ ಮಕ್ಕಳ ಕಲಿಕೆಗೆ ಭದ್ರ ಬುನಾದಿ ಹಾಕುವುದು ಅತ್ಯಂತ ಮಹತ್ವದ್ದಾ ಗಿದೆ. ಈ ನಿಟ್ಟಿನಲ್ಲಿ ಮಕ್ಕಳಿಗೆ ಗುಣ ಮಟ್ಟದ ಶಿಕ್ಷಣ ಒದಗಿಸಲು ತರಬೇ ತಿಯಲ್ಲಿ ತಿಳಿಸುವ ವಿಷಯಗಳನ್ನು ಅಧಿಕಾರಿಗಳು ತಮ್ಮ ಕಾರ್ಯಕ್ಷೇತ್ರ ದಲ್ಲಿ ಪರಿಣಾಮಕಾರಿಯಾಗಿ ಅನು ಷ್ಠಾನಗೊಳಿಸಬೇಕು ಎಂದು ತಿಳಿಸಿ ದರು.

ಬಳಿಕ, ಕಾರ್ಯಕ್ರಮದ ಅನುಷ್ಠಾನ ಹಾಗೂ ಪ್ರಗತಿಯ ಕುರಿತು ಕಲ್ಯಾಣ ಕರ್ನಾಟಕ ವ್ಯಾಪ್ತಿ ಯ ಜಿಲ್ಲೆಗಳ ಯೋಜನಾಧಿಕಾರಿಗ ಳೊಂದಿಗೆ ಚರ್ಚಿಸಿ, ಕಾರ್ಯಕ್ರಮ ವನ್ನು ಯಶಸ್ವಿಯಾಗಿ ಜಾರಿಗೊಳಿ ಸುವ ಕುರಿತು ಸಲಹೆ-ಸೂಚನೆಗಳನ್ನು ನೀಡಿದರು.

ತರಬೇತಿ ಕಾರ್ಯಕ್ರಮ ದಲ್ಲಿ ಕಲಿಕೆ ಟಾಟಾ ಟ್ರಸ್ಟ್ ನ ಶಾಲಾ ಪೂರ್ವ ಶಿಕ್ಷಣ ಕಾರ್ಯಕ್ರಮದ ಮುಖ್ಯಸ್ಥೆ ಚಿತ್ಕಲಾಂಬ, ಕಾರ್ಯ ಕ್ರಮ ಅಧಿಕಾರಿಗಳಾದ ಕೊಟ್ರೇಶ ಎ.ವೈ. ಮತ್ತು ಸವಿತಾ ಸೇರಿದಂತೆ ಏಳು ಜಿಲ್ಲೆಗಳ ಜಿಲ್ಲಾ ವ್ಯವಸ್ಥಾಪಕರು, ಕಾರ್ಯಕ್ರಮ ಸಂಯೋಜಕರು

ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಮತ್ತು ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಭಾಗವಹಿ ಸಿದ್ದರು.



ಭೀಮಾ ನದಿಗೆ 15 ಟಿಎಂಸಿ ನೀರು ಹರಿಸಲು ಆಗ್ರಹ

ಕಲಬುರಗಿ

ಬಚಾವತ್ ಆಯೋಗದ ಶಿಫಾರಸಿನಂತೆ ಮಹಾರಾಷ್ಟ್ರದ ಉಜನಿ ಅಣೆಕಟ್ಟಿನಿಂದ ಕರ್ನಾಟಕದ ಪಾಲಿನ 15 ಟಿಎಂಸಿ ನೀರನ್ನು ಭೀಮಾ ನದಿಗೆ ಹರಿಸಲು ರಾಜ್ಯ ಸರ್ಕಾರ ಕೂಡಲೇ ಮಹಾರಾಷ್ಟ್ರ ಸರ್ಕಾರದೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲಬುರಗಿ ನಗರದಲ್ಲಿ ಕುಡಿಯುವ ನೀರಿನ ಅಭಾವ ತೀವ್ರಗೊಂಡಿದ್ದು, ಜನರು, ಜಾನುವಾರುಗಳು ಹಾಗೂ ಪ್ರಾಣಿ-ಪಕ್ಷಿಗಳು ನೀರಿಗಾಗಿ ಪರದಾಡುವಂತಾಗಿದೆ. ಆದ್ದರಿಂದ ಭೀಮಾ ನದಿಗೆ ತಕ್ಷಣ ನೀರು ಹರಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕಬ್ಬು ಬೆಳೆಗಾರರ ಸಮಸ್ಯೆಗಳ ಕುರಿತು ಮಾತನಾಡಿದ ಅವರು, ಪ್ರತಿ ಟನ್ ಕಬ್ಬಿಗೆ 5,500 ರೂ. ಬೆಲೆ ನಿಗದಿಪಡಿಸಬೇಕು. ಸ್ವಾಮಿನಾಥನ್ ಆಯೋಗದ ಶಿಫಾರಸಿನಂತೆ ಬೆಂಬಲ ಬೆಲೆ ನೀಡಬೇಕು ಹಾಗೂ ಕಬ್ಬಿನ ಉಪ ಉತ್ಪನ್ನಗಳಿಂದ ದೊರೆಯುವ ಲಾಭದಲ್ಲಿ ರೈತರಿಗೆ ಶೇ. 50ರಷ್ಟು ಪಾಲು ನೀಡಬೇಕು ಎಂದು ಆಗ್ರಹಿಸಿದರು.

ಅಲ್ಲದೆ, ಕಬ್ಬಿನ ತೂಕ ಮತ್ತು ಸಕ್ಕರೆ ಇಳುವರಿಯಲ್ಲಿ ನಡೆಯುವ ಮೋಸವನ್ನು ತಡೆಗಟ್ಟಬೇಕು. ಕಬ್ಬಿನ ಕಟಾವು ಹಾಗೂ ಸಾಗಣೆ ವೆಚ್ಚವನ್ನು ಕಡಿಮೆ ಮಾಡಬೇಕು. ರಾಜ್ಯ ಸರ್ಕಾರವು

ಪ್ರತಿ ಟನ್ ಕಬ್ಬಿಗೆ 900 ರೂ. ಹೆಚ್ಚುವರಿ ಬೆಲೆ ನೀಡುವಂತೆ ರಾಜ್ಯ ಸಲಹಾ ಬೆಲೆ (ಎಸ್‌ಎಪಿ) ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ರೈತ ಮುಖಂಡರಾದ ಕರೆಪ್ಪ ಕರಗೊಂಡ, ದೇವು ಬಿರಾದಾರ, ಸಾಯಬಣ್ಣ ಕೊರಬಾ ಹಾಗೂ ಚಂದಪ್ಪ ಪೂಜಾರಿ ಉಪಸ್ಥಿತರಿದ್ದರು.

ಕಲಬುರಗಿಯಲ್ಲಿ 13.98 ಕೋಟಿ ರೂ. ಬಂಡವಾಳ ಹೂಡಿಕೆಯ 4 ಹೊಸ ಯೋಜನೆಗಳಿಗೆ ಅನುಮೋದನೆ

ಕಲಬುರಗಿ:

ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರ ಅಧ್ಯಕ್ಷತೆಯಲ್ಲಿ ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಯಲ್ಲಿ 13.98 ಕೋಟಿ ರೂ. ಬಂಡವಾಳ ಹೂಡಿಕೆಯ ನಾಲ್ಕು ಹೊಸ ಯೋಜನೆಗಳಿಗೆ ಅನುಮೋದನೆ ನೀಡಲಾಯಿತು. ಈ ಯೋಜನೆಗಳ ಅನುಷ್ಠಾನದಿಂದ ಭವಿಷ್ಯದಲ್ಲಿ 269 ಉದ್ಯೋಗಗಳ ಸೃಷ್ಟಿಗೆ ಅವಕಾಶ ದೊರೆಯಲಿದೆ.

ಜಿಲ್ಲೆಯಲ್ಲಿ ಬಂಡವಾಳ ಹೂಡಿಕೆಗೆ ಪೂರಕವಾದ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಹೆಚ್ಚಿನ ಆಸಕ್ತಿ ವಹಿಸಿ ಕಾರ್ಯನಿರ್ವಹಿಸಬೇಕು ಎಂದು ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚಿಸಿದರು.

ನಂದೂರ- ಕೆಸರಟಗಿ ಮೂರನೇ ಹಂತದ ಕೈಗಾರಿಕಾ ವಸಾಹತು ಪ್ರದೇಶದಲ್ಲಿ ಸುಮಾರು 2,000 ಉದ್ಯೋಗಗಳನ್ನು ಸೃಷ್ಟಿಸುವ ಸಿದ್ಧ ಉಡುಪುಗಳ ತಯಾರಿಕಾ ಘಟಕ ಸ್ಥಾಪನೆಗೆ ಮೆ. ಶಾಹಿ ಎಕ್ಸ್ ಪೋರ್ಟ್ ಪ್ರೈ.ಲಿ. ಸಂಸ್ಥೆಗೆ ಈಗಾಗಲೇ 16 ಎಕರೆ ಜಮೀನು ಮಂಜೂರು ಮಾಡಲಾಗಿದೆ. ಈ ಘಟಕಕ್ಕೆ ಅಗತ್ಯವಿರುವ ಸಿಬ್ಬಂದಿಗೆ ತರಬೇತಿ ನೀಡಿ ನೇಮಕ ಮಾಡಿಕೊಳ್ಳಲು ಅನುಕೂಲವಾಗುವಂತೆ,



ನಂದೂರ-ಕೆಸರಟಗಿ ಎರಡನೇ ಹಂತದಲಿ ್ಲರುವ ಟೈಸ್ ಯೋಜನೆಯಡಿ ನಿರ್ಮಿಸಿರುವ ಪ್ಲಗ್ ಆ್ಯಂಡ್ ಪ್ಲೇ ಕಟ್ಟಡದ ನೆಲಮಹಡಿಯನ್ನು ಸಂಸ್ಥೆಗೆ ನೀಡಲು ಸಭೆ ಒಪ್ಪಿಗೆ ಸೂಚಿಸಿತು. ಇದೇ ಕಟ್ಟಡದ ಮೊದಲ ಮಹಡಿಯನ್ನು ನವ ಉದ್ಯಮಿಗಳಿಗೆ ನೆರವಾಗುವ ಉದ್ದೇ ಶದಿಂದ ಕರ್ನಾಟಕ ನಾವೀನ್ಯತೆ ಮತ್ತು ತಂತ್ರಜ್ಞಾನ ಲಿಮಿಟೆಡ್ (ಕಿಟ್ಸ್) ಸಂಸ್ಥೆಗೆ ನೀಡಲಾಗಿದೆ. ಅಲ್ಲದೆ, ಉತ್ಪಾದನಾ ಬದಲಾವ ಣೆಗೆ ಸಂಬಂಧಿಸಿದ 10 ಪ್ರಕರಣಗಳ ಕುರಿತು ಸಭೆಯಲ್ಲಿ ಪರಿಶೀಲನೆ ನಡೆಸಿ, ಉತ್ಪಾದನಾ ಬದಲಾವಣೆಗೆ ಅನುಮೋದನೆ ನೀಡಲಾ ಯಿತು.

ಖಾಲಿ ನಿವೇಶನಗಳ ರದ್ದತಿಗೆ ಸೂಚನೆ :

ಜಿಲ್ಲೆಯ ವಿವಿಧ ಕೈಗಾರಿಕಾ ಪ್ರದೇಶಗಳಲ್ಲಿ ಕೈಗಾರಿಕೆ ಸ್ಥಾಪಿಸಲು ನಿವೇಶನ ಪಡೆದು ಹಲವು ವರ್ಷಗಳಿಂದ ಯೋಜನೆ ಅನುಷ್ಠಾನಗೊಳಿಸದೆ ಖಾಲಿ ಬಿಟ್ಟಿರುವ ನಿವೇಶನಗಳ ಸಮೀಕ್ಷೆ ನಡೆಸಲಾಗಿದೆ. ಈ ಹಿನ್ನೆಲೆಯಲ್ಲಿ ಖಾಲಿ ನಿವೇಶನಗಳನ್ನು ನಿಯಮಾನುಸಾರ ಒಂದು ತಿಂಗಳ ಅವಧಿಯಲ್ಲಿ ರದ್ದುಗೊಳಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚಿಸಿದರು. ರದ್ದುಗೊಳಿಸಿದ ನಿವೇಶನಗಳನ್ನು ಆಸಕ್ತ ನವ ಉದ್ಯಮಿಗಳಿಗೆ ಮರುಹಂಚಿಕೆ ಮಾಡುವಂತೆಯೂ ನಿರ್ದೇಶನ ನೀಡಿದರು.

ಕೈಗಾರಿಕೆಗಳಿಗೆ ನೀರು ಪೂರೈಕೆ :

ಕಲಬುರಗಿ ಜಿಲ್ಲೆಯ 1,919.21 ಎಕರೆ ವಿಸ್ತೀರ್ಣದ ಕಪನೂರ ಮೊದಲ, ಎರಡನೇ ಮತ್ತು ಮೂರನೇ ಹಂತ ಹಾಗೂ ನಂದೂರ-ಕೆಸರಟಗಿ ಮೊದಲ ಮತ್ತು ಎರಡನೇ ಹಂತ ಸೇರಿದಂತೆ ಒಟ್ಟು ಒಂಬತ್ತು ಕೆಐಎಡಿಬಿ ಕೈಗಾರಿಕಾ ಪ್ರದೇಶಗಳು ಮತ್ತು ನಾಲ್ಕು ಕೆಎಸ್‌ಎಸ್‌ಐಡಿಸಿ ಕೈಗಾರಿಕಾ ವಸಾಹತುಗಳಲ್ಲಿ ರುವ ಸುಮಾರು 1,272 ಕೈಗಾರಿಕಾ ಘಟಕಗಳಿಗೆ ಬೆಣ್ಣೆತೋರಾ ಜಲಾಶಯದಿಂದ ದಿನಕ್ಕೆ 20 ಎಂಎಲ್‌ಡಿ ನೀರು ಪೂರೈಸುವ ಯೋಜನೆ ಕೈಗೆತ್ತಿಕೊಳ್ಳಲಾಗಿದೆ.

118 ಕೋಟಿ ರೂ. ವೆಚ್ಚದ ಈ ಅಭಿವೃದ್ಧಿ ಕಾಮಗಾರಿಯನ್ನು ಕೆಐಎಡಿಬಿ ಅನುಷ್ಠಾನಗೊಳಿಸುತ್ತಿದೆ. ಹಲವು ವರ್ಷಗಳಿಂದ ಎದುರಿಸುತ್ತಿದ್ದ ನೀರಿನ ಸಮಸ್ಯೆಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಕ್ಕೆ ಸಭೆಯಲ್ಲಿ ಉಪಸ್ಥಿತರಿದ್ದ ಕೈಗಾರಿಕೋದ್ಯಮಿಗಳ ಪ್ರತಿನಿಧಿಗಳು ಸಂತಸ ವ್ಯಕ್ತಪಡಿಸಿ ಕೃತಜ್ಞತೆ ಸಲ್ಲಿಸಿದರು.

ಸಭೆಯಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಅಬ್ದುಲ್ ಅಜೀಮ್, ಅಧಿಕಾರಿಗಳಾದ ರುಪಾಲಿ, ನಳಿನಿ ಮತ್ತು ಜಾಫರ್ ಅನ್ಸಾ ರಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಕೈಗಾರಿಕಾ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಸಕ್ಕರೆ ಕಾರ್ಖಾನೆ-ಕಬ್ಬು ಬೆಳೆಗಾರರ ಸಭೆ ದರ ನಿಗದಿ ಮಾಡಿಕೊಂಡೆ ಕಬ್ಬು ಕಟಾವು ಆರಂಭಿಸಬೇಕು -ಡಿಸಿ ಇಕ್ರಂ ಶರೀಫ್

ಕಲಬುರಗಿ

ಪ್ರಸಕ್ತ 2026-27ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಬೆಳೆಯಲಾದ ಕಬ್ಬು ಕಟಾವು ಪ್ರಕ್ರಿಯೆ ಬಂದಿದ್ದು, ರೈತರಿಂದ ಕಬ್ಬು ಖರೀದಿ ಮುನ್ನ ಪ್ರತಿ ಟನ್‌ಗೆ ನೀಡಲಾಗುವ ದರ, ಸಾಗಾಣಿಕೆ ವೆಚ್ಚ ಸೇರಿದಂತೆ ಇನ್ನಿತರ ವಿಷಯಗಳ ಕುರಿತು ಮುಂದಿನ ಒಂದು ವಾರದಲ್ಲಿ ಸೂಕ್ತವಾದ ನಿರ್ಧಾರಕ್ಕೆ ಬಂದು ಕಬ್ಬು ಕಟಾವು ಪ್ರಕ್ರಿಯೆ ಆಂಭಿಸುವಂತೆ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳಿಗೆ ಡಿ.ಸಿ. ಇಕ್ರಂ ಶರೀಫ್ ಸೂಚನೆ ನೀಡಿದರು.

ಗುರುವಾರ ಇಲ್ಲಿನ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗ ಣದಲ್ಲಿ ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಕಾರ್ಖಾನೆ ಪ್ರತಿನಿಧಿಗಳ ಸಭೆಯಲ್ಲಿ ಕಬ್ಬು ಬೆಳೆಗಾರರು ಮತ್ತು ರೈತ ಸಂಘದ ಮುಖಂಡರುಗಳ ಅಹವಾಲು ಆಲಿಸಿ ಮಾತನಾಡಿದ ಅವರು, ಕಬ್ಬು ಕಟಾವಿಗೆ ಬಂದಿರು ವುದರಿಂದ ವಿಳಂಬ ಮಾಡದೆ ಕಳೆದ ವರ್ಷದಂತೆ ಈ ವರ್ಷ ಸಹ ಜಿಲ್ಲೆಯ ಎಲ್ಲಾ ಐದು ಕಾರ್ಖಾನೆಗಳು ಪರಸ್ಪರ ಸಮಾಲೋಚನೆ ನಡೆಸಿ ರೈತರಿಗೆ ನ್ಯಾಯಯುತ ದರ ನೀಡುವ ನಿಟ್ಟಿನಲ್ಲಿ ಶೀಘ್ರದಲ್ಲಿಯೇ ಒಮ್ಮ ತ್ತದ ನಿರ್ಧಾರ ತೆಗೆದುಕೊಳ್ಳಬೇಕು ಎಂದರು.

ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ಭೀಕರ ಬರಗಾಲದಿಂದ ರೈತರು ತತ್ತರಿಸಿದ್ದು, ಸಕ್ಕರೆ ಕಾರ್ಖಾನೆಗಳು ಜಿಪುಣತನ ಬಿಟ್ಟು ಉದಾರ ಮನಸ್ಸಿ ನಿಂದ ಪ್ರತಿ ಟನ್ ಕಬ್ಬಿಗೆ ದರ ನಿಗದಿ ಮಾಡಬೇಕು. ಎಥನಾಯಿಲ್, ಸಕ್ಕರೆ ಬೆಲೆ ಹೆಚ್ಚಾಗಿದೆ. ದಿನದಿಂದ ದಿನಕ್ಕೆ ಬೆಲೆ ಏರಿಕೆಯಿಂದ ಕಾರ್ಖಾನೆ ಗಳಿಗೆ ಲಾಭವಿದ್ದು, ಲಾಭದ ಅಂಶ ರೈತರಿಗೂ ಹಂಚಿ ಎಂದು ಕಾರ್ಖಾನೆ ಪ್ರತಿನಿಧಿಗಳಿಗೆ ಡಿ.ಸಿ. ಸಲಹೆ ನೀಡಿದರು.

ಕಬ್ಬು ಕಟಾವಿನಲ್ಲಿ ತಾರತಮ್ಯ, ಪ್ರತಿ ಕಂಪನಿಯ ಪ್ರತ್ಯೇಕ ದರ, ತೂಕದಲ್ಲಿ ಮೋಸ, ತಡವಾಗಿ ಪಾವತಿ, ಹಳೇ ಪಾವತಿ ಬಾಕಿ ಕುರಿತು ಕಾರ್ಖಾನೆಗಳ ನಡೆಗೆ ಅಸಮಾಧಾನ ವ್ಯಕ್ತಪಡಿಸಿದ ಜಿಲ್ಲಾಧಿಕಾರಿಗಳು, ರೈತರಿಗೆ ಕಾಲಮಿತಿಯಲ್ಲಿ ಹಣ ಪಾವತಿ ಮಾಡಬೇಕು.

ಕಬ್ಬು ಕಟಾವು, ಕಬ್ಬಿನ ತೂಕ, ಹಣ ಪಾವತಿ ಹೀಗೆ ಪ್ರತಿ ಹಂತದಲ್ಲಿ ರೈತರಿಗೆ ಎಸ್.ಎಂ.ಎಸ್. ಮೂಲಕ



ಮಾಹಿತಿ ನೀಡುವ ವ್ಯವಸ್ಥೆ ಎಲ್ಲಾ ಕಾರ್ಖಾನೆ ಗಳು ಜಾರಿಗೆ ತರಬೇಕು ಎಂದ ಅವರು, ಕಬ್ಬು ತೂಕದಲ್ಲಿ ಕಾರ್ಖಾ ನೆಯಿಂದ ಮೋಸವಾಗುತ್ತಿದೆ ಎಂಬ ರೈತ ಮುಖಂಡರ ಅಭಿಪ್ರಾಯದ ಹಿನ್ನೆಲೆಯಲ್ಲಿ ಕಾನೂನು ಮಾಪನ ಶಾಸ್ತ್ರ ಇಲಾಖೆಯ ಅಧಿಕಾರಿಗಳು ಆಗಾಗ ಸಕ್ಕರೆ ಕಾರ್ಖಾನೆಗಳಿಗೆ ಹಠಾತ್ ಭೇಟಿ ನೀಡಿ ತಪಾಸಣೆ ಮಾಡಬೇಕು ಎಂದರು.

ಶೆಲ್ಟರ್, ಕುಡಿಯುವ ನೀರು ಒದಗಿಸಿ: ಸಭೆಯಲ್ಲಿ ರೈತ ಮುಖಂ ಡ ಈರಣ್ಣ ಭಜಂತ್ರಿ ಮಾತನಾಡಿ ಕೆಲವೊಮ್ಮೆ ರೈತ ಕಬ್ಬು ಕಟಾವು ಮಾಡಿಕೊಂಡು ಕಾರ್ಖಾನೆಗೆ ತೆಗೆದುಕೊಂಡು ಹೋಗಿದ್ದಾಗ ಅಲ್ಲಿಯೆ ರಾತ್ರಿ ಕಳೆಯಬೇಕಾ ಗುತ್ತದೆ. ಉಗಾರ್-ಸುಗರ್ ಕಾರ್ಖಾನೆಯಲ್ಲಿ ರಾತ್ರಿ ಕಳೆಯಲು ಸೂಕ್ತ ಶೆಡ್, ಕುಡಿಯುವ ನೀರು, ಶೌಚಾಲಯದಂತಹ ಕನಿಷ್ಠ ಮೂಲ ಸೌಲಭ್ಯ ಇಲ್ಲ ಎಂದು ಡಿ.ಸಿ. ಗಮನಕ್ಕೆ ತಂದರು. ಇದಕ್ಕೆ ಸ್ಪಂದಿಸಿದ ಡಿ.ಸಿ. ಅವರು, ನಾವು ತಪಾಸಣೆಗೆ ಬಂದಾಗ ಎ.ಸಿ. ರೂಮ್‌ನಲ್ಲಿ ತಂಗಿಸಿ ಊಟೋಪಚಾರ ಮಾಡುತ್ತೀರಿ, ರೈತರಿಗೆ ಏಕೆ ಗೌರವ ಕೊಡಲ್ಲ. ಅನ್ನದಾತನಿಗೆ ಕನಿಷ್ಠವಾಗಿ ಕಾಣು ವುದನ್ನು ಸಹಿಸುವುದಿಲ್ಲ ಎಂದು ಎಚ್ಚರಿಸಿದ ಅವರು, ಎಲ್ಲಾ ಕಾರ್ಖಾ ನೆಗಳು ರೈತರಿಗೆ ಕನಿಷ್ಠ ಮೂಲ ಸೌಕರ್ಯಗಳನ್ನು ಒದಗಿಸಬೇಕು ಎಂದು ಕಾರ್ಖಾನೆಗಳಿಗೆ ಖಡಕ್ ಸೂಚನೆ ನೀಡಿದರು.

ರೇಣುಕಾ ಶುಗರ್ಸ್ ಕಾರ್ಖಾ ನೆಗೆ ನೋಟಿಸ್: ಸಭೆಯಲ್ಲಿ ಭಾಗವಹಿಸಿದ ರೈತ ಮುಖಂಡ ರಮೇಶ ಪಾಟೀಲ ಮಾತನಾಡಿ, ರೇಣಿಕಾ ಶುರ್ಸ್ ಕಾರ್ಖಾನೆಯಿಂದ ಹೊರಸೂಸುವ ಬೂದಿಯಿಂದ ಕಾರ್ಖಾನೆ ಸುತ್ತ ಬೆಳೆಯುತ್ತಿರುವ ಬೆಳೆಗಳು ಹಾನಿಯಾಗಿವೆ. ಇದರಿಂದ ರೈತರು ಕಂಗೆಟ್ಟಿದ್ದು ಕಾರ್ಖಾನೆ ಯಿಂದಲೆ ಪರಿಹಾರ ಒದಗಿಸಬೇ ಕೆಂದು ಸಭೆಯಲ್ಲಿ ಪ್ರಸ್ತಾಪಿಸಿದರು.

ಇದಕ್ಕೆ ತೀವ್ರ ಗರಂ ಆದ ಡಿ.ಸಿ. ಇಕ್ರಂ ಶರೀಫ್ ಅವರು, ಇಷ್ಟೊಂದು ತಂತ್ರಜ್ಞಾನ ಇದ್ದರು ಸಂಸ್ಕರಿಸದ ಕಲುಷಿತ ಹೊಗೆ ಹೊರಗೇಕೆ? ಎಂದು ಕಾರ್ಖಾನೆ ಅಧಿಕಾರಿಗಳನ್ನು ಪ್ರಶ್ನಿಸಿದ ಅವರು ಪರಿಸರ ಮಾಲಿನ್ಯ ತಡೆಗಟ್ಟಲು ವಿಫಲವಾಗಿದ್ದಕ್ಕೆ ಕೂಡಲೆ ಕಾರ್ಖಾನೆಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡುವಂತೆ ಪರಿಸರ ಅಧಿ ಕಾರಿ ವೆಂಕಟೇಶ ಅವರಿಗೆ ನಿರ್ದೇಶನ ನೀಡಿದ ಜಿಲ್ಲಾಧಿಕಾರಿಗಳು, ಇನ್ನೇ ನು ಕಬ್ಬು ನುರಿಸುವ ಕಾರ್ಯ ಆರಂಭವಾಗಲಿರುವ ಕಾರಣ ಎಲ್ಲಾ ಕಾರ್ಖಾನೆಗಳಿಗೆ ಭೇಟಿ ನೀಡಿ ಪರಿಸರ ಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳ ಕುರಿತು ಸಹ ಪರಿಶೀಲಿಸುವಂತೆ ಸೂಚಿಸಿದರು.

ರೈತರ ಬೇಡಿಕೆಗಳೇನು?: ಬರಗಾಲ ಇರುವ ಕಾರಣ ಈ ವರ್ಷ 5,500 ರೂ. ಎಫ್.ಆರ್.ಪಿ. ದರ ನಿಗದಿ ಮಾಡಬೇಕು, ಬಾಕಿ ಹಣ ಕೂಡಲೆ ಪಾವತಿಸಬೇಕು, ಕಬ್ಬು ಕಟಾವಿನಲ್ಲಿ ತಾರತಮ್ಯ ಮಾಡಬಾರದು, ಎಲ್ಲಾ ಕಂಪನಿಗಳು ಎಫ್.ಆರ್.ಪಿ ಕ್ಕಿಂತ ಹೆಚ್ಚಿನ ಒಂದೇ ದರ ನಿಗದಿ ಮಾಡಬೇಕು, ಟೋಲ್ ಗೇಟ್ ಪಾವತಿಯಿಂದ ವಿನಾಯ್ತಿ ನೀಡಬೇಕು, ತೂಕದಲ್ಲಿ ಮೋಸ ತಪ್ಪಿಸಲು ಕಾರ್ಖಾನೆ ಗೇಟ್ ಬಳಿ ತೂಕ ಮಾಡಿಯೇ ಕಬ್ಬು ತೆಗೆದು ಕೊಳ್ಳಬೇಕು, ರಾಜ್ಯ ಸರ್ಕಾರ 500 ರೂ. ಹೆಚ್ಚುವರಿ ಪ್ರೋತ್ಸಾ ಹ ಘೋಷಣೆ ಮಾಡಬೇಕು,

ವಿದ್ಯುತ್ ಅವಘಡದಿಂದ ಕಬ್ಬು ಸುಟ್ಟ ರೈತರಿಗೆ ಪರಿಹಾರ ನೀಡಬೇಕು, ಹಣ ಪಾವತಿ ಮತ್ತು ಬಾಕಿ ಕುರಿತು ಎಸ್.ಎಂ.ಎಸ್ ಕಳುಹಿಸಬೇಕು ಎಂಬಿತ್ಯಾದಿ ಬೇಡಿ ಕೆಗಳನ್ನು ಈಡೇರಿಸುವಂತೆ ಡಿ.ಸಿ. ಮತ್ತು ಕಾರ್ಖಾನೆ ಪ್ರತಿನಿಧಿಗಳ ಮುಂದೆ ರೈತ ಮುಖಂಡರು ಬೇಡಿಕೆ ಇಟ್ಟರು.

ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಮಾರುತಿ ಬ್ಯಾಕೋಡ್ ಪ್ರಾಸ್ತಾವಿಕ 'ವಾಗಿ ಮಾತನಾಡಿ, ಪ್ರಸಕ್ತ 2026-27ನೇ ಸಾಲಿಗೆ ಜಿಲ್ಲೆಯಲ್ಲಿ 40,124 ಹೆಕ್ಟೇರ್ ಪ್ರದೇಶದಲಿ ಕಬ್ಬು ಬೆಳೆಯಲಾಗಿದ್ದು, ಕಳೆದ ವರ್ಷದ ನುರಿಸಿದ ಕಬ್ಬಿನಿಂದ ಉತ್ಪಾದಿಸಿದ ಸಕ್ಕರೆ ಪ್ರಮಾಣದ ಆಧಾರದ ಮೇಲೆ ಈ ವರ್ಷ ಜಿಲ್ಲೆಯಲ್ಲಿ ಪ್ರತಿ ಟನ್ ಕಬ್ಬಿಗೆ ಕೆ.ಪಿ.ಆರ್ ಶುರ್ಸ್ ಅಪ್ಪಾರೆಲ್ಸ್ ಲಿ. ಕಾರ್ಖಾನೆಗೆ 3,846 ರೂ., ಎನ್.ಎಸ್.ಎಲ್. ಶುಗರ್ ಕಾರ್ಖಾನೆಗೆ 3,703 ರೂ., ಶ್ರೀ ರೇಣುಕಾ ಶುಗರ್ಸ್ ಕಾರ್ಖಾನೆಗೆ 3,760 ರೂ., ದಿ. ಉಗಾರ್ ಶುಗರ್ ವರ್ಕ್ಸ್ ಲಿ. ಕಾರ್ಖಾನೆಗೆ 3,803 ರೂ. ಹಾಗೂ ಸಿದ್ದಸಿರಿ ಸೌಹಾರ್ದ ಸಹಕಾರಿ ನಿ. ಕಾರ್ಖಾನೆಗೆ 3,419 ರೂ. ಎಫ್. ಆರ್.ಪಿ. ನಿಗದಿ ಮಾಡಿದೆ ಎಂದರ ಲ್ಲದೆ ಕಳದ ವರ್ಷದಂತೆ ಈ ವರ್ಷ ಸಹ ರೈತರು-ಕಾರ್ಖಾನೆಗಳೊಂದಿಗೆ ಸಮಾಲೋಚಿಸಿ ಒಪ್ಪಂದದ ನ್ಯಾಯ ಯುತ ದರ ನಿಗದಿ ಮಾಡಬೇಕಿದೆ ಎಂದು ತಿಳಿಸಿದರು.

ಚರ್ಚೆಯಲ್ಲಿ ರೈತ ಸಂಘದ ಮುಖಂಡರುಗಳಾದ ರಮೇಶ ಹೂಗಾರ, ಶರಣಬಸಪ್ಪ ಮಮಶೆಟ್ಟಿ, ಧರ್ಮರಾಜ ಸಾಹು, ಶ್ರೀಮಂತ ಬಿರಾದಾರ, ರಮೇಶ ಪಾಟೀಲ ಅವರು ಮಾತನಾಡಿ ಕಬ್ಬು ಬೆಳೆಗಾ ರರ ಸಮಸ್ಯೆ ಮತ್ತು ಬೇಡಿಕೆಗಳನ್ನು ಡಿ.ಸಿ. ಮುಂದಿಟ್ಟರು.



ಆಲಮಟ್ಟಿ ಜಲಾಶಯದಿಂದ ಜನರ ಜೀವನಮಟ್ಟ ಸುಧಾರಣೆ : ಈಶ್ವರ ತೆರದಾಳ

ಬಾಗಲಕೋಟೆ

ಆಲಮಟ್ಟಿ ಜಲಾಶಯವು ಉತ್ತರ ಕರ್ನಾಟಕದ ಜನರ ಜೀವನಮಟ್ಟ ಸುಧಾರಿಸುವುದರೊಂದಿಗೆ ಸುಸ್ಥಿರ ಅಭಿವೃದ್ಧಿ ಗುರಿಗಳ ಸಾಧನೆಗೆ ಸಹಕಾರಿಯಾಗಿದೆ ಎಂದು ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯ ಈಶ್ವರ ತೆರದಾಳ ಹೇಳಿದರು. ಬಾಗಲಕೋಟೆ ಜಿಲ್ಲಾ ತರಬೇತಿ ಸಂಸ್ಥೆಯಲ್ಲಿಂದು ಅಕ್ಟೋಬರ 13 ರಿಂದ 14ರವರೆಗೆ ಸರ್ಕಾರಿ ಸಿ ವೃಂದದ ನೌಕರರು ಮತ್ತು ಅಧಿಕಾರಿಗಳಿಗಾಗಿ ಆಯೋಜಿಸಿದ್ದ ಎರಡು ದಿನಗಳ ಸುಸ್ಥಿರ ಅಭಿವೃದ್ಧಿ ಗುರಿಗಳ ಪರಿಚಯಾತ್ಮಕ ತರಬೇತಿ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೃಷ್ಣಾ, ಮಲಪ್ರಭಾ ಹಾಗೂ ಘಟಪ್ರಭಾ ನದಿಗಳ ಜಲಸಂಪನ್ಮೂಲದಿಂದ ನಿರ್ಮಾಣಗೊಂಡ ಆಲಮಟ್ಟಿ ಜಲಾಶಯವು ಬಾಗಲಕೋಟೆ ಸೇರಿದಂತೆ ಉತ್ತರ ಕರ್ನಾಟಕದ ಹಲವು ಜಿಲ್ಲೆಗಳ ಕೃಷಿ ಪ್ರದೇಶಗಳಿಗೆ ನೀರಾವರಿ ಸೌಲಭ್ಯ ಒದಗಿಸಲು ನೆರವಾಗಿದೆ ಎಂದರು.

ಕಬ್ಬು, ಜೋಳ, ದ್ರಾಕ್ಷಿ, ದಾಳಿಂಬೆ, ತೊಗರಿ ಸೇರಿದಂತೆ ವಿವಿಧ ಬೆಳೆಗಳ ಉತ್ಪಾದನೆ ಹಾಗೂ ಬೆಳೆ ವೈವಿಧ್ಯೀಕರಣಕ್ಕೆ ಅವಕಾಶ ದೊರೆತಿದೆ. ಬರಗಾಲದ ಸಂದರ್ಭದಲ್ಲಿ ಕುಡಿಯುವ ನೀರಿನ ನಿರ್ವಹಣೆಗೂ ಸಹಕಾರಿಯಾಗಿದೆ ಎಂದು ಈಶ್ವರ ಹೇಳಿದರು.

ಜಿಲ್ಲಾ ತರಬೇತಿ ಸಂಸ್ಥೆಯ ಬೋಧಕ ಮಲ್ಲಿಕಾರ್ಜುನ ಗುಡೂರ ಮಾತನಾಡಿ, ಕೃಷಿ, ತೋಟಗಾರಿಕೆ, ಸಕ್ಕರೆ ಕಾರ್ಖಾನೆಗಳು, ಕೃಷಿ ಆಧಾರಿತ ಕೈಗಾರಿಕೆಗಳು ಹಾಗೂ ಕೃಷಿ ಸಂಸ್ಕರಣೆಗಳು ಜಿಲ್ಲೆಯ ಗ್ರಾಮೀಣ ಆರ್ಥಿಕತೆಯ ಬೆಳವಣಿಗೆಗೆ ಪ್ರಮುಖವಾಗಿವೆ ಎಂದು ತಿಳಿಸಿದರು. ಬೋಧಕ ವಿಜಯಕುಮಾರ ಉತ್ನಾಳ ಮಾತನಾಡಿ, ಪಟ್ಟದಕಲ್ಲು, ಬಾದಾಮಿ, ಐಹೊಳೆ, ಮಹಾಕೂಟ ಹಾಗೂ ಬಾದಾಮಿ ಕೋಟೆಯಂತಹ ಐತಿಹಾಸಿಕ ತಾಣಗಳು, ಇಳಕಲ್ ಸೀರೆ ಮತ್ತು ಮುಧೋಳ ನಾಯಿ ತಳಿಯಂತಹ ಸ್ಥಳೀಯ ಸಂಪನ್ಮೂಲಗಳು ಸುಸ್ಥಿರ ಅಭಿವೃದ್ಧಿಗೆ ಪೂರಕವಾಗಿವೆ ಎಂದರು.

ಮುಖ್ಯ ಅತಿಥಿ ಹಾಗೂ ತರಬೇತಿ ಸಂಯೋಜಕರಾಗಿ ಡಾ. ಸಿದ್ದರಾಮ ಎಚ್.ಎಂ. ಭಾಗವಹಿಸಿ ಸುಸ್ಥಿರ ಅಭಿವೃದ್ಧಿ ಗುರಿಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು. ತರಬೇತಿಯಲ್ಲಿ ವಿವಿಧ ಇಲಾಖೆಗಳ 45 ಸಿ ವೃಂದದ ನೌಕರರು ಭಾಗವಹಿಸಿದ್ದರು.

ಒಂದನೇಯ ಪುಟದಿಂದ

ವಿಬಿ-ಜಿ ರಾಮ್ ಜಿ ಯೋಜನೆಯಡಿ ಮಾನವ ದಿನಗಳ ಸೃಜನೆಗೆ ಸಿಇಓ ಸೂಚನೆ
ತೆರಿಗೆ ವಸೂಲಾತಿ ಹೆಚ್ಚಳಕ್ಕೆ ಆದ್ಯತೆ ನೀಡಿ: ಈಶ್ವರ್ಕುಮಾರ್ ಕಾಂದೂ

ರವರು, ಕೆಲಸವನ್ನು ನಿಗದಿತ ಅಳತೆಗೆ ಅನುಗುಣವಾಗಿ ನಿರ್ವಹಿಸಿದರೆ ಪುರುಷ ಮತ್ತು ಮಹಿಳಾ ಕಾರ್ಮಿಕರಿಗೆ ಸಮಾನವಾಗಿ ರೂ.382/- ಕೂಲಿ ದೊರೆಯುತ್ತದೆ ಎಂದು ತಿಳಿಸಿದರು. ಯೋಜನೆಯಡಿ ದೊರೆಯುವ 125 ದಿನಗಳ ಉದ್ಯೋಗಾವಕಾಶವನ್ನು ಸಮರ್ಪಕವಾಗಿ ಬಳಸಿಕೊಳ್ಳುವಂತೆ ಕಾರ್ಮಿಕರಿಗೆ ಸಲಹೆ ನೀಡಿದರು.

ನಂತರ ಅರಕೇರಾ ಗ್ರಾಮದಲ್ಲಿರುವ ಕಿಶೋರಿ ಕೇಂದ್ರಕ್ಕೆ ಭೇಟಿ ನೀಡಿ, ಕೇಂದ್ರದ ಕಾರ್ಯನಿರ್ವಹಣೆ ಹಾಗೂ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ. ವಾಲ್ಮೀಕಿ, ಸಹಾಯಕ ನಿರ್ದೇಶಕರು ಶ್ರೀ ಅಣ್ಣರಾವ್, ಗ್ರಾ ಪಂಯ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಎಮ್.ಐಎಸ್, ಸಂಯೋಜಕ, ತಾಂತ್ರಿಕ ಸಂಯೋಜಕ, ಟಿಎಂಐಎಸ್ ಸಂಯೋಜಕ ಹಾಗೂ ಗ್ರಾ.ಪಂ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಒಂದು ರಸ್ತೆ ಸುಧಾರಿಸಲು ಸಿಎಂ ಅಧಿಕಾರ ಬೇಕಾ? -ರಾಮನಗೌಡ ಏಗನೂರು ಆಕ್ರೋಶ

ಸಮಸ್ಯೆ ಮುಂದುವರಿದರೆ ಜನರು ತಮ್ಮ ಸಮಸ್ಯೆಗಳನ್ನು ಯಾರ ಬಳಿ ಹೇಳಿಕೊಳ್ಳಬೇಕು? ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವುದು ಯಾವಾಗ? ಎಂದು ಪ್ರಶ್ನಿಸಿದರು.

ಇದೇ ರಸ್ತೆಯಲ್ಲಿರುವ ವಿದ್ಯುತ್ ಟ್ರಾನ್ಸ್ ಫಾರ್ಮರ್ ಹಾಗೂ ಚರಂಡಿಯಿಂದ ಮೇಲಕ್ಕೆ ಬಂದಿರುವ ಪೈಪ್‌ಗಳು ಸಾರ್ವಜನಿಕರ ಸುರಕ್ಷತೆಗೆ ಸವಾಲಾಗಿವೆ. ರಾತ್ರಿ ವೇಳೆ ಈ ಮಾರ್ಗದಲ್ಲಿ ಸಂಚರಿಸುವವರಿಗೆ ರಸ್ತೆಯ ನೈಜ ಸ್ಥಿತಿ ತಿಳಿಯದೆ ಅಪಘಾತ ಸಂಭವಿಸುವ ಅಪಾಯವಿದೆ. ವಿಶೇಷವಾಗಿ ಈ ಪ್ರದೇಶದ ಪರಿಚಯವಿಲ್ಲದವರು ಸಂಚರಿಸುವಾಗ ಹೆಚ್ಚಿನ ಎಚ್ಚರಿಕೆ ವಹಿಸಬೇಕಾದ ಪರಿಸ್ಥಿತಿ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

ಜನರು ಜೀವ ಕೈಯಲ್ಲಿ ಹಿಡಿದು ಸಂಚರಿಸುವ ಸ್ಥಿತಿ:

ಪ್ರತಿದಿನ ಸಾವಿರಾರು ವಾಹನಗಳು ಮತ್ತು ಸಾರ್ವಜನಿಕರು ಸಂಚರಿಸುವ ರಸ್ತೆಯಲ್ಲಿ ಇಂತಹ ಅವ್ಯವಸ್ಥೆ ಮುಂದುವರಿದರೆ ಅಪಘಾತಗಳಿಗೆ ಆಹ್ವಾನ ನೀಡಿದಂತಾಗುತ್ತದೆ. ರಸ್ತೆ ಹಾಗೂ ಚರಂಡಿಯನ್ನು ಸಮರ್ಪಕವಾಗಿ ನಿರ್ವಹಿಸದ ಕಾರಣ ಸಾರ್ವಜನಿಕರು ಜೀವ ಕೈಯಲ್ಲಿ ಹಿಡಿದು ಸಂಚರಿಸುವಂತಾಗಿದೆ. ಅಪರಿಚಿತರು ರಾತ್ರಿ ವೇಳೆ ಈ ರಸ್ತೆಯಲ್ಲಿ ಸಂಚರಿಸಿದರೆ ಅಪಾಯಕ್ಕೆ ಸಿಲುಕುವ ಸಾಧ್ಯತೆಯಿದೆ. ಇಂತಹ ಸ್ಥಿತಿಯನ್ನು ನಿರ್ಲಕ್ಷಿಸುವುದು ಸರಿಯಲ್ಲ ಎಂದು ರಾಮನಗೌಡ ಏಗನೂರು ಆಕ್ರೋಶ ವ್ಯಕ್ತಪಡಿಸಿದರು.

ಒಂದು ಕಡೆ ನಗರದ ಅಭಿವೃದ್ಧಿಯ ಬಗ್ಗೆ ಮಾತನಾಡಲಾಗುತ್ತದೆ. ಮತ್ತೊಂದೆಡೆ ಜನರು ಪ್ರತಿದಿನ ಬಳಸುವ ಪ್ರಮುಖ ರಸ್ತೆಯೇ ಅವ್ಯವಸ್ಥೆಯಿಂದ ಕೂಡಿದ್ದರೆ ಅಭಿವೃದ್ಧಿಯ ಮಾತುಗಳಿಗೆ ಅರ್ಥವೇನು? ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಕೇವಲ ಭರವಸೆ ನೀಡುವುದಕ್ಕಿಂತ ಸಮಸ್ಯೆಯ ಸ್ಥಳಕ್ಕೆ ಭೇಟಿ ನೀಡಿ, ವಾಸ್ತವ ಸ್ಥಿತಿಯನ್ನು ಅರಿತು ಪರಿಹಾರಕ್ಕೆ ಮುಂದಾಗಬೇಕು ಎಂದು ಒತ್ತಾಯಿಸಿದರು.

ಸಮಸ್ಯೆ ಪರಿಹಾರಕ್ಕೆ ತಕ್ಷಣ ಕ್ರಮ ಕೈಗೊಳ್ಳಲು ಆಗ್ರಹ ಚಂದ್ರಮೌಳೇಶ್ವರಿ ದೇವಸ್ಥಾನದ ಮುಂಭಾಗದ ರಸ್ತೆಯಲ್ಲಿರುವ ಒತ್ತುವರಿಯನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ರಸ್ತೆ ಮತ್ತು ಚರಂಡಿಯನ್ನು ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಬೇಕು. ಚರಂಡಿಯಲ್ಲಿರುವ ಪೈಪ್‌ಗಳಿಂದ ಸಾರ್ವಜನಿಕರಿಗೆ ತೊಂದರೆಯಾಗದಂತೆ ವ್ಯವಸ್ಥೆ ಮಾಡಬೇಕು. ವಿದ್ಯುತ್ ಟ್ರಾನ್ಸ್ ಫಾರ್ಮರ್ ಸುತ್ತಲಿನ ಸುರಕ್ಷತೆಯನ್ನೂ ಪರಿಶೀಲಿಸಬೇಕು. ರಾತ್ರಿ ವೇಳೆ ಅಪಘಾತ ಸಂಭವಿಸದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳನ್ನು ಆಗ್ರಹಿಸಿದರು.

ಜನರ ಸಮಸ್ಯೆಗಳನ್ನು ಪರಿಹರಿಸಲು ದೊಡ್ಡ ದೊಡ್ಡ ಯೋಜನೆಗಳೇ ಬೇಕಿಲ್ಲ; ಮೊದಲು ಜನರು ಪ್ರತಿದಿನ ಎದುರಿಸುತ್ತಿರುವ ಮೂಲಭೂತ ಸಮಸ್ಯೆಗಳಿಗೆ ಸ್ಪಂದಿಸುವ ಮನೋಭಾವ ಬೇಕು. ಸಾರ್ವಜನಿಕರ ಜೀವ ಮತ್ತು ಸುರಕ್ಷತೆಗೆ ಆದ್ಯತೆ ನೀಡಿ, ಈ ರಸ್ತೆಯ ಸಮಸ್ಯೆಯನ್ನು ಕೂಡಲೇ ಪರಿಹರಿಸಬೇಕು ಎಂದು ರಾಮನಗೌಡ ಏಗನೂರು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡ ಆದಿರಾಜ ಇದ್ದರು.

ಜಿ.ಪಂ ಮೀಸಲಾತಿ ಕರಡಿನಲ್ಲಿ ಬಿಸಿಎಂ-ಬಿ ಪ್ರವರ್ಗಕ್ಕೆ ಒಂದೂ ಕ್ಷೇತ್ರವಿಲ್ಲ ಭಾನುಪ್ರಕಾಶ್ ಕೆ

ವರ್ಗಗಳಿಗೂ ಸೂಕ್ತ ರಾಜಕೀಯ ಪ್ರಾತಿನಿಧ್ಯ

ಅವಕಾಶವೇ ಸಿಗದಂತಾದರೆ ಆ ಸಮುದಾಯದ ರಾಜಕೀಯ ಪ್ರಾತಿನಿಧ್ಯಕ್ಕೆ ಹಿನ್ನಡೆಯಾಗುತ್ತದೆ. ಇದು ಕೇವಲ ವೀರಶೈವ ಲಿಂಗಾಯತ ಸಮುದಾಯಕ್ಕೆ ಸಂಬಂಧಿಸಿದ ವಿಷಯವಲ್ಲ, ಸಾಮಾಜಿಕ ನ್ಯಾಯ ಹಾಗೂ ಸಮಾನ ಅವಕಾಶದ ಪ್ರಶ್ನೆಯಾಗಿದೆ ಎಂದು ಅಭಿಪ್ರಾಯಪಟ್ಟರು.

ಮೀಸಲಾತಿಯ ರೋಸ್ಟರ್ ಪದ್ಧತಿಯ ಪ್ರಮುಖ ಉದ್ದೇಶವೇ ವಿವಿಧ ವರ್ಗಗಳಿಗೆ ಕಾಲಕಾಲಕ್ಕೆ ಅವಕಾಶ ಕಲ್ಪಿಸುವುದಾಗಿದೆ. ಹಿಂದಿನ ಚುನಾವಣೆಗಳಲ್ಲಿ ಬಿಸಿಎಂ-ಬಿ ಪ್ರವರ್ಗಕ್ಕೆ ಮೀಸಲಾಗಿದ್ದ ಕ್ಷೇತ್ರಗಳು ಹಾಗೂ ಪ್ರಸ್ತುತ ರೋಸ್ಟರ್ ಚಕ್ರವನ್ನು ಸಮರ್ಪಕವಾಗಿ ಪರಿಶೀಲಿಸದೆ ಈ ಪ್ರವರ್ಗಕ್ಕೆ ಯಾವುದೇ ಸ್ಥಾನ ನೀಡದಿರುವುದು ರೋಸ್ಟರ್ ನಿಯಮಗಳ ಉಲ್ಲಂಘನೆಯಾಗಿದೆ ಎಂದು ಆರೋಪಿಸಿದರು.

ರಾಯಚೂರು ಜಿಲ್ಲೆಯ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಹಾಗೂ ರಾಜಕೀಯ ಬೆಳವಣಿಗೆಯಲ್ಲಿ ವೀರಶೈವ ಲಿಂಗಾಯತ ಸಮುದಾಯ ಮಹತ್ವದ ಕೊಡುಗೆ ನೀಡಿದೆ. ಇಂತಹ ಸಮುದಾಯದ ರಾಜಕೀಯ ಪ್ರಾತಿನಿಧ್ಯಕ್ಕೆ ಅವಕಾಶ ಕಲ್ಪಿಸದಿರುವುದು ತಾರತಮ್ಯದ ಧೋರಣೆಯಾಗಿದೆ. ಮೀಸಲಾತಿ ನಿಗದಿಯಲ್ಲಿ ಪಾರದರ್ಶಕತೆ ಕಾಯ್ದುಕೊಂಡು ಎಲ್ಲ ವರ್ಗಗಳಿಗೂ ನ್ಯಾಯ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕರಡು ಅಧಿಸೂಚನೆಗೆ ಸಲ್ಲಿಸಿರುವ ಆಕ್ಷೇಪಣೆಗಳನ್ನು ಗಂಭೀರವಾಗಿ ಪರಿಗಣಿಸಿ, ಮೀಸಲಾತಿ ನಿಗದಿಯ ಮಾನದಂಡಗಳು ಹಾಗೂ ರೋಸ್ಟರ್ ಕ್ರಮವನ್ನು ಮರುಪರಿಶೀಲಿಸಬೇಕು. ಬಿಸಿಎಂ-ಬಿ ಪ್ರವರ್ಗಕ್ಕೆ ನ್ಯಾಯಯುತ ಅವಕಾಶ ಕಲ್ಪಿಸದಿದ್ದರೆ ಮುಂದಿನ ದಿನಗಳಲ್ಲಿ ಕಾನೂನು ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ಎಚ್ಚರಿಸಿದರು.

ಉದ್ಯಮಿ ಬಾನುಪ್ರಕಾಶ ಖೇಣೇದ್, ಚಂದ್ರಶೇಖರ್ ಮಿಯ್ಯಾಪುರ ,ಪ್ರಕಾಶ ಪಾಟೀಲ್ ಅಮರಾಪುರ, ಪ್ರವೀಣ, ಶರಣು ರಾಮದುರ್ಗ ಸುದ್ದಿಗೋಷ್ಠಿ ನಡೆಸಿದರು

ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಅ.24ರಿಂದ ಬೃಹತ್ ಪಾದಯಾತ್ರೆ : ಕರಿಯಪ್ಪ ಅಚ್ಚೊಳ್ಳಿ

ತಾಂತ್ರಿಕ ತೊಂದರೆಗಳು, ಬಾಕಿ ಕೂಲಿ ಪಾವತಿ ಹಾಗೂ ಮನೆ ಮತ್ತು ನಿವೇಶನಗಳ ಕೊರತೆ ಸೇರಿದಂತೆ ಹಲವು ಸಮಸ್ಯೆಗಳು ಜನರನ್ನು ಕಾಡುತ್ತಿವೆ. ಆದರೆ, ರಾಜ್ಯದ ಕಾಂಗ್ರೆಸ್ ಸರ್ಕಾರ ಹಾಗೂ ಕೇಂದ್ರದ ಬಿಜೆಪಿ ಸರ್ಕಾರ ರೈತರು, ಕೃಷಿ ಕೂಲಿಕಾರರು ಮತ್ತು ಗ್ರಾಮೀಣ ಕಾರ್ಮಿಕರ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಲ್ಪಿಸುವಲ್ಲಿ ನಿರ್ಲಕ್ಷ್ಯ ವಹಿಸಿವೆ ಎಂದು ಆರೋಪಿಸಿದರು.

ಈ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರಗಳ ಗಮನ ಸೆಳೆಯುವ ಉದ್ದೇಶದಿಂದ ಸಂಘಟನೆಗಳು ಜಂಟಿಯಾಗಿ ಹೋರಾಟ ರೂಪಿಸಿವೆ. ದೇವದುರ್ಗ, ಅರಕೇರಾ, ಲಿಂಗಸುಗೂರು, ಮಸ್ಕಿ ಹಾಗೂ ಸಿಂಧನೂರು ಸೇರಿದಂತೆ ಜಿಲ್ಲೆಯ ವಿವಿಧ ಪ್ರದೇಶಗಳಿಂದ ಅಕ್ಟೋಬರ್ 24ರಿಂದ ಪಾದಯಾತ್ರೆಗಳು ಆರಂಭವಾಗಲಿದ್ದು, ಅಕ್ಟೋಬರ್ 27ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಸವಂತರಾಯಗೌಡ, ನರಸಪ್ಪ ನಾಯಕ ಹಾಗೂ ಹನುಮಂತ ಉಪಸ್ಥಿತರಿದ್ದರು.

ಜಿಲ್ಲಾ ಮಟ್ಟದ ತಂಬಾಕು ನಿಯಂತ್ರಣ ಸಮನ್ವಯ ಸಮಿತಿ ಸಭೆ
ತಂಬಾಕು ಪರವಾನಗಿ ಇಲ್ಲದಿದ್ದರೆ ಸ್ಥಳದಲ್ಲೇ ದಂಡ ವಿಧಿಸಿ



ಕಲಬುರಗಿ, ಅ.15-

ತಂಬಾಕು ಉತ್ಪನ್ನಗಳ ಮಾರಾಟ ಪರವಾನಿಗೆ ಇಲ್ಲದೆ ತಂಬಾಕು ಮಾರಾಟ ಮಾಡುವವರ ವಿರುದ್ಧ ಸ್ಥಳದಲ್ಲೇ ದಂಡ ವಿಧಿಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಕಲಬುರಗಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣ ಸಗಿ ಅಧಿಕಾರಿಗಳಿಗೆ ಸೂಚಿಸಿ ದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಜಿಲ್ಲಾ ಮಟ್ಟದ ತಂಬಾಕು ನಿಯಂತ್ರಣ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಈ ಸಂದರ್ಭದಲ್ಲಿ ಜಿಲ್ಲೆಯಲ್ಲಿ ತಂಬಾಕು ನಿಯಂತ್ರಣ ಹಾಗೂ ಜಾಗೃತಿ ಕಾರ್ಯಕ್ರಮಗಳ ಪ್ರಗತಿಯನ್ನು ಪರಿಶೀಲಿಸಿದರು.

ಜಿಲ್ಲೆಯ ವಿವಿಧ ತಾಲೂ ಕುಗಳಲ್ಲಿ ಗ್ರಾಮ ಮಟ್ಟದ ತಂಬಾಕು ನಿಯಂತ್ರಣ ಸಮಿತಿಗಳು ಅಸ್ತಿತ್ವಕ್ಕೆ ಬಂದಿದ್ದು, ಅಫಜಲಪುರ-99, ಚಿತ್ತಾಪುರ-62, ಕಲಬುರಗಿ-28, ಸೇಡಂ-25 ಹಾಗೂ ಶಹಾಬಾದನಲ್ಲಿ 14 ಸಮಿತಿಗಳು ಕಾರ್ಯಾರಂಭ ಮಾಡಿವೆ. ಒಟ್ಟು 3,883 ಶೈಕ್ಷಣಿಕ ಸಂಸ್ಥೆಗಳ ಪೈಕಿ ಇದುವರೆಗೆ 1,713 ಶಾಲೆಗಳು ಮಾತ್ರ ನೋಂದಣಿ ಯಾಗಿದ್ದು, ಬಾಕಿ ಉಳಿದಿರುವ ಸಂಸ್ಥೆಗಳು ಕೂಡಲೇ ನೋಂದಣಿ ಮಾಡಿಕೊಳ್ಳುವಂತೆ ಸೂಚಿಸಲಾಯಿತು. ಜತೆಗೆ 228 ಗ್ರಾಮ ಪಂಚಾಯತಿಗಳು ತಂಬಾಕು ಮುಕ್ತ ಗ್ರಾಮಗಳಾಗಿ ನೋಂದಣಿಯಾಗಿವೆ ಎಂದರು.

ತಂಬಾಕು ಉತ್ಪನ್ನಗಳ ಮಾರಾಟ ಪರವಾನಗಿ ನವೀಕರಣದ ಕುರಿತು ಸ್ಪಷ್ಟಪಡಿಸಿದ ಅವರು, ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಐದು ವರ್ಷಗಳಿಗೊಮ್ಮೆ ಪರವಾನಗಿ ನವೀಕರಿಸುವುದು ಕಡ್ಡಾಯ ಎಂದರು. ಪರವಾನಗಿ ಇಲ್ಲದೆ ವ್ಯಾಪಾರ ಮಾಡಿದರೆ 3,000, ರಿಂದ 4,000 ವರೆಗೆ ಸ್ಥಳದಲ್ಲೇ ದಂಡ ವಿಧಿಸುವ ನಿಯಮ ಜಾರಿಯಲ್ಲಿದೆ. ನವೆಂಬರ್ 4ರೊಳಗೆ ಎಲ್ಲಾ ತಾಲೂಕುಗಳಲ್ಲಿ ಸಮನ್ವಯ ಸಮಿತಿ ಸಭೆ ನಡೆಸಿ ನಡವಳಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಮಿಕ ಇಲಾಖೆ ಹಾಗೂ ಸಿ.ಎಸ್.ಐ.ಯು ಸಹಯೋಗದಲ್ಲಿ ಅಫಜಲಪುರ ಸೇರಿದಂತೆ ಜಿಲ್ಲೆಯಾದ್ಯಂತ ಕಾರ್ಮಿಕರು ಹಾಗೂ ಸಾರ್ವಜನಿಕರಿಗಾಗಿ ಮೆಗಾ ತಪಾಸಣಾ ಶಿಬಿರಗಳನ್ನು ಆಯೋಜಿ ಸಲು ನಿರ್ಧರಿಸಲಾಗಿದೆ. ಅಫಜಲ ಪುರದಲ್ಲಿ ಎರಡು ಮೆಗಾ ಕ್ಯಾಂಪ್ ಗಳನ್ನು ನಡೆಸಿ ಎನ್.ಸಿ.ಡಿ ಹಾಗೂ ಓರಲ್ ಕ್ಯಾನ್ಸರ್ ತಪಾಸಣೆಗಳನ್ನು ಕಡ್ಡಾಯವಾಗಿ ಪೂರ್ಣಗೊಳಿಸಲು ತಿಳಿಸಲಾಗಿದೆ. ನವೆಂಬರ್ ತಿಂಗಳಲ್ಲಿ ತಂಬಾಕು ಮುಕ್ತ ಯುವ ಅಭಿಯಾನ ಹಾಗೂ ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಅಧಿಕಾರಿ ಡಾ. ರಾಕೇಶ ಕಾಂಬಳೆ, ವಿಭಾಗೀಯ ಸಂಯೋಜಕ ಮಹಾಂತೇಶ್ ಬಿ ಉಳ್ಳಾಗಡ್ಡಿ. ಜಿಲ್ಲಾ ಸಲಹೆಗಾರರಾದ ಸುಜಾತಾ ಪಾಟೀಲ, ಸೋಶಿಯಲ್ ವರ್ಕರ್ ಆರತಿ ಧನಶ್ರೀ, ಜಿಲ್ಲಾ ಜಿಮ್ಸ್ ಆಸ್ಪತ್ರೆಯ ತಂಬಾಕು ವ್ಯಸನ ಮುಕ್ತ ಕೇಂದ್ರದ ಸೈಕಾಲಜಿಸ್ಟ್ ಸಮಾಲೋಚಕ ಮಂಜುನಾಥ ಕಂಬಾಳಿಮಠ, ಗಣಕಯಂತ್ರ ಸಹಾಯಕ ರವಿಕುಮಾರ್ ಪೂಜಾರಿ ಹಾಗೂ ವಿವಿಧ ಇಲಾಖಾ ಅಧಿಕಾರಿಗಳು ಉಪಸ್ಥಿತರಿದ್ದರು.



ಶಾಲಾಪೂರ್ವ ಶಿಕ್ಷಣದ ಪರಿಣಾಮಕಾರಿ ಅನುಷ್ಠಾನಕ್ಕೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ: ನಲಿನ್ ಅತುಲ್

ಕಲಬುರಗಿ:

ಕಲ್ಯಾಣ ಕರ್ನಾಟಕ ಪ್ರದೇಶದ ಏಳು ಜಿಲ್ಲೆಗಳಲ್ಲಿ ಶಾಲಾಪೂರ್ವ ಶಿಕ್ಷಣ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಲಿನ್ ಅತುಲ್ ಹೇಳಿದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಲಿಕೆ-ಟಾಟಾ ಟ್ರಸ್ಟ್ ಸಹಯೋಗದಲ್ಲಿ ಶಾಲಾಪೂರ್ವ ಶಿಕ್ಷಣ ಬಲವರ್ಧನೆ ಕಾರ್ಯಕ್ರಮದಡಿ ಕಲಬುರಗಿಯ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ತರಬೇತಿ ಸಂಸ್ಥೆಯಲ್ಲಿ ಆಯೋಜಿಸಿರುವ ಆರನೇ ಆವೃತ್ತಿಯ ಶಾಲಾಪೂರ್ವ ಶಿಕ್ಷಣದ ದೃಷ್ಟಿಕೋನ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಲಾಪೂರ್ವ ಹಂತದಲ್ಲಿಯೇ ಮಕ್ಕಳ ಕಲಿಕೆಗೆ ಭದ್ರ ಬುನಾದಿ ಹಾಕುವುದು ಅತ್ಯಂತ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ತರಬೇತಿಯಲ್ಲಿ ತಿಳಿಸಿಕೊಡುವ ವಿಷಯಗಳನ್ನು ಅಧಿಕಾರಿಗಳು ತಮ್ಮ ಕಾರ್ಯಕ್ಷೇತ್ರದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ತಿಳಿಸಿದರು.

ಬಳಿಕ ಕಾರ್ಯಕ್ರಮದ ಅನುಷ್ಠಾನ ಮತ್ತು ಪ್ರಗತಿಯ ಕುರಿತು ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳ ಯೋಜನಾಧಿಕಾರಿಗಳೊಂದಿಗೆ ಚರ್ಚಿಸಿದ ಅವರು, ಕಾರ್ಯಕ್ರಮವನ್ನು ಯಶಸ್ವಿಯಾಗಿ ಜಾರಿಗೊಳಿಸುವ ಕುರಿತು ಸಲಹೆ-ಸೂಚನೆಗಳನ್ನು ನೀಡಿದರು.

ತರಬೇತಿ ಕಾರ್ಯಕ್ರಮದಲ್ಲಿ ಕಲಿಕೆ-ಟಾಟಾ ಟ್ರಸ್ಟ್‌ನ ಶಾಲಾಪೂರ್ವ ಶಿಕ್ಷಣ ಕಾರ್ಯಕ್ರಮದ ಮುಖ್ಯಸ್ಥೆ ಚಿತ್ಕಲಾಂಬ, ಕಾರ್ಯಕ್ರಮ ಅಧಿಕಾರಿಗಳಾದ ಕೊಟ್ರೇಶ ಎ.ವೈ. ಮತ್ತು ಸವಿತಾ ಸೇರಿದಂತೆ ಏಳು ಜಿಲ್ಲೆಗಳ ಜಿಲ್ಲಾ ವ್ಯವಸ್ಥಾಪಕರು, ಕಾರ್ಯಕ್ರಮ ಸಂಯೋಜಕರು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಮತ್ತು ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಭಾಗವಹಿಸಿದ್ದರು.



ಕಬ್ಬು, ತೊಗರಿಗೆ ಬೆಂಬಲ ಬೆಲೆ ನಿಗದಿಗೆ ಆಗ್ರಹ:
ಜೇವರ್ಗಿ-ಶಹಾಪುರ ಹೆದ್ದಾರಿ ಬಂದ್ ಮಾಡಿ ರೈತರ ಪ್ರತಿಭಟನೆ

ಜೇವರ್ಗಿ:

ಕಬ್ಬು ಮತ್ತು ತೊಗರಿ ಬೆಳೆಗಳಿಗೆ ಸೂಕ್ತ ಬೆಂಬಲ ಬೆಲೆ ನಿಗದಿಪಡಿಸುವುದು ಹಾಗೂ ಭೀಮಾ ನದಿಗೆ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿಸುವಂತೆ ಆಗ್ರಹಿಸಿ ಜೇವರ್ಗಿ ಮತ್ತು ಯಡ್ರಾಮಿ ಅವಳಿ ತಾಲ್ಲೂಕುಗಳ ರೈತ ಹೋರಾಟಗಾರರು ಗುರುವಾರ ಜೇವರ್ಗಿ-ಶಹಾಪುರ ಮುಖ್ಯ ರಾಜ್ಯ ಹೆದ್ದಾರಿ ಬಂದ್ ಮಾಡಿ ಪ್ರತಿಭಟನೆ ನಡೆಸಿದರು.

ರೈತರು ಬೆಳೆದ ಕಬ್ಬು ಮತ್ತು ತೊಗರಿಗೆ ನ್ಯಾಯಯುತ ಬೆಲೆ ದೊರೆಯಬೇಕು. ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ನೀರಿನ ಕೊರತೆಯಿಂದ ರೈತರು ಎದುರಿಸುತ್ತಿರುವ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಪರಿಹಾರ ಕಲ್ಪಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ರೈತರ ಬೆಳೆಗಳಿಗೆ ಸೂಕ್ತ ಬೆಂಬಲ ಬೆಲೆ ದೊರೆಯದಿರುವುದು ಹಾಗೂ ನೀರಾವರಿಗೆ ಅಗತ್ಯವಾದ ನೀರಿನ ಲಭ್ಯತೆಯ ಕೊರತೆಯಿಂದ ಕೃಷಿ ಕ್ಷೇತ್ರದ ಮೇಲೆ ಪರಿಣಾಮ ಬೀರುತ್ತಿದೆ. ಈ ಹಿನ್ನೆಲೆಯಲ್ಲಿ ಸರ್ಕಾರ ರೈತರ ಬೇಡಿಕೆಗಳಿಗೆ ಸ್ಪಂದಿಸಿ, ಬೆಳೆಗಳಿಗೆ ನ್ಯಾಯಯುತ ಬೆಲೆ ಒದಗಿಸುವುದರ ಜತೆಗೆ ಭೀಮಾ ನದಿಗೆ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ರೈತ ಮುಖಂಡರಾದ ಮಾಂತಗೌಡ ಪಾಟೀಲ್, ಮಲ್ಲನಗೌಡ ಕೆಲ್ಲೂರ್ ಬಿ.ಎಚ್. ಪಾಟೀಲ್, ಸಿದ್ದರಾಮಯ್ಯ ಕಟ್ಟಿ, ಜಯ ಕರ್ನಾಟಕ ಸಂಘಟನೆಯ ಮುಖಂಡರಾದ ಪರಮೇಶ್ವರ್ ಬಿರಾಳ, ದಾವೂದ್ ಹಾನೂರ್ ಟಿಪ್ಪು ಸಿಗರತಲ್ಲಿ, ಮಲ್ಲು ನೆದಲಗಿ ಸೇರಿದಂತೆ ಮಹಿಳಾ ರೈತ ಮೋರ್ಚಾದ ಮುಖಂಡರು ಹಾಗೂ ಅವಳಿ ತಾಲ್ಲೂಕುಗಳ ಅನೇಕ ರೈತರು ಭಾಗವಹಿಸಿದ್ದರು.

ಕ್ಷಯರೋಗ ಮುಕ್ತ ಭಾರತ ನಿರ್ಮಾಣಕ್ಕೆ ವಿದ್ಯಾರ್ಥಿಗಳು ಕೈಜೋಡಿಸಿ: ಪ್ರೊ.ಬಟ್ಟು ಸತ್ಯನಾರಾಯಣ



ಕಲಬುರಗಿ

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಕ್ಷಯರೋಗ ಮುಕ್ತ ಭಾರತ ಅಭಿಯಾನ ಸಮಿತಿಯ ವತಿಯಿಂದ ಜೀವವಿಜ್ಞಾನ ನಿಕಾಯದಲ್ಲಿ ಕ್ಷಯರೋಗ ಜಾಗೃತಿ ಉಪನ್ಯಾಸ ಹಾಗೂ ಬಹುಮಾನ ವಿತರಣಾ ಸಮಾರಂಭ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಮಾತನಾಡಿ, ಪ್ರಧಾನಮಂತ್ರಿಯವರ ನೇತೃತ್ವದಲ್ಲಿ ಆರಂಭಿಸಲಾದ ಕ್ಷಯರೋಗ ನಿರ್ಮೂಲನಾ ಅಭಿಯಾನದಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಕೈಜೋಡಿಸಬೇಕು ಎಂದು ಕರೆ ನೀಡಿದರು. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಕ್ಷಯ ರೋಗ ಪೀಡಿತರಿಗೆ ನೆರವು ನೀಡುವುದು ಹಾಗೂ ಕ್ಷಯರೋಗ ಮುಕ್ತ ಭಾರತ ನಿರ್ಮಾಣದಲ್ಲಿ ಸಮುದಾಯದ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕಲಬುರಗಿಯ ಇಎಸ್ಐಸಿ ಆಸ್ಪತ್ರೆಯ ಶ್ವಾಸಕೋಶ ತಜ್ಞ ಡಾ. ರೇವಣಸಿದ್ದ ಎಸ್. ಎ. ಅವರು ಮುಖ್ಯ ಭಾಷಣಕಾರರಾಗಿ ಮಾತನಾಡಿ, ಕ್ಷಯರೋಗದ ಹರಡುವಿಕೆ, ಲಕ್ಷಣಗಳು, ತಡೆಗಟ್ಟುವಿಕೆ, ಆರಂಭಿಕ ಪತ್ತೆ ಹಾಗೂ ಚಿಕಿತ್ಸೆಯ ಕುರಿತು ಮಾಹಿತಿ ನೀಡಿದರು. ಕ್ಷಯರೋಗದ ಬಗ್ಗೆ ಜನರಲ್ಲಿ ಇರುವ ತಪ್ಪು ಕಲ್ಪನೆಗಳನ್ನು ನಿವಾರಿಸುವುದು, ರೋಗದ ಕುರಿತಾದ ಸಾಮಾಜಿಕ ಕಳಂಕವನ್ನು ಕಡಿಮೆ ಮಾಡುವುದು ಹಾಗೂ ಸಮುದಾಯದಲ್ಲಿ ಜಾಗೃತಿ ಮೂಡಿಸುವಲ್ಲಿ ವಿದ್ಯಾರ್ಥಿಗಳು ಪ್ರಮುಖ ಪಾತ್ರ ವಹಿಸಬೇಕು ಎಂದು ಹೇಳಿದರು.

ನಿ-ಕ್ಷಯ ಮಿತ್ರ ಉಪಕ್ರಮದ ಕುರಿತು ವಿವರಿಸಿದ ಅವರು, ಕ್ಷಯರೋಗದಿಂದ ಬಳಲುತ್ತಿರುವವರಿಗೆ ಅಗತ್ಯ ನೆರವು ನೀಡುವ ಮಹತ್ವವನ್ನು ತಿಳಿಸಿದರು. ವೈದ್ಯರು ಸೂಚಿಸಿದ ಚಿಕಿತ್ಸೆಯನ್ನು ಪೂರ್ಣಗೊಳಿಸುವುದರಿಂದ ರೋಗ ನಿಯಂತ್ರಣಕ್ಕೆ ಸಹಕಾರಿಯಾಗುತ್ತದೆ ಎಂದು ಹೇಳಿದರು.


ಕ್ಷಯರೋಗ ಜಾಗೃತಿ ಅಭಿಯಾನದ ಅಂಗವಾಗಿ ಆಯೋಜಿಸಿದ್ದ ಪೋಸ್ಟರ್ ರಚನೆ ಸೇರಿದಂತೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಕುಲಪತಿಗಳು ಹಾಗೂ ಗಣ್ಯರು ಬಹುಮಾನ ಮತ್ತು ಪ್ರಮಾಣಪತ್ರಗಳನ್ನು ವಿತರಿಸಿದರು. ಬಳಿಕ ಕುಲಪತಿಗಳು, ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕ್ಷಯರೋಗ ಮುಕ್ತ ಭಾರತದ ನಿರ್ಮಾಣಕ್ಕೆ ಕೈಜೋಡಿಸುವ ಪ್ರತಿಜ್ಞೆ ಸ್ವೀಕರಿಸಿದರು.

ಕ್ಷಯರೋಗ ಮುಕ್ತ ಭಾರತ ಜಾಗೃತಿ ಕಾರ್ಯಕ್ರಮದ ನೋಡಲ್ ಅಧಿಕಾರಿ ಹಾಗೂ ಪ್ರಾಣಿಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಕೃಷ್ಣ ಚೈತನ್ಯ ಸ್ವಾಗತಿಸಿದರು. ಡಾ. ಸ್ವಾತಿ ಬನಪುರಂ ವಂದನಾರ್ಪಣೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಡಾ. ಕವಿಶಂಕರ್ ಗಾವ್ಲಿ, ಡಾ. ರಶ್ಮಿತಾ ಸಮಲ್, ಡಾ. ಸಿನಮ್ ಸಿಂಗ್, ಡಾ. ರಾಕೇಶ್ ಕುಮಾರ್ ಡಾ. ಪ್ರಶಾಂತ್ ಕುಮಾರ್ ಡಾ. ಪ್ರಭಂಜನ ಗಾಯಿ ಹಾಗೂ ಡಾ. ಬುಚಿ ರೆಡ್ಡಿ ಸೇರಿದಂತೆ ಬೋಧಕ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ವಿಶೇಷ ಶಿಬಿರದಲ್ಲಿ ವಿಪತ್ತು ನಿರ್ವಹಣೆ ಹಾಗೂ ರಕ್ತದಾನ ಜಾಗೃತಿ ಉಪನ್ಯಾಸ

ರಾಯಚೂರು,ಅ.17-ಯುವಜನತೆ ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಢವಾಗಿದ್ದಾಗ ಮಾತ್ರ ರಕ್ತದಾನದಂತಹ ಪವಿತ್ರ ಕಾರ್ಯದ ಮೂಲಕ ಜೀವ ಉಳಿಸಲು ಸಾಧ್ಯ ಹಾಗೂ ಯುವ ರೆಡ್ ಕ್ರಾಸ್‌ನ ಜೀವ ರಕ್ಷಕ ಕೌಶಲ್ಯಗಳಿಂದ ಯಾವುದೇ ವಿಪತ್ತುಗಳನ್ನು ಸಮರ್ಥವಾಗಿ ಎದುರಿಸಲು ಸಾಧ್ಯ ಎಂದು ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಯುವ ರೆಡ್ ಕ್ರಾಸ್ ನೋಡಲ್ ಅಧಿಕಾರಿ ಆದಿಕವಿ ಡಾ. ಎಂ. ರವಿ ತಿಳಿಸಿದರು.



ಸ್ಥಳೀಯ ವೀರಶೈವ ಕಾಲೇಜು ವತಿಯಿಂದ ಮನ್ಸಲಪೂರು ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶೇಷ ವಾರ್ಷಿಕ ಶಿಬಿರದಲ್ಲಿ ವಿಪತ್ತು ನಿರ್ವಹಣೆ ಮತ್ತು ರಕ್ತದಾನ ಜಾಗೃತಿ ಕುರಿತು ಅವರು ವಿಶೇಷ ಉಪನ್ಯಾಸ ನೀಡಿದರು. ಇಂದಿನ ಯುವ ಪೀಳಿಗೆ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವುದರ ಜೊತೆಗೆ ಸಾಮಾಜಿಕ ಹೊಣೆಗಾರಿಕೆಯನ್ನು ಬೆಳೆಸಿಕೊಳ್ಳಬೇಕು. ನಿಯಮಿತ ರಕ್ತದಾನದಿಂದ ತುರ್ತು ಪರಿಸ್ಥಿತಿಯಲ್ಲಿರುವ ಅಮೂಲ್ಯ ಜೀವಗಳನ್ನು ಉಳಿಸಬಹುದು. ಅಲ್ಲದೆ, ಪ್ರಕೃತಿ ವಿಕೋಪ ಹಾಗೂ ತುರ್ತು ಸಂದರ್ಭಗಳಲ್ಲಿ ಭಯಪಡದೆ, ರೆಡ್ ಕ್ರಾಸ್ ನೀಡುವ ಪ್ರಥಮ ಚಿಕಿತ್ಸೆ ಮತ್ತು ರಕ್ಷಣಾ ತರಬೇತಿಯ ಕೌಶಲ್ಯಗಳನ್ನು ಬಳಸಿಕೊಂಡು ವಿಪತ್ತು ನಿರ್ವಹಣೆಯನ್ನು ಯಶಸ್ವಿಯಾಗಿ ನಿರ್ವಹಿಸಬಹುದು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯರಾದ ಪರ್ವತ ರೆಡ್ಡಿ ಅವರು ವಹಿಸಿ, ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ ಅತ್ಯಗತ್ಯ ಎಂದು ಕಿವಿಮಾತು ಹೇಳಿದರು. ಎನ್‌ಎಸ್‌ಎಸ್ ಅಧಿಕಾರಿ ಶರಣಬಸವ ಅವರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಸಂಯೋಜಿಸಿದರು. ಶಿಬಿರದಲ್ಲಿ ವಿದ್ಯಾರ್ಥಿ ಸ್ವಯಂಸೇವಕರು, ಪ್ರಾಧ್ಯಾಪಕರು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

ವಿದ್ಯುತ್ ಸರಬರಾಜು ನಿಯಮಾವಳಿ ಕರಡು ಕುರಿತು ಸಾರ್ವಜನಿಕರ ಅಭಿಪ್ರಾಯ ಸಂಗ್ರಹ

ಕಲಬುರಗಿ:

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು (ಕೆಇಆರ್‌ಸಿ) ನೂತನವಾಗಿ ಸಿದ್ಧಪಡಿಸಿರುವ ಕರ್ನಾಟಕ ವಿದ್ಯುಚ್ಛಕ್ತಿ ಸರಬರಾಜು ನಿಯಮಾವಳಿಗಳು (ಇ.ಎಸ್.ಆರ್.) 2026ರ ಕರಡು ಪ್ರತಿ ಕುರಿತು ಗುರುವಾರ ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಜಿಲ್ಲಾ ಮಟ್ಟದ ಸಾರ್ವಜನಿಕ ವಿಚಾರಣಾ ಸಭೆ ನಡೆಸಿ, ವಿವಿಧ ಭಾಗೀದಾರರ ಅಭಿಪ್ರಾಯಗಳನ್ನು ಆಲಿಸಿತು.



ಕೆಇಆರ್‌ಸಿ ಅಧ್ಯಕ್ಷ ಪಿ. ರವಿಕುಮಾರ್ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಜಿಲ್ಲೆಯ ಗೃಹ ಮತ್ತು ವಾಣಿಜ್ಯ ವಿದ್ಯುತ್ ಗ್ರಾಹಕರು, ರೈತರು, ಕೈಗಾರಿಕೋದ್ಯಮಿಗಳು, ಗುತ್ತಿಗೆದಾರರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಪಾಲ್ಗೊಂಡು ಕರಡು ನಿಯಮಾವಳಿಗಳ ಕುರಿತು ತಮ್ಮ ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಲಿಖಿತ ಹಾಗೂ ಮೌಖಿಕವಾಗಿ ಸಲ್ಲಿಸಿದರು.

ಸಭೆಯಲ್ಲಿ ಮಾತನಾಡಿದ ಪ್ರಮುಖರು, ಹೊಸ ನಿಯಮಾವಳಿಗಳು ಜಾರಿಗೆ ಬಂದಾಗ ಗ್ರಾಹಕರು ಮತ್ತು ರೈತರ ಹಿತಾಸಕ್ತಿಗಳಿಗೆ ಯಾವುದೇ ಧಕ್ಕೆಯಾಗಬಾರದು ಎಂದು ಆಗ್ರಹಿಸಿದರು. ವಿದ್ಯುತ್ ಸಂಪರ್ಕ ಪಡೆಯುವ ಪ್ರಕ್ರಿಯೆಯನ್ನು ಸರಳಗೊಳಿಸಬೇಕು ಹಾಗೂ ದಂಡ ವಿಧಿಸುವ ನಿಯಮಗಳು ಗ್ರಾಹಕ ಸ್ನೇಹಿಯಾಗಿರಬೇಕು ಎಂದು ಒತ್ತಾಯಿಸಿದರು. ಹೊಸ ಬಿಲ್ಲಿಂಗ್ ಮತ್ತು ಮೀಟರಿಂಗ್ ನಿಯಮಗಳಿಂದ ಕೈಗಾರಿಕೆಗಳ ಮೇಲೆ ಉಂಟಾಗಬಹುದಾದ ಪರಿಣಾಮಗಳ ಕುರಿತು ಉದ್ಯಮಿಗಳು ಆಯೋಗದ ಗಮನ ಸೆಳೆದರು.

ಸಾರ್ವಜನಿಕರ ಅಹವಾಲುಗಳನ್ನು ಆಲಿಸಿದ ಬಳಿಕ ಮಾತನಾಡಿದ ಕೆಇಆರ್‌ಸಿ ಅಧ್ಯಕ್ಷ ಪಿ. ರವಿಕುಮಾರ್, 2026ರ ಆಗಸ್ಟ್ 14ರಂದು ಪ್ರಕಟಿಸಲಾದ ಇ.ಎಸ್.ಆರ್.2026ರ ಕರಡು ಪ್ರತಿ ಇನ್ನೂ ಅಂತಿಮಗೊಂಡಿಲ್ಲ ಎಂದು ತಿಳಿಸಿದರು. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಾರ್ವಜನಿಕ ವಿಚಾರಣೆ ನಡೆಸಿ ಸಂಗ್ರಹಿಸಲಾಗುವ ಪ್ರತಿಯೊಂದು ಸಲಹೆ ಮತ್ತು ಆಕ್ಷೇಪಣೆಯನ್ನೂ ಕೂಲಂಕಷವಾಗಿ ಪರಿಶೀಲಿಸಲಾಗುವುದು. ಬಳಿಕ ಸಾರ್ವಜನಿಕರ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಅಗತ್ಯ ಬದಲಾವಣೆಗಳನ್ನು ಮಾಡಿಕೊಂಡು ಅಂತಿಮ ನಿಯಮಾವಳಿಗಳನ್ನು ರೂಪಿಸಲಾಗುವುದು ಎಂದು ಭರವಸೆ ನೀಡಿದರು.

ಸಭೆಯಲ್ಲಿ ಕೆಇಆರ್‌ಸಿ ಆಯೋಗದ ಸದಸ್ಯ (ಕಾನೂನು) ಎಚ್.ಕೆ. ಜಗದೀಶ್, ಕೆಇಆರ್‌ಸಿ ಸಹಾಯಕ ಕಾರ್ಯದರ್ಶಿ ಜಾವೇದ್ ಅಖ್ತರ್ ಪಿ.ಆರ್. ಗೋಪಿನಾಥ್ ಸೇರಿದಂತೆ ಜೆಸ್ಕಾಂ ಅಧಿಕಾರಿಗಳು, ವಿದ್ಯುತ್ ಗ್ರಾಹಕರು, ರೈತರು ಹಾಗೂ ಸಾರ್ವಜನಿಕರು ನೂರಾರು ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಅಂಕಿತಾ ಹತ್ಯೆ ಶಂಕಿತರಿಗೆ ಸಾಂವಿಧಾನಿಕ ಹುದ್ದೆ ಸರಿಯೇ?

ಅಂಕಿತಾ ಭಂಡಾರಿ ಕೊಲೆ ಪ್ರಕರಣದಲ್ಲಿದ್ದ ವಿಐಪಿ ದುಶ್ಯಂತ್ ಅವರ ಮೇಲಿನ ಆರೋಪದ ಸಿಬಿಐ ತನಿಖೆ ಇನ್ನೂ ಮುಗಿದಿಲ್ಲ. ಅದಕ್ಕೂ ಮುನ್ನ ರಾಜ್ಯಪಾಲರಂತಹ ಗೌರವದ ಹುದ್ದೆ ಕರುಣಿಸುವುದರ ಹಿಂದೆ ಪ್ರಕರಣದಿಂದ ಕೈ ಬಿಡುವ ಹುನ್ನಾರ ಅಡಗಿದೆ ಎಂಬ ಅನುಮಾನ ಬರುತ್ತಿದೆ. ಇಂತಹ ವ್ಯಕ್ತಿಯನ್ನು ಒಂದು ರಾಜ್ಯದ ರಾಜ್ಯಪಾಲರನ್ನಾಗಿ ನೇಮಿಸುವಾಗ ಸ್ವತಃ ಮಹಿಳೆಯಾಗಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಯಾವುದೇ ವಿವರಣೆ ಕೇಳದೇ ಸಹಿ ಮಾಡಿರುವುದು ನಿಜಕ್ಕೂ ಬೇಸರದ ಸಂಗತಿ.

2022ರಲ್ಲಿ ಉತ್ತರಾಖಂಡದ ಋಷಿಕೇಶ ಸಮೀಪದ ವನಂತರಾ ರೆಸಾರ್ಟ್‌ನಲ್ಲಿ ಸ್ವಾಗತಕಾರಿಣಿಯಾಗಿ ಕೆಲಸಕ್ಕೆ ಸೇರಿ 20 ದಿನಗಳಲ್ಲಿಯೇ 19 ವರ್ಷದ ಯುವತಿ ಅಂಕಿತಾ ಭಂಡಾರಿ ಕೊಲೆಯಾಗುತ್ತಾಳೆ. ಈ ಕೊಲೆಯ ಮುಖ್ಯ ಆರೋಪಿ ರೆಸಾರ್ಟ್ ಮಾಲೀಕ ಬಿಜೆಪಿಯ ಪ್ರಭಾವಿ ಮುಖಂಡನ ಪುತ್ರ ಪುಲ್ಕಿತ್ ಆರ್ಯ ಮತ್ತು ಆತನ ಸಹಚರರಿಗೆ 2025ರಲ್ಲಿ ಜೀವಾವಧಿ ಶಿಕ್ಷೆ ವಿಧಿಸಲಾಗಿದೆ. ಆದರೆ, ಆ ಪ್ರಕರಣದಲ್ಲಿ ಕೇಳಿಬಂದಿದ್ದ ವಿಐಪಿ ಬಿಜೆಪಿಯ ಹಿರಿಯ ನಾಯಕ ದುಶ್ಯಂತ್ ಕುಮಾರ್ ಗೌತಮ್ ಗೆ ಸಿಕ್ಕಿಂ ರಾಜ್ಯಪಾಲರ ಹುದ್ದೆ ನೀಡುವ ಮೂಲಕ ಮೋದಿ ಸರ್ಕಾರ ಗಂಭೀರ ಪ್ರಕರಣದ ಆರೋಪಿಗಳಿಗೆ ಸಮ್ಮಾನ ನೀಡುವ ತನ್ನ ಚಾಳಿಯನ್ನು ಮುಂದುವರಿಸಿದೆ.

ಈ ಪ್ರಕರಣದಲ್ಲಿ ಪುಟ್ಟ ಯುವತಿ ಅಂಕಿತಾಳಿಗೆ ಆಕೆ ಕೆಲಸಕ್ಕೆ ಸೇರಿದ ಕೆಲವೇ ವಾರಗಳಲ್ಲಿ ಅಲ್ಲಿನ ಕರಾಳತೆ ಅರಿವಾಗಿತ್ತು. ವಿಐಪಿಯೊಬ್ಬರಿಗೆ ವಿಶೇಷ ಸೇವೆ ಮಾಡಬೇಕು ಎಂದು ಪುಲ್ಕಿತ್ ಆರ್ಯ ಆಕೆಗೆ ಒತ್ತಡ ಹಾಕಿದ್ದ. ಆ ವಿಐಪಿಯೇ ಈಗ ರಾಜ್ಯಪಾಲರ ಹುದ್ದೆಗೆ ಮೋದಿ ಸರ್ಕಾರ ಆಯ್ಕೆ ಮಾಡಿರುವ ಗೌರವಾನ್ವಿತ ವ್ಯಕ್ತಿ! ಮೋದಿ ಸರ್ಕಾರದ ಈ ಅಸಹ್ಯ ನಡೆಯನ್ನು ಖಂಡಿಸಿ ಅಂಕಿತಾ ಕುಟುಂಬ ದೆಹಲಿಯಲ್ಲಿ ಪ್ರತಿಭಟನೆ ನಡೆಸಿದೆ. ಪೊಲೀಸರು ಅವರನ್ನು ಬಂಧಿಸಿದ್ದರು.

ಅಂಕಿತಾ ಭಂಡಾರಿ ಕೊಲೆ ಪ್ರಕರಣದಲ್ಲಿ ವಿಐಪಿ ಹೆಸರನ್ನು ಪೊಲೀಸರು ಬಹಿರಂಗಪಡಿಸಿರಲಿಲ್ಲ. ಆದರೆ, ಬಿಜೆಪಿ ಮುಖಂಡರೊಬ್ಬರು ದುಶ್ಯಂತ್ ಹೆಸರನ್ನು ಬಹಿರಂಗಪಡಿಸಿದ್ದರು. 2025ರ ಡಿಸೆಂಬರ್‌ನಲ್ಲಿ ಬಿಜೆಪಿಯ ಮಾಜಿ ಶಾಸಕ ಸುರೇಶ್ ರಾಠೋಡ್ ಅವರ ಪತ್ನಿ ಎಂದು ಹೇಳಿಕೊಳ್ಳುವ ನಟಿ ಊರ್ಮಿಳಾ ಸನಾವರ್ ಅವರು, ರಾಠೋಡ್ ಅವರೊಂದಿಗೆ ನಡೆಸಿದ್ದಾರೆನ್ನಲಾದ ಸಂಭಾಷಣೆಯ ಧ್ವನಿಮುದ್ರಿಕೆಯಲ್ಲಿ ಗಟ್ಟು ಎಂದು ಕರೆಯಲ್ಪಡುವ ಬಿಜೆಪಿಯ ಹಿರಿಯ ನಾಯಕನೇ ಅಂಕಿತಾ ಪ್ರಕರಣದ ವಿಐಪಿ ಎಂದು ಉಲ್ಲೇಖಿಸಲಾಗಿತ್ತು ಹಾಗೂ ಆ ವ್ಯಕ್ತಿ ಬೇರೆ ಯಾರೂ ಅಲ್ಲ, ದುಶ್ಯಂತ್ ಕುಮಾರ್ ಗೌತಮ್ ಎಂದು ನೇರವಾಗಿ ಹೆಸರಿಸಲಾಗಿತ್ತು.

ಈ ಸ್ಫೋಟಕ ಆಡಿಯೊ ಬಹಿರಂಗವಾದ ಬಳಿಕ ಉತ್ತರಾಖಂಡದಾದ್ಯಂತ ಜನರ ಆಕ್ರೋಶ ಭುಗಿಲೆದ್ದ ಪರಿಣಾಮವಾಗಿ, ಅನಿವಾರ್ಯವಾಗಿ ಮಣಿದ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರು 2026ರ ಜನವರಿ 9ರಂದು ಸಿಬಿಐ ತನಿಖೆಗೆ ಶಿಫಾರಸು ಮಾಡಿದರು. ಫೆಬ್ರವರಿಯಲ್ಲಿ ಸಿಬಿಐ ಅಧಿಕೃತವಾಗಿ ಪ್ರಕರಣ ದಾಖಲಿಸಿಕೊಂಡು ದಾಖಲೆಗಳನ್ನು ಸುಪರ್ದಿಗೆ ಪಡೆದರೂ, ತನಿಖಾ ಸಂಸ್ಥೆಯು ದುಶ್ಯಂತ್ ಕುಮಾರ್ ಗೌತಮ್ ಅವರನ್ನು ವಿಚಾರಣೆಗೆ ಒಳಪಡಿಸುವ ಗೋಜಿಗೆ ಹೋಗಿಲ್ಲ.

ಸಿಬಿಐ ತನಿಖೆ ಮುಂದುವರಿದಿದ್ದು, ಅಂಕಿತಾ ಭಂಡಾರಿ ಮೇಲಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣದಲ್ಲಿ ದುಶ್ಯಂತ್ ಕುಮಾರ್ ಗೌತಮ್ ನೇರ ಅಥವಾ ಪರೋಕ್ಷ ಭಾಗವಹಿಸುವಿಕೆ ಇರಬಹುದೆಂಬ ಆರೋಪಗಳು ಕೇಳಿಬಂದಿವೆ. ಈ ಪ್ರಕರಣದಲ್ಲಿ ಆತನ ಪಾತ್ರದ ಕುರಿತು ತನಿಖೆ ಇನ್ನೂ ನಡೆಯುತ್ತಿದ್ದು, ಆರೋಪಗಳು ತನಿಖೆಗೆ ಒಳಪಟ್ಟಿವೆ. ತನಿಖೆ ಮುಗಿಯುವುದಕ್ಕೂ ಮುನ್ನ ರಾಜ್ಯಪಾಲರಂತಹ ಸಾಂವಿಧಾನಿಕ ಹುದ್ದೆ ಕರುಣಿಸುವುದರ ಹಿಂದೆ ಪ್ರಕರಣದಿಂದ ಕೈ ಬಿಡುವ ಹುನ್ನಾರ ಅಡಗಿದೆ ಎಂಬ ಅನುಮಾನ ಉಂಟಾಗಿರುವುದು ಸ್ವಾಭಾವಿಕ. ಒಮ್ಮೆ ರಾಜ್ಯಪಾಲರಾದರೆ ಅವರ ವಿರುದ್ಧ ತನಿಖೆ ನಡೆಸುವ ಅಧಿಕಾರ ಯಾವ ಸಂಸ್ಥೆಗೂ ಇಲ್ಲ. ಇಂತಹ ವ್ಯಕ್ತಿಯನ್ನು ಒಂದು ರಾಜ್ಯದ ರಾಜ್ಯಪಾಲರನ್ನಾಗಿ ನೇಮಿಸುವಾಗ ಸ್ವತಃ ಮಹಿಳೆಯಾಗಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಯಾವುದೇ ವಿವರಣೆ ಕೇಳದೇ ಸಹಿ ಮಾಡಿರುವುದು ನಿಜಕ್ಕೂ ಬೇಸರದ ಸಂಗತಿ. ರಾಷ್ಟ್ರಪತಿ ಹುದ್ದೆಯನ್ನು ರಬ್ಬರ್ ಸ್ಟಾಂಪ್‌ಗೆ ಹೋಲಿಸಿರುವುದು ಸರಿಯಾಗಿಯೇ ಇದೆ. ಒಬ್ಬ ಅಮಾಯಕ ಬಡ ಕುಟುಂಬದ ಯುವತಿ, ವಿಐಪಿಗೆ ''ವಿಶೇಷ ಆತಿಥ್ಯ'' ನೀಡಲು ಒಲ್ಲೆ ಎಂದ ಕಾರಣಕ್ಕೆ ಆಕೆಯನ್ನು ಕೊಂದು ಬಿಸಾಕುವ ಧೈರ್ಯ ಎಲ್ಲಿಂದ ಬಂತು? ರಾಜಕೀಯ ನಂಟು ಇದ್ದರೆ ಏನು ಬೇಕಾದರೂ ಮಾಡಿ ಬಚಾವ್ ಆಗಬಹುದು ಎಂಬ ಭಂಡತನ ಅಲ್ಲವೇ? ಅಷ್ಟೇ ಅಲ್ಲ ಜೈಲಿಗೆ ಹೋದರೂ ಜಾಮೀನಿನ ಮೇಲೆ ಹೊರ ಬರುವ ಅವಕಾಶ ಹೇರಳ. ದೊರೆಯುವ ಅಭೂತಪೂರ್ವ ಸ್ವಾಗತ ಮಾನ, ಮರ್ಯಾದೆಗೂ ಕೊರತೆಯಿಲ್ಲ.

ಮೋದಿಯವರಿಗೆ ನಿರಂತರವಾಗಿ ಸಿಗುತ್ತಿರುವ ಗೆಲುವು ತಮ್ಮ ಪಕ್ಷ, ಸರ್ಕಾರ ಸಾರ್ವಜನಿಕ ನೈತಿಕತೆಗೆ ಸೊಪ್ಪು ಹಾಕದ ಧಾರ್ಷ್ಟ್ಯವನ್ನು ಹುಟ್ಟಿಸಿದೆ. ದೇಶದಲ್ಲಿ ಹೆಣ್ಣುಮಕ್ಕಳ ಸಾಮೂಹಿಕ ಅತ್ಯಾಚಾರ, ಕೊಲೆಯಂತಹ ಕೃತ್ಯಗಳು ಅವೆಷ್ಟೇ ನಡೆದರೂ ಮೌನವೇ ಮೋದಿಯವರ ಉತ್ತರ. ಅದರಲ್ಲೂ ಬಿಜೆಪಿ ಆಡಳಿತವಿರುವ ಉತ್ತರಪ್ರದೇಶ, ರಾಜಸ್ಥಾನ, ಮಧ್ಯಪ್ರದೇಶ, ಬಿಹಾರದಲ್ಲೆಲ್ಲ ನಿರಂತರವಾಗಿ ಹೆಣ್ಣುಮಕ್ಕಳ ಮೇಲೆ ಭೀಕರ ಅತ್ಯಾಚಾರಗಳು, ಹತ್ಯೆಗಳು ನಡೆಯುತ್ತಿವೆ. ಅಂತಹ ಪ್ರಕರಣಗಳ ಬಗ್ಗೆ ಅವರಿಗೆ ಕಿಂಚಿತ್ತೂ ಆಘಾತ ಆಗದಿರುವುದೇ ಅಚ್ಚರಿ.

ಸದಾ ಹಿಂದೂ ಹೆಣ್ಣುಮಕ್ಕಳ ರಕ್ಷಣೆಯ ಬಣ್ಣಬಣ್ಣದ ಮಾತಾಡಿ, ಮಹಿಳೆಯನ್ನು ಮಾತೆ, ದೇವತೆ ಎಂದು ಬಾಯುಪಚಾರ ಮಾಡುವ ಬಿಜೆಪಿ- ಸಂಘಪರಿವಾರದ ಮಂದಿ ಅತಿ ಹೆಚ್ಚು ಲೈಂಗಿಕ ಅಪರಾಧ, ಲೈಂಗಿಕ ಹಗರಣಗಳಲ್ಲಿ ಸುದ್ದಿಯಾಗುತ್ತಿದ್ದಾರೆ. ಅನೇಕ ಬಿಜೆಪಿ ಪದಾಧಿಕಾರಿಗಳೇ ಪೋಕ್ಸೊ ಪ್ರಕರಣದ ಆರೋಪಿಗಳಾಗಿದ್ದಾರೆ. ದೆಹಲಿಯಲ್ಲಿ ಅ.10ರಂದು ನಡೆದ ಸಿಜೆಪಿ ಪ್ರತಿಭಟನೆಯಲ್ಲಿ ಕೇಸರಿ ಶಾಲು ಹಾಕಿಕೊಂಡು ಬಂದ ಬಿಜೆಪಿ ಬೆಂಬಲಿಗರು ಹೆಣ್ಣುಮಕ್ಕಳನ್ನು ನೆಲಕ್ಕೆ ಕೆಡವಿ, ಅವರ ಬಟ್ಟೆ ಹರಿದು ಥಳಿಸಿದ್ದರು. ಆ ಪ್ರಕರಣದಲ್ಲಿ ಬಂಧಿತರಾದ ಮೂವರಿಗೆ ಒಂದೇ ದಿನದಲ್ಲಿ ಜಾಮೀನು ಸಿಕ್ಕಿದೆ. ಅಷ್ಟೇ ಅಲ್ಲ ಅವರು ಪೊಲೀಸ್ ಕಸ್ಟಡಿಯಿಂದ ಹೊರಬಂದಾಗ ಬಿಜೆಪಿ ಮುಖಂಡರು ಹೂವಿನ ಹಾರ ಹಾಕಿ ಸನ್ಮಾನಿಸಿದ್ದಾರೆ.

ಬಿಲ್ಕಿಸ್ ಬಾನೋ ಅತ್ಯಾಚಾರ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ ಮೇಲ್ವರ್ಗದ ಅಪರಾಧಿಗಳನ್ನು 75 ನೇ ಸ್ವಾತಂತ್ರ್ಯ ಸಂಭ್ರಮದ ಸಮಯದಲ್ಲಿ ಸನ್ನಡತೆಯ ನೆಪವೊಡ್ಡಿ ಬಿಡುಗಡೆ ಮಾಡಿತ್ತು ಬೇಟಿ ಬಚಾವೊ ಎಂಬ ಹುಸಿ ಕಾಳಜಿ ತೋರುವ ಮೋದಿಯವರ ಡಬಲ್ ಎಂಜಿನ್ ಸರ್ಕಾರ. ರೇಪಿಸ್ಟ್‌ಗಳ ಕುಟುಂಬದವರು ಹೂಹಾರ ಹಾಕಿ, ಹಣೆಗೆ ತಿಲಕ ಇಟ್ಟು, ಆರತಿ ಬೆಳಗಿ ಸ್ವಾಗತಿಸಿದ್ದರು. ಗೋಧ್ರಾ ಗಲಭೆಯ ಸಮಯದಲ್ಲಿ ನಡೆದ ಮುಸ್ಲಿಂ ಮಹಿಳೆ ಬಿಲ್ಕಿಸ್‌ಳ ಕುಟುಂಬದ ಹತ್ಯಾಕಾಂಡ ಮತ್ತು ಆಗ ಗರ್ಭಿಣಿಯಾಗಿದ್ದ ಆಕೆಯ ಮೇಲೆ ನಡೆದ ರಾಕ್ಷಸರ ಸಾಮೂಹಿಕ ಅತ್ಯಾಚಾರ ಪ್ರಕರಣ ಭಾರತದ ಇತಿಹಾಸದಲ್ಲಿ ಕರಾಳ ಪುಟಗಳಾಗಿ ಶತ ಶತಮಾನಗಳ ಕಾಲ ಉಳಿಯಲಿವೆ. ಮೋದಿಯವರ ಆಡಳಿತದ ಅವಧಿಯಲ್ಲಿ ನಡೆದ ಈ ಕೃತ್ಯ ಮತ್ತು ಆ ನಂತರವೂ ಸರ್ಕಾರ ಮತ್ತು ಪಕ್ಷ ನಡೆದುಕೊಳ್ಳುತ್ತಿರುವ ರೀತಿ, ಹೆಣ್ಣುಮಕ್ಕಳ ಘನತೆಗೆ ಧಕ್ಕೆ ತರುವ ನಡವಳಿಕೆಗಳು ಮೋದಿಯವರ ಕುಯುಕ್ತಿ ಮತ್ತು ಕಪಟತನಕ್ಕೆ ಸಾಕ್ಷಿಯಾಗಿವೆ.

ಅತ್ಯಾಚಾರ, ಲೈಂಗಿಕ ಕಿರುಕುಳ ಪ್ರಕರಣಗಳಲ್ಲಿ ಸಿಲುಕಿಕೊಂಡ ರಾಜಕಾರಣಿಗಳಲ್ಲಿ ಬಹುತೇಕರು ಬಿಜೆಪಿಗರೇ ಆಗಿದ್ದಾರೆ. ಆ ಬಗ್ಗೆ ಪಕ್ಷದ ಹಿರಿಯರು ಆತಂಕ ವ್ಯಕ್ತಪಡಿಸಿರುವ, ಆರೆಸ್ಸೆಸ್‌ನ ಮುಖಂಡರು ಬುದ್ಧಿಮಾತು ಹೇಳಿದ ಉದಾಹರಣೆ ಇಲ್ಲವೇ ಇಲ್ಲ. ಅಷ್ಟೇ ಅಲ್ಲ ಸೋಷಿಯಲ್ ಮೀಡಿಯಾದಲ್ಲಿ ಹೆಣ್ಣುಮಕ್ಕಳ ಚಾರಿತ್ರ್ಯ ಹರಣ ಮಾಡುವುದು, ಬಿಜೆಪಿಯನ್ನು ಪ್ರಶ್ನಿಸಿದರೆ ಸಾಕು, ಸೋಷಿಯಲ್ ಮೀಡಿಯಾಗಳಲ್ಲಿ ಬಿಜೆಪಿ ಟ್ರೋಲ್ ಪಡೆ ಚುರುಕಾಗುತ್ತದೆ. ಅವರ ಹುಟ್ಟಿನ ಮೂಲದ ಬಗ್ಗೆ ಕೀಳು ಮಟ್ಟದ ಟೀಕೆ ಮಾಡುವುದು, ತಿರುಚಿದ ಫೋಟೋ, ವಿಡಿಯೋ ಹಂಚುವುದು, ಅಶ್ಲೀಲ ಪದ ಬಳಕೆ ಮಾಡುವುದು ಎಗ್ಗಿಲ್ಲದೇ ನಡೆಯುತ್ತಿದೆ. ಸಿಜೆಪಿ ಪ್ರತಿಭಟನೆಯಲ್ಲಿ ಭಾಗಿಯಾದ ಹೆಣ್ಣುಮಕ್ಕಳಿಗೆ ರೇಪ್ ಬೆದರಿಕೆಗಳು ಬಂದಿರುವುದು ಈ ಮಾತಿಗೆ ತಾಜಾ ಉದಾಹರಣೆಗಳು.

ಅಕ್ಟೋಬರ್ 12ರಂದು ರಾಷ್ಟ್ರಪತಿ ಭವನ ಪ್ರಕಟಿಸಿರುವ ದುಶ್ಯಂತ್ ಕುಮಾರ್ ಗೌತಮ್ ಅವರ ರಾಜ್ಯಪಾಲ ನೇಮಕಾತಿಯನ್ನು ತಕ್ಷಣವೇ ಹಿಂಪಡೆಯದಿದ್ದರೆ ದೇಶವ್ಯಾಪಿ ಉಗ್ರ ಪ್ರತಿಭಟನೆ ನಡೆಸುವುದಾಗಿ ಅಂಕಿತಾ ಕುಟುಂಬ ಎಚ್ಚರಿಕೆ ನೀಡಿದೆ. ತಮ್ಮ ಮಗಳ ಸಾವಿಗೆ ಕಾರಣರಾದ ಪ್ರಭಾವಿಗಳಿಗೆ ಶಿಕ್ಷೆಯಾಗುವವರೆಗೆ ಆಮರಣಾಂತ ಉಪವಾಸ ಸತ್ಯಾಗ್ರಹ ನಡೆಸುವುದಾಗಿ ತಾಯಿ ಸೋನಿ ದೇವಿ ಹೇಳಿದ್ದಾರೆ.

ಅಂಕಿತಾ ಭಂಡಾರಿ ಹತ್ಯೆ ಪ್ರಕರಣದಲ್ಲಿ ವಿಐಪಿ ಪಾತ್ರದ ಕುರಿತು ಸಿಬಿಐ ತನಿಖೆ ಇನ್ನೂ ಪೂರ್ಣಗೊಳ್ಳದೆ ಇರುವಾಗಲೇ, ಕುಟುಂಬಸ್ಥರಿಂದ ನೇರವಾಗಿ ಆರೋಪ ಎದುರಿಸುತ್ತಿರುವ ದುಶ್ಯಂತ್ ಕುಮಾರ್ ಗೌತಮ್ ಅವರನ್ನು ರಾಜ್ಯಪಾಲರನ್ನಾಗಿ ನೇಮಿಸಿರುವ ಪ್ರಧಾನಿ ನರೇಂದ್ರ ಮೋದಿ ಮತ್ತು ಅಮಿತ್ ಶಾ ಅವರ ನಡೆಯ ಹಿಂದೆ ದೊಡ್ಡ ರಾಜಕೀಯ ಹುನ್ನಾರವಿದೆ ಎಂಬ ಟೀಕೆಗಳು ವ್ಯಕ್ತವಾಗಿವೆ. ಸಿಬಿಐ ತನಿಖೆ ಮುಗಿಯುವವರೆಗೆ ಗೌತಮ್ ಅವರ ನೇಮಕಾತಿಗೆ ತಡೆ ನೀಡಬೇಕು ಎಂದು ಪೋಷಕರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಮನವಿ ಮಾಡಿದ್ದರೂ ಪರಿಗಣಿಸಿಲ್ಲ. ಈಗ ಆ ಕುಟುಂಬ ಪ್ರತಿಭಟನೆಯ ಎಚ್ಚರಿಕೆ ನೀಡಿದೆ. ಇದನ್ನು ರಾಷ್ಟ್ರಪತಿ ಮುರ್ಮು ಅವರು ಪರಿಗಣಿಸಿ, ಆದೇಶವನ್ನು ವಾಪಸ್ ಪಡೆಯುವುದು ಸರಿಯಾದ ನಡೆಯಾದೀತು. ಇಲ್ಲದಿದ್ದರೆ ಕೊಲೆ ಪ್ರಕರಣದ ಆರೋಪಿಯೊಬ್ಬನನ್ನು ರಾಜ್ಯಪಾಲನನ್ನಾಗಿ ಮಾಡಿದ ಕಳಂಕವನ್ನು ಮಹಿಳಾ ರಾಷ್ಟ್ರಪತಿ ಶಾಶ್ವತವಾಗಿ ಹೊರಬೇಕಾದೀತು

ಮೋದಿ ಆಡಳಿತದಲ್ಲಿ ಮಾಹಿತಿ ಹಕ್ಕು ಕಾಯ್ದೆಯ 'ಸ್ಥಿತಿ' ಹೇಗಿದೆ? ಅಂಜಲಿ ಭಾರದ್ವಾಜ್ ಏನು ಹೇಳುತ್ತಾರೆ?

ಯಾವುದೇ ಸರ್ಕಾರ ಆಡಳಿತದಲ್ಲಿರಲಿ ಪ್ರಜಾಸತ್ತಾತ್ಮಕ ವ್ಯವಸ್ಥೆಯನ್ನು ಕಾಪಾಡಬೇಕಾದ ಸಂಸ್ಥೆಗಳ ಸ್ವಾಯತ್ತತೆ ಉಳಿಯಬೇಕು. ಅವು ಪಾರದರ್ಶಕವಾಗಿರಬೇಕು. ಪ್ರಜಾಸತ್ತೆಯ ಕಾರ್ಯವೈಖರಿಯನ್ನು ಕುರಿತಂತೆ ಮುಕ್ತ ಚರ್ಚೆ ನಡೆಯುತ್ತಿರಬೇಕು. ಇದು ಸಕ್ರಿಯ, ಅರ್ಥಪೂರ್ಣ ಪ್ರಜಾಸತ್ತೆಯ ಕನಿಷ್ಠ ಅವಶ್ಯಕತೆ. ಹಾಗಾಗಿ ಮಾಹಿತಿ ಹಕ್ಕು ಕಾಯ್ದೆಗೆ ಸಂಬಂಧಿಸಿದಂತೆ ಹೋರಾಡುತ್ತಿರುವ ಅಂಜಲಿ ಭಾರದ್ವಾಜ್ ಎತ್ತಿರುವ ಪ್ರಶ್ನೆಗಳು ಸದ್ಯ ದೇಶ ಎದುರಿಸುತ್ತಿರುವ ಬಿಕ್ಕಟ್ಟಿನ ಪರಿಸ್ಥಿತಿಯನ್ನು ಅರ್ಥ ಮಾಡಿಕೊಳ್ಳಲು ಹಾಗೂ ದೇಶದ ಜನತೆಯನ್ನು ಜಾಗೃತರನ್ನಾಗಿಸಲು ಅತ್ಯಗತ್ಯ.

ಅವರ ವಿಡಿಯೋ ಸಂದರ್ಶನದ ಮುಖ್ಯಾಂಶಗಳು ಇಲ್ಲಿವೆ

ಕುರಿತ ಪ್ರಶ್ನೆ ಮತ್ತು ಚುನಾವಣಾ ಆಯೋಗದ ಅಚ್ಚರಿಯ ಉತ್ತರ

• ಚುನಾವಣಾ ಆಯೋಗವು () ಬಿಹಾರದಿಂದ ಆರಂಭಿಸಿ ದೇಶಾದ್ಯಂತ ಜಾರಿಗೆ ತಂದ ವಿಶೇಷ ತೀವ್ರ ಪರಿಷ್ಕರಣೆ ( ) ಕುರಿತು ಅಂಜಲಿ ಭಾರದ್ವಾಜ್ ಅವರು ಮಾಹಿತಿ ಹಕ್ಕು () ಕಾಯ್ದೆಯಡಿ ಎರಡು ಪ್ರಮುಖ ಪ್ರಶ್ನೆಗಳನ್ನು ಕೇಳಿದ್ದರು.

★ ಸರ್ವೋಚ್ಚ ನ್ಯಾಯಾಲಯದಲ್ಲಿ ಚುನಾವಣಾ ಆಯೋಗವು ''ಸ್ವತಂತ್ರ ಮೌಲ್ಯಮಾಪನದ ( ) ಆಧಾರದ ಮೇಲೆ ಕೈಗೊಳ್ಳಲಾಗಿದೆ'' ಎಂದು ಅಫಿಡವಿಟ್ ಸಲ್ಲಿಸಿತ್ತು. ಆ ಮೌಲ್ಯಮಾಪನ ವರದಿಯ ಪ್ರತಿಯನ್ನು ಒದಗಿಸುವಂತೆ ಅಂಜಲಿಯವರು ಆಯೋಗವನ್ನು ಕೇಳಿದ್ದರು. ಅದಕ್ಕೆ ಉತ್ತರವಾಗಿ ಆಯೋಗವು ''ಅಂತಹ ಯಾವುದೇ ದಾಖಲೆ ಅಸ್ತಿತ್ವದಲ್ಲಿಲ್ಲ'' ( ) ಎಂದು ಉತ್ತರಿಸಿತು.

★ ಜಾರಿಗೆ ತರಲು ಆಯೋಗದಲ್ಲಿ ನಿರ್ಧಾರ ಕೈಗೊಂಡ ಕಡತಗಳು ಮತ್ತು ಕಾಗದಪತ್ರಗಳ ಪ್ರತಿಯನ್ನು ಕೇಳಿದಾಗ, ''ಭೌತಿಕ ರೂಪದಲ್ಲಿ ಯಾವುದೇ ಮಾಹಿತಿ ಲಭ್ಯವಿಲ್ಲ'' ಎಂದು ಪ್ರತಿಕ್ರಿಯೆ ಆಯೋಗದಿಂದ ಬಂದಿದೆ.

★ ಅಂಜಲಿ ಭಾರದ್ವಾಜ್ ಅವರು ಸಲ್ಲಿಸಿದ ಮೊದಲ ಮೇಲ್ಮನವಿಗೆ ಚುನಾವಣಾ ಆಯೋಗದ ಪ್ರಧಾನ ಕಾರ್ಯದರ್ಶಿ ಟಿ.ಸಿ. ಕೋಮ್ ( ) ಅವರು ಲಿಖಿತ ಉತ್ತರ ನೀಡಿ, ''ದೇಶಾದ್ಯಂತ ನಡೆಸುವ ಯಾವುದೇ ನಿರ್ಧಾರವನ್ನು ಭಾರತೀಯ ಚುನಾವಣಾ ಆಯೋಗ ತೆಗೆದುಕೊಂಡಿಲ್ಲ'' ಎಂದು ಸ್ಪಷ್ಟವಾಗಿ ತಿಳಿಸಿದರು.

ಸಾಂವಿಧಾನಿಕ ಪ್ರಶ್ನೆಗಳು ಮತ್ತು ಸ್ವಾಯತ್ತತೆಯ ಬಿಕ್ಕಟ್ಟು

★ ಭಾರತದ ಸಂವಿಧಾನದ 324ನೇ ವಿಧಿಯ ಪ್ರಕಾರ ಮತದಾರರ ಪಟ್ಟಿ ಸಿದ್ಧಪಡಿಸುವ ಮತ್ತು ಪರಿಷ್ಕರಿಸುವ ಅಧಿಕಾರ ಕೇವಲ ಚುನಾವಣಾ ಆಯೋಗಕ್ಕೆ ಮಾತ್ರ ಇದೆ.

★ ಸ್ವತಃ ಆಯೋಗವೇ ''ನಾವು ಈ ನಿರ್ಧಾರ ಕೈಗೊಂಡಿಲ್ಲ'' ಎಂದು ಲಿಖಿತವಾಗಿ ಹೇಳಿರುವಾಗ, ಈ ನಿರ್ಧಾರವನ್ನು ಪ್ರಧಾನಿ ಕಾರ್ಯಾಲಯ () ಅಥವಾ ಗೃಹ ಸಚಿವಾಲಯ () ತೆಗೆದುಕೊಂಡಿತೇ ಎಂಬ ಗಂಭೀರ ಸಾಂವಿಧಾನಿಕ ಪ್ರಶ್ನೆ ಏಳುತ್ತದೆ.

★ 100 ಕೋಟಿಗೂ ಹೆಚ್ಚು ಮತದಾರರ ಮೇಲೆ ಪರಿಣಾಮ



ಬೀರುವ ಇಂತಹ ಬೃಹತ್ ಪ್ರಕ್ರಿಯೆಗೆ ಸಾರ್ವಜನಿಕರ ಅಥವಾ ರಾಜಕೀಯ ಪಕ್ಷಗಳ ಸಮಾಲೋಚನೆಯಾಗಲಿ ನಡೆದಿಲ್ಲ.

★ ಈ ಆರ್‌ಟಿಐ ಉತ್ತರವನ್ನು ಆಧಾರವಾಗಿಟ್ಟುಕೊಂಡು ವಿರೋಧ ಪಕ್ಷಗಳು ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದು, ಗೆ ಸಂಬಂಧಿಸಿದ ಎಲ್ಲಾ ಮೂಲ ದಾಖಲೆಗಳನ್ನು ನ್ಯಾಯಾಲಯಕ್ಕೆ ತರಿಸಿಕೊಳ್ಳುವಂತೆ ಒತ್ತಾಯಿಸಿವೆ.

ಫಾರ್ಮ್ 6 (6)ರ ಏಕಪಕ್ಷೀಯ ಬದಲಾವಣೆ

★ ಮತದಾರರ ಪಟ್ಟಿಗೆ ಮರುಸೇರ್ಪಡೆಗೆ ಬಳಸುವ ಫಾರ್ಮ್ 6 ಅನ್ನು ಕೇಂದ್ರ ಸರ್ಕಾರದ ಸಮಾಲೋಚನೆ ಇಲ್ಲದೆ ಮತ್ತು ಸಂಸತ್ತಿನ ಮುಂದೆ ಮಂಡಿಸದೆ ಚುನಾವಣಾ ಆಯೋಗವು ಏಕಪಕ್ಷೀಯವಾಗಿ ಬದಲಾಯಿಸಿ ಒಂದು ಹೊಸ ಘೋಷಣೆಯನ್ನು () ಸೇರಿಸಿದೆ.

★ ಇಬ್ಬರು ಚುನಾವಣಾ ಆಯುಕ್ತರು ಈ ಬದಲಾವಣೆಗೆ ಆಕ್ಷೇಪ ವ್ಯಕ್ತಪಡಿಸಿದ್ದರೂ, ಮುಖ್ಯ ಚುನಾವಣಾ ಆಯುಕ್ತರು ಅದನ್ನು ಜಾರಿಗೆ ತಂದಿದ್ದಾರೆ ಎಂದು ಪತ್ರಿಕಾ ವರದಿಗಳನ್ನು ಉಲ್ಲೇಖಿಸಿ ಅಂಜಲಿ ವಿವರಿಸುತ್ತಾರೆ.

ಮಾಹಿತಿ ಹಕ್ಕು () ಕಾಯ್ದೆಯ ಇಂದಿನ ದುಸ್ಥಿತಿ

★ 2005ರಲ್ಲಿ ಜಾರಿಗೆ ಬಂದ ಕಾಯ್ದೆಯು ಸಾಮಾನ್ಯ ನಾಗರಿಕರಿಗೆ ಮೂಲಸೌಕರ್ಯ, ರೇಷನ್, ಪಿಂಚಣಿಗಳಿಂದ ಹಿಡಿದು ಆದರ್ಶ್ ಹಗರಣ, ವ್ಯಾಪಂ ಹಗರಣ ಮತ್ತು ಎಲೆಕ್ಟೋರಲ್ ಬಾಂಡ್‌ಗಳಂತಹ ದೊಡ್ಡ ಭ್ರಷ್ಟಾಚಾರಗಳನ್ನು ಬಯಲಿಗೆಳೆಯಲು ಸಾಧ್ಯವಾಗಿತ್ತು.

★ ಆದರೆ ಕಳೆದ 8-10 ವರ್ಷಗಳಲ್ಲಿ ಕೇಂದ್ರ ಸರ್ಕಾರವು ತಿದ್ದುಪಡಿಗಳ ಮೂಲಕ ಮಾಹಿತಿ ಆಯುಕ್ತರ ವೇತನ, ಅಧಿಕಾರಾವಧಿ ಮತ್ತು ಸೇವಾ ಷರತ್ತುಗಳನ್ನು ತನ್ನ ನಿಯಂತ್ರಣಕ್ಕೆ ತೆಗೆದುಕೊಂಡು ಆಯೋಗದ ಸ್ವಾಯತ್ತತೆಯನ್ನು ಕುಗ್ಗಿಸಿದೆ.

★ ಡಿಜಿಟಲ್ ಡೇಟಾ ಪ್ರೊಟೆಕ್ಷನ್ ಕಾಯ್ದೆ ಮತ್ತು ಸೆಕ್ಷನ್ 8(1)() ಅಡಿಯಲ್ಲಿ ವೈಯಕ್ತಿಕ ಮಾಹಿತಿ ಎಂಬ ಸಬೂಬು ನೀಡಿ, ಸರ್ಕಾರಿ ಕಾಮಗಾರಿಗಳ ಅಧಿಕಾರಿಗಳು ಮತ್ತು ಗುತ್ತಿಗೆದಾರರ ಹೆಸರುಗಳನ್ನು ಬಹಿರಂಗಪಡಿಸಲು ನಿರಾಕರಿಸಲಾಗುತ್ತಿದೆ (ಉದಾಹರಣೆಗೆ ಬಿಹಾರದಲ್ಲಿ ಪದೇ ಪದೇ ಕುಸಿದ ಸೇತುವೆಗಳ ಗುತ್ತಿಗೆದಾರರ ವಿವರಗಳು).

★ ಎಲೆಕ್ಟೋರಲ್ ಬಾಂಡ್‌ಗಳು ಮತ್ತು ನಂತಹ ನಿಧಿಗಳನ್ನು ಆರ್‌ಟಿಐ ವ್ಯಾಪ್ತಿಯಿಂದ ಹೊರಗಿಡಲಾಗಿದೆ.

ಸರ್ಕಾರದ ಇಬ್ಬಗೆಯ ನೀತಿ: ಖಾಸಗಿತನ () ಕಣ್ಗಾವಲು ()

★ ನಾಗರಿಕರು ಸಾರ್ವಜನಿಕ ಅಧಿಕಾರಿಗಳ ಆಸ್ತಿ-ಪಾಸ್ತಿ ಅಥವಾ ಚುನಾವಣಾ ಆಯುಕ್ತರ ಪ್ರವಾಸ ವೆಚ್ಚಗಳ ವಿವರ ಕೇಳಿದರೆ, ಸರ್ಕಾರವು ''ಖಾಸಗಿತನಕ್ಕೆ ಧಕ್ಕೆ'' ಎಂದು ಹೇಳಿ ಮಾಹಿತಿ ನಿರಾಕರಿಸುತ್ತದೆ.

★ ಆದರೆ ಬೀದಿಯಲ್ಲಿ ಪ್ರತಿಭಟನೆ ನಡೆಸುವ ಪ್ರಜೆಗಳ ವಿರುದ್ಧ ಮುಖ ಗುರುತಿಸುವ ತಂತ್ರಜ್ಞಾನ ( ), ಫೋನ್ ಟ್ಯಾಪಿಂಗ್ ಮತ್ತು ಸ್ಮಾರ್ಟ್ ಗ್ಲಾಸ್‌ಗಳಂತಹ ತೀವ್ರ ಕಣ್ಗಾವಲು ಸಾಧನಗಳನ್ನು ಬಳಸಿ ಅವರ ಖಾಸಗಿತನವನ್ನು ಮುಕ್ತವಾಗಿ ಉಲ್ಲಂಘಿಸುತ್ತದೆ.

★ ದೆಹಲಿಯಲ್ಲಿ ಜಂತರ್ ಮಂತರ್‌ನಂತಹ ಪ್ರಮುಖ ಜಾಗಗಳನ್ನು ಬಿಟ್ಟು ನಗರದ ಹೊರವಲಯದ ಬುರಾರಿ ಅಥವಾ ಸಿಬಿಡಿ ಮೈದಾನಗಳಲ್ಲಿ ಮಾತ್ರ ಪ್ರತಿಭಟನೆ ನಡೆಸಬೇಕೆಂದು ಆದೇಶಿಸುವ ಮೂಲಕ ಜನರ ಪ್ರತಿಭಟನೆಯ ಹಕ್ಕನ್ನು ಹತ್ತಿಕ್ಕಲಾಗುತ್ತಿದೆ.

ಲೋಕಪಾಲ ಸಂಸ್ಥೆಯ ನಿಷ್ಕ್ರಿಯತೆ

★2011-2014ರ ಭ್ರಷ್ಟಾಚಾರ ವಿರೋಧಿ ಜನಾಂದೋಲನದ ಫಲವಾಗಿ ಲೋಕಪಾಲ ಕಾಯ್ದೆ ಜಾರಿಗೆ ಬಂದಿತ್ತು.

★ ಆದರೆ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮೊದಲ 5 ವರ್ಷಗಳ ಕಾಲ ಲೋಕಪಾಲರನ್ನೇ ನೇಮಕ ಮಾಡಲಿಲ್ಲ.

★ 2019ರಲ್ಲಿ ನೇಮಕವಾದಾಗಲೂ ವಿರೋಧ ಪಕ್ಷದ ನಾಯಕರಿಲ್ಲದ ಸಮಿತಿಯ ಮೂಲಕ ಸರ್ಕಾರದ ಆಪ್ತರನ್ನೇ ನೇಮಿಸಲಾಯಿತು.

★ ರಫೇಲ್ ಹಗರಣ ಅಥವಾ ಎಲೆಕ್ಟೋರಲ್ ಬಾಂಡ್‌ಗಳಂತಹ ದೊಡ್ಡ ಆರೋಪಗಳ ತನಿಖೆ ನಡೆಸದೆ, ಕೇವಲ ಕೆಲ ವಿರೋಧ ಪಕ್ಷಗಳ ನಾಯಕರನ್ನು ಮಾತ್ರ ಗುರಿಯಾಗಿಸಿಕೊಂಡು ಲೋಕಪಾಲ ಸಂಸ್ಥೆಯು ಸಂಪೂರ್ಣವಾಗಿ ಹಲ್ಲು ಕಿತ್ತ ಹಾವಿನಂತಾಗಿದೆ ಎಂದು ಅಂಜಲಿ ಭಾರದ್ವಾಜ್ ವಿಶ್ಲೇಷಿಸುತ್ತಾರೆ.

ಅಂತಿಮವಾಗಿ ಸಂವಿಧಾನಬದ್ಧ ಸಂಸ್ಥೆಗಳು ಸ್ವಾಯತ್ತವಾಗಿ, ಪಾರದರ್ಶಕವಾಗಿ ಕಾರ್ಯನಿರ್ವಹಿಸಬೇಕು. ಇಲ್ಲದೇ ಹೋದರೆ ಅದು ಪ್ರಜಾಪ್ರಭುತ್ವಕ್ಕೆ ಅತ್ಯಂತ ಅಪಾಯಕಾರಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ನಟ ಇಮ್ರಾನ್ ಖಾನ್ ಪ್ರತಿಭಟಿಸಿದರೆ ಗಡಿಪಾರು; ಟ್ರಂಪ್ ಪರ ಮೋದಿ ಪ್ರಚಾರ ನಡೆಸಿದರೆ ಶಿಷ್ಟಾಚಾರವೇ?

ಕಾನೂನು ಮತ್ತು ರಾಜತಾಂತ್ರಿಕ ನಿಯಮಗಳು ಎಲ್ಲರಿಗೂ ಒಂದೇ ಆಗಿರಬೇಕು ಹೊರತು ಪ್ರಧಾನಿ ಮೋದಿಯವರ ರಾಜಕೀಯ ಅನುಕೂಲಕ್ಕೆ ತಕ್ಕಂತೆ ಬದಲಾಗಬಾರದು. ವಿದೇಶಿ ಪ್ರಜೆಯೊಬ್ಬ ಭಾರತದ ನೆಲದಲ್ಲಿ ಪ್ರತಿಭಟನೆಯಲ್ಲಿ ಪಾಲ್ಗೊಳ್ಳುವುದು ತಪ್ಪು ಎನ್ನುವುದಾದರೆ, ಭಾರತದ ಪ್ರಧಾನಿಯೊಬ್ಬರು ವಿದೇಶಿ ನೆಲದಲ್ಲಿ ನಿಂತು ಅಲ್ಲಿನ ಚುನಾವಣಾ ಅಭ್ಯರ್ಥಿಯ ಪರವಾಗಿ ಪ್ರಚಾರ ನಡೆಸುವುದು ಅದಕ್ಕಿಂತಲೂ ದೊಡ್ಡ ರಾಜತಾಂತ್ರಿಕ ಅಪರಾಧವಾಗುತ್ತದೆ

ಇದೇ ಅಕ್ಟೋಬರ್ 10ರಂದು ಮುಂಬೈನಲ್ಲಿ ನಡೆದ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಬಾಲಿವುಡ್ ನಟ ಇಮ್ರಾನ್ ಖಾನ್ ಅವರಿಗೆ ಮುಂಬೈ ಪೊಲೀಸರು ದೇಶ ತೊರೆಯುವಂತೆ ನೋಟಿಸ್ ಜಾರಿಗೊಳಿಸಿರುವುದು ರಾಷ್ಟ್ರಮಟ್ಟದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಜನ್ಮತಃ ಅಮೆರಿಕದ ಪೌರತ್ವ ಹೊಂದಿರುವ ನಟ ಇಮ್ರಾನ್ ಖಾನ್ ಅವರು ಭಾರತದ ನೆಲದಲ್ಲಿ ನಡೆದ ಪ್ರತಿಭಟನೆ ಹಾಗೂ ರಾಜಕೀಯ ಸ್ವರೂಪದ ಚಟುವಟಿಕೆಯಲ್ಲಿ ಭಾಗಿಯಾಗಿದ್ದಾರೆ ಎಂಬ ಕಾರಣವನ್ನು ಮುಂದಿಟ್ಟುಕೊಂಡು ಪೊಲೀಸರು ಈ ಕಠಿಣ ಕ್ರಮಕ್ಕೆ ಮುಂದಾಗಿದ್ದಾರೆ. ಭಾರತದಲ್ಲಿ ದಶಕಗಳಿಂದ ನೆಲೆಸಿ, ಇಲ್ಲಿನ ಚಿತ್ರರಂಗದಲ್ಲಿ ಗುರುತಿಸಿಕೊಂಡಿರುವ ಕಲಾವಿದನೊಬ್ಬ ಶಾಂತಿಯುತ ಪ್ರತಿಭಟನೆಯಲ್ಲಿ ಪಾಲ್ಗೊಂಡ ಮಾತ್ರಕ್ಕೆ ಗಡಿಪಾರು ಮಾಡುವ ಬೆದರಿಕೆ ಒಡ್ಡುತ್ತಿರುವ ಪ್ರಭುತ್ವದ ನಡೆ, ಇದೀಗ ಕೇಂದ್ರ ಸರ್ಕಾರ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ದ್ವಿಮುಖ ನೀತಿಯನ್ನು ಪ್ರಶ್ನಿಸುವಂತೆ ಮಾಡಿದೆ.

ಮುಂಬೈ ಪೊಲೀಸರು ಇಮ್ರಾನ್ ಖಾನ್ ಅವರಿಗೆ ನೀಡಿರುವ ನೋಟಿಸ್‌ನಲ್ಲಿ ಭಾರತದ ವಿದೇಶಿಗರ ಕಾಯ್ದೆ-1946 (, 1946) ಹಾಗೂ ವೀಸಾ ನಿಯಮಾವಳಿಗಳನ್ನು ಪ್ರಮುಖವಾಗಿ ಉಲ್ಲೇಖಿಸಲಾಗಿದೆ. ಭಾರತದ ಪೌರತ್ವ ಕಾಯ್ದೆಯಡಿ ಸಾಗರೋತ್ತರ ಭಾರತೀಯ ನಾಗರಿಕ () ಕಾರ್ಡ್ ಹೊಂದಿರುವವರು ಅಥವಾ ವಿದೇಶಿ ಪಾಸ್‌ಪೋರ್ಟ್ ಹೊಂದಿರುವ ಯಾವುದೇ ವ್ಯಕ್ತಿ ಭಾರತದಲ್ಲಿ ಪ್ರವಾಸ, ಉದ್ಯೋಗ ಅಥವಾ ವಾಣಿಜ್ಯ ಚಟುವಟಿಕೆಗಳನ್ನು ನಡೆಸಲು ಅವಕಾಶವಿದೆಯೇ ಹೊರತು, ಇಲ್ಲಿನ ಆಂತರಿಕ ರಾಜಕೀಯ ಚಟುವಟಿಕೆಗಳಲ್ಲಿ, ಸಾರ್ವಜನಿಕ ಪ್ರತಿಭಟನೆಗಳಲ್ಲಿ ಅಥವಾ ಸರ್ಕಾರದ ವಿರುದ್ಧದ ಧರಣಿಗಳಲ್ಲಿ ಭಾಗವಹಿಸುವಂತಿಲ್ಲ ಎಂಬ ನಿಯಮವಿದೆ. ಈ ವೀಸಾ ಷರತ್ತುಗಳನ್ನು ಉಲ್ಲಂಘಿಸಿದರೆ ಅಂತಹ ವಿದೇಶಿ ಪ್ರಜೆಯ ವೀಸಾ ರದ್ದುಪಡಿಸಿ, ಅವರನ್ನು ಕಪ್ಪುಪಟ್ಟಿಗೆ ಸೇರಿಸಿ ದೇಶದಿಂದ ಹೊರಹಾಕುವ ಅಧಿಕಾರ ಸರ್ಕಾರಕ್ಕಿದೆ ಎಂಬ ಕಾನೂನಿನ ಅಸ್ತ್ರವನ್ನು ಇಲ್ಲಿ ಪ್ರಯೋಗಿಸಲಾಗಿದೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಈ ಕಾನೂನನ್ನು ತನ್ನ ರಾಜಕೀಯ ವಿರೋಧಿಗಳನ್ನು ಹಾಗೂ ಭಿನ್ನಮತೀಯರನ್ನು ಹತ್ತಿಕ್ಕಲು ನಿರಂತರವಾಗಿ ಬಳಸಿಕೊಳ್ಳುತ್ತಲೇ ಬಂದಿದೆ. ಈ ಹಿಂದೆ ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ) ವಿರುದ್ಧ ದೇಶಾದ್ಯಂತ ಪ್ರತಿಭಟನೆಗಳು ನಡೆದಾಗ, ಚೆನ್ನೈನ ಐಐಟಿ ಮದ್ರಾಸ್‌ನಲ್ಲಿ ವ್ಯಾಸಂಗ ಮಾಡುತ್ತಿದ್ದ ಜರ್ಮನಿಯ ವಿದ್ಯಾರ್ಥಿ ಜಾಕೋಬ್ ಲಿಂಡೆಂಥಾಲ್ ಮತ್ತು ಕೇರಳದಲ್ಲಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ನಾರ್ವೆ ದೇಶದ ಪ್ರವಾಸಿ ಜಾನ್-ಮೆಟ್ಟೆ ಜೊಹಾನ್ಸನ್ ಅವರನ್ನು ಇದೇ ಕಾನೂನಿನ ಅಡಿಯಲ್ಲಿ ತಕ್ಷಣವೇ ದೇಶ ಬಿಡುವಂತೆ ಸೂಚಿಸಲಾಗಿತ್ತು. ಅಷ್ಟೇ ಅಲ್ಲದೆ, ಮೋದಿ ಸರ್ಕಾರದ ನೀತಿಗಳನ್ನು ಟೀಕಿಸಿದ್ದ ಲೇಖಕ ಆತಿಶ್ ತಸೀರ್ ಸೇರಿದಂತೆ ಹಲವು ಅನಿವಾಸಿ ಭಾರತೀಯರ ಒಸಿಐ ಕಾರ್ಡ್‌ಗಳನ್ನು ರದ್ದುಪಡಿಸುವ ಮೂಲಕ ಸರ್ಕಾರ ತನ್ನ ಅಸಹಿಷ್ಣುತೆಯನ್ನು ಪ್ರದರ್ಶಿಸಿತ್ತು.

ಆದರೆ ಇಲ್ಲಿ ಏಳುವ ಪ್ರಮುಖ ನೈತಿಕ ಮತ್ತು ರಾಜತಾಂತ್ರಿಕ ಪ್ರಶ್ನೆಯೆಂದರೆ, ವಿದೇಶಿ ಪ್ರಜೆಯೊಬ್ಬ ಭಾರತದ ನೆಲದಲ್ಲಿ ಪ್ರತಿಭಟನೆಯಲ್ಲಿ ಭಾಗಿಯಾಗುವುದು ದೇಶದ ಸಾರ್ವಭೌಮತ್ವಕ್ಕೆ ಮತ್ತು ಕಾನೂನಿಗೆ ವಿರುದ್ಧ ಎನ್ನುವುದಾದರೆ, ಭಾರತದ ಪ್ರಧಾನಿಯೊಬ್ಬರು ಮತ್ತೊಂದು ಸಾರ್ವಭೌಮ ದೇಶಕ್ಕೆ ತೆರಳಿ ಅಲ್ಲಿನ ಚುನಾವಣೆಯಲ್ಲಿ ನಿರ್ದಿಷ್ಟ ಅಭ್ಯರ್ಥಿಯ ಪರವಾಗಿ ಬಹಿರಂಗ ಪ್ರಚಾರ ನಡೆಸುವುದು ಯಾವ ಕಾನೂನಿನ ಅಡಿಯಲ್ಲಿ ಸಮ್ಮತ? ತಮ್ಮದೇ ದೇಶದೊಳಗೆ ವಿದೇಶಿಗರಿಗೆ ಕಟ್ಟುನಿಟ್ಟಿನ ರಾಜಕೀಯ ನಿರ್ಬಂಧ ಹೇರುವ ಪ್ರಧಾನಿ ನರೇಂದ್ರ ಮೋದಿ ಅವರು, ಅಮೆರಿಕದ ನೆಲದಲ್ಲಿ ನಿಂತು ಡೊನಾಲ್ಡ್ ಟ್ರಂಪ್ ಪರವಾಗಿ ಚುನಾವಣಾ ಪ್ರಚಾರ ನಡೆಸಿದ್ದು ಜಾಗತಿಕ ರಾಜತಾಂತ್ರಿಕ ಶಿಷ್ಟಾಚಾರಗಳ ಸ್ಪಷ್ಟ ಉಲ್ಲಂಘನೆಯಲ್ಲವೇ ಎಂಬ ಪ್ರಶ್ನೆಗೆ ಮೋದಿ ಸರ್ಕಾರದ ಬಳಿ ಉತ್ತರವಿಲ್ಲ.

2019ರ ಸೆಪ್ಟೆಂಬರ್ 22ರಂದು ಅಮೆರಿಕದ ಟೆಕ್ಸಾಸ್ ರಾಜ್ಯದ ಹೂಸ್ಟನ್ ನಗರದ ಎನ್‌ಆರ್‌ಜಿ ಕ್ರೀಡಾಂಗಣದಲ್ಲಿ ನಡೆದ ಹೌಡಿ ಮೋದಿ (, !) ಕಾರ್ಯಕ್ರಮವನ್ನು ಜಗತ್ತು ಇಂದಿಗೂ ಮರೆತಿಲ್ಲ. ಸುಮಾರು ಐವತ್ತು ಸಾವಿರಕ್ಕೂ ಹೆಚ್ಚು ಅನಿವಾಸಿ ಭಾರತೀಯರು ಮತ್ತು ಅಮೆರಿಕದ ನಾಗರಿಕರು ನೆರೆದಿದ್ದ ಆ ಬೃಹತ್ ವೇದಿಕೆಯಲ್ಲಿ ಅಂದಿನ ಅಮೆರಿಕ ಅಧ್ಯಕ್ಷ ಹಾಗೂ 2020ರ ಅಧ್ಯಕ್ಷೀಯ ಚುನಾವಣೆಯ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರ ಕೈಹಿಡಿದು ನಿಂತಿದ್ದ ಪ್ರಧಾನಿ ಮೋದಿ, ಅಬ್ ಕಿ ಬಾರ್, ಟ್ರಂಪ್ ಸರ್ಕಾರ್ (ಈ ಬಾರಿ ಟ್ರಂಪ್ ಸರ್ಕಾರ) ಎಂದು ಘೋಷಣೆ ಕೂಗಿದ್ದರು. 2014ರಲ್ಲಿ ಭಾರತದ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಬಳಸಿದ್ದ ಅಬ್ ಕಿ ಬಾರ್ ಮೋದಿ ಸರ್ಕಾರ್ ಎಂಬ ಚುನಾವಣಾ ಘೋಷಣೆಯನ್ನೇ ಅಮೆರಿಕದ ನೆಲದಲ್ಲಿ ಟ್ರಂಪ್ ಪರವಾಗಿ ಮೋದಿ ಬಳಸಿದ್ದು ನೇರವಾಗಿ ಮತ್ತೊಂದು ದೇಶದ ಚುನಾವಣಾ ಪ್ರಚಾರದಲ್ಲಿ ಭಾಗಿಯಾದ ಅತ್ಯಂತ ಅಪ್ರಬುದ್ಧ ನಡೆಯಾಗಿತ್ತು.

ಸ್ವಾತಂತ್ರ್ಯಾನಂತರ ಭಾರತದ ವಿದೇಶಾಂಗ ನೀತಿಯು ಜವಾಹರಲಾಲ್ ನೆಹರೂ ಕಾಲದಿಂದ ಹಿಡಿದು ಅಟಲ್ ಬಿಹಾರಿ ವಾಜಪೇಯಿ ಮತ್ತು ಮನಮೋಹನ್ ಸಿಂಗ್ ಅವರ ಕಾಲದವರೆಗೂ ಅತ್ಯಂತ ತಟಸ್ಥ ಹಾಗೂ ಸಮತೋಲಿತ ಹಾದಿಯಲ್ಲಿ ಸಾಗಿಬಂದಿತ್ತು. ಅಮೆರಿಕದಲ್ಲಿ ಡೆಮಾಕ್ರಟಿಕ್ ಪಕ್ಷ ಅಧಿಕಾರದಲ್ಲಿರಲಿ ಅಥವಾ ರಿಪಬ್ಲಿಕನ್ ಪಕ್ಷ ಅಧಿಕಾರದಲ್ಲಿರಲಿ, ಭಾರತದ ಪ್ರಧಾನಿಗಳು ಎರಡೂ ಪಕ್ಷಗಳೊಂದಿಗೆ ಸಮಾನ ಅಂತರ ಮತ್ತು ಸೌಹಾರ್ದ ಸಂಬಂಧವನ್ನು ಕಾಯ್ದುಕೊಳ್ಳುತ್ತಿದ್ದರು. ಆದರೆ ನರೇಂದ್ರ ಮೋದಿ ಅವರು ತಮ್ಮ ವೈಯಕ್ತಿಕ ಪ್ರಚಾರದ ಗೀಳಿಗಾಗಿ ಮತ್ತು ಬಲಪಂಥೀಯ ರಾಜಕೀಯದ ಓಲೈಕೆಗಾಗಿ ಭಾರತದ ದಶಕಗಳ ರಾಜತಾಂತ್ರಿಕ ಪರಂಪರೆಯನ್ನು ಗಾಳಿಗೆ ತೂರಿ, ಅಮೆರಿಕದ ಆಂತರಿಕ ಚುನಾವಣೆಯಲ್ಲಿ ಒಬ್ಬ ಅಭ್ಯರ್ಥಿಯ ಪರವಾಗಿ ವಕಾಲತ್ತು ವಹಿಸುವ ಮೂಲಕ ಭಾರತದ ವಿದೇಶಾಂಗ ನೀತಿಗೆ ಕಪ್ಪುಚುಕ್ಕೆ ಇಟ್ಟರು.

ಮತ್ತೊಂದು ದೇಶದ ಚುನಾವಣೆಯಲ್ಲಿ ವಿದೇಶಿ ನಾಯಕರು ಅಥವಾ ಪ್ರಜೆಗಳು ಹಸ್ತಕ್ಷೇಪ ಮಾಡುವುದರ ಕುರಿತು ಅಮೆರಿಕದ ಕಾನೂನು ಅತ್ಯಂತ ಕಠಿಣವಾಗಿದೆ. ಅಮೆರಿಕದ ಫೆಡರಲ್ ಎಲೆಕ್ಷನ್ ಕ್ಯಾಂಪೇನ್ ಆಕ್ಟ್ (, 52 ... 30121) ಪ್ರಕಾರ, ಯಾವುದೇ ವಿದೇಶಿ ಪ್ರಜೆ ಅಥವಾ ವಿದೇಶಿ ಸರ್ಕಾರದ ಪ್ರತಿನಿಧಿಯು ಅಮೆರಿಕದ ಫೆಡರಲ್, ರಾಜ್ಯ ಅಥವಾ ಸ್ಥಳೀಯ ಚುನಾವಣೆಗಳಲ್ಲಿ ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಹಣಕಾಸಿನ ದೇಣಿಗೆ ನೀಡುವುದು, ವೆಚ್ಚ ಮಾಡುವುದು ಅಥವಾ ಚುನಾವಣೆಯ ಮೇಲೆ ಪ್ರಭಾವ ಬೀರುವಂತಹ ಮೌಲ್ಯಯುತ ನೆರವು ನೀಡುವುದು ಕಾನೂನುಬಾಹಿರ ಮತ್ತು ಶಿಕ್ಷಾರ್ಹ ಅಪರಾಧವಾಗಿದೆ. ಇದಲ್ಲದೆ, 1961ರ ವಿಯೆನ್ನಾ ರಾಜತಾಂತ್ರಿಕ ಸಂಬಂಧಗಳ ಒಪ್ಪಂದದ ( ) 41ನೇ ವಿಧಿಯ ಪ್ರಕಾರ, ಯಾವುದೇ ದೇಶದ ರಾಜತಾಂತ್ರಿಕರು ಅಥವಾ ಪ್ರಭುತ್ವದ ಮುಖ್ಯಸ್ಥರು ಆತಿಥೇಯ ದೇಶದ ಆಂತರಿಕ ರಾಜಕೀಯ ವ್ಯವಹಾರಗಳಲ್ಲಿ ಹಸ್ತಕ್ಷೇಪ ಮಾಡುವಂತಿಲ್ಲ ಎಂಬ ಸ್ಪಷ್ಟ ಅಂತಾರಾಷ್ಟ್ರೀಯ ನಿಯಮವಿದೆ.

ಹಾಗಿದ್ದರೆ ಅಮೆರಿಕದ ನೆಲದಲ್ಲಿ ನಿಂತು ಟ್ರಂಪ್ ಪರ ಪ್ರಚಾರ ಮಾಡಿದ ಪ್ರಧಾನಿ ಮೋದಿ ವಿರುದ್ಧ ಅಮೆರಿಕದ ಕಾನೂನು ಏಕೆ ಕ್ರಮ ಕೈಗೊಳ್ಳಲಿಲ್ಲ ಎಂಬ ಪ್ರಶ್ನೆ ಮೂಡುವುದು ಸಹಜ. ಇದಕ್ಕೆ ಮುಖ್ಯ ಕಾರಣ, ಒಂದು ದೇಶದ ಪ್ರಧಾನಿಯಾಗಿ ಅಧಿಕೃತ ಪ್ರವಾಸ ಕೈಗೊಂಡಾಗ ಅವರಿಗೆ ಅಂತಾರಾಷ್ಟ್ರೀಯ ಕಾನೂನಿನ ಅಡಿಯಲ್ಲಿ ರಾಜತಾಂತ್ರಿಕ ವಿನಾಯಿತಿ ( ) ಇರುತ್ತದೆ. ಅಲ್ಲದೆ, ಹೌಡಿ ಮೋದಿ ಕಾರ್ಯಕ್ರಮವನ್ನು ಅಮೆರಿಕದಲ್ಲಿ ನೋಂದಾಯಿತವಾದ ಟೆಕ್ಸಾಸ್ ಇಂಡಿಯಾ ಫೋರಂ ಎಂಬ ಖಾಸಗಿ ಸಂಸ್ಥೆ ಆಯೋಜಿಸಿದ್ದರಿಂದ ತಾಂತ್ರಿಕವಾಗಿ ಅದನ್ನು ವಿದೇಶಿ ಸರ್ಕಾರದ ಚುನಾವಣಾ ವೆಚ್ಚ ಎಂದು ಪರಿಗಣಿಸಲು ಸಾಧ್ಯವಾಗಲಿಲ್ಲ. ಆದರೆ ಕಾನೂನಿನ ತಾಂತ್ರಿಕ ಕುಣಿಕೆಯಿಂದ ತಪ್ಪಿಸಿಕೊಂಡ ಮಾತ್ರಕ್ಕೆ ಮೋದಿಯವರ ನಡೆ ಸಕ್ರಮವಾಗುವುದಿಲ್ಲ; ಅಂದು ಅಮೆರಿಕದ ಅನೇಕ ಸಂಸದರು ಮತ್ತು ವಿದೇಶಾಂಗ ತಜ್ಞರು ಮೋದಿಯವರ ಈ ನಡೆಯನ್ನು ಅಮೆರಿಕದ ಪ್ರಜಾಪ್ರಭುತ್ವದಲ್ಲಿ ಮಾಡಿದ ಅನಗತ್ಯ ಹಸ್ತಕ್ಷೇಪ ಎಂದೇ ತೀವ್ರವಾಗಿ ಟೀಕಿಸಿದ್ದರು.

ಪ್ರಧಾನಿ ಮೋದಿಯವರ ಟ್ರಂಪ್ ಭಜನೆ ಕೇವಲ ಹೂಸ್ಟನ್ ಸಮಾವೇಶಕ್ಕೆ ಮಾತ್ರ ಸೀಮಿತವಾಗಲಿಲ್ಲ. 2020ರ ಅಮೆರಿಕ ಅಧ್ಯಕ್ಷೀಯ ಚುನಾವಣೆಗೆ ಕೆಲವೇ ತಿಂಗಳುಗಳಿರುವಾಗ, ಅಂದರೆ ಫೆಬ್ರವರಿ 2020ರಲ್ಲಿ ಗುಜರಾತ್‌ನ ಅಹಮದಾಬಾದ್‌ನಲ್ಲಿ ನಮಸ್ತೆ ಟ್ರಂಪ್ ಎಂಬ ಅದ್ದೂರಿ ಕಾರ್ಯಕ್ರಮವನ್ನು ಆಯೋಜಿಸಿ ಭಾರತದ ತೆರಿಗೆದಾರರ ನೂರಾರು ಕೋಟಿ ರೂಪಾಯಿ ಹಣವನ್ನು ವ್ಯಯಿಸಲಾಯಿತು. ಅಮೆರಿಕದಲ್ಲಿರುವ ಭಾರತೀಯ ಮೂಲದ ಮತದಾರರನ್ನು ಟ್ರಂಪ್ ಪರವಾಗಿ ಸೆಳೆಯಲು ಮೋದಿ ಸರ್ಕಾರವೇ ನೇರವಾಗಿ ವೇದಿಕೆ ಕಲ್ಪಿಸಿಕೊಟ್ಟಿತು. ಆದರೆ ಆ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಸೋತು ಜೋ ಬೈಡನ್ ಅಧ್ಯಕ್ಷರಾದಾಗ, ಮೋದಿಯವರ ಈ ದೂರದೃಷ್ಟಿಯಿಲ್ಲದ ಏಕಪಕ್ಷೀಯ ರಾಜಕಾರಣದಿಂದಾಗಿ ಭಾರತವು ರಾಜತಾಂತ್ರಿಕವಾಗಿ ತೀವ್ರ ಮುಜುಗರ ಅನುಭವಿಸಬೇಕಾಯಿತು ಮತ್ತು ಬೈಡನ್ ಆಡಳಿತದೊಂದಿಗೆ ಸಂಬಂಧ ಸುಧಾರಿಸಿಕೊಳ್ಳಲು ಭಾರತದ ವಿದೇಶಾಂಗ ಇಲಾಖೆ ಹರಸಾಹಸ ಪಡಬೇಕಾಯಿತು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR